23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 337 | ನವದೆಹಲಿ | ಬೆಲೆ ₹10 | ಜೂನ್ 11 2026, ಗುರುವಾರ



## ನಿತ್ಯ ಪಂಚಾಂಗ 11.06.2026 ಗುರುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ ಜ್ಯೇಷ್ಠ ಮಾಸ

**ಅಧಿಕ ಜ್ಯೇಷ್ಠ ಬಹುಳ, ಏಕಾದಶಿ, ಅಶ್ವಿನಿ ನಕ್ಷತ್ರ, ಸರ್ವತ್ರ ಏಕಾದಶಿ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ವಾರ | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | ಸ.5.04–6.33 | 12.00–1.30 | 3.00–4.00 |
| ಸೋಮ | ಬೆ.7.20–9.04 | 10.30–12.00 | 1.30–12.00 |
| ಮಂಗಳ | ಮ.3.25–4.59 | 9.00–10.30 | 12.00–1.30 |
| ಬುಧ | ಮ.12.16–1.50 | 7.30–9.00 | 10.30–12.00 |
| ಗುರು | ಮ.1.50–3.29 | 6.00–7.30 | 9.00–10.30 |
| ಶುಕ್ರ | ಬೆ.10.42–12.16 | 3.00–4.30 | 7.30–9.00 |
| ಶನಿ | ಬೆ.9.07–10.41 | 1.30–3.00 | 6.00–7.30 |

## ಹಿರಿಯ ಐಎಎಸ್ ಅಧಿಕಾರಿಗಳ ವರ್ಗಾವಣೆ

**ಬೆಂಗಳೂರು, ಜೂ.10:** ಆಡಳಿತಕ್ಕೆ ಮತ್ತೆ ಮೇಜರ್ ಸರ್ಜರಿ ನೀಡಿರುವ ರಾಜ್ಯ ಸರ್ಕಾರ ಆಯಕಟ್ಟಿನ ಹುದ್ದೆಯಲ್ಲಿದ್ದ ಹಿರಿಯ ಐಎಎಸ್ ಅಧಿಕಾರಿಗಳನ್ನು ವರ್ಗಾವಣೆಗೊಳಿಸಿ ಆದೇಶ ಹೊರಡಿಸಿದೆ.

ವರ್ಗಾವಣೆ ವಿವರ:

- ಡಾ.ಎಂ.ಡಿ. ವೆಂಕಟೇಶ್, ಕಾರ್ಯದರ್ಶಿ, ಯೋಜನೆ ಕಾರ್ಯಕ್ರಮ ಅನುಷ್ಠಾನ ಮತ್ತು ಸಾಂಖ್ಯಿಕ ಇಲಾಖೆ,
- ಡಾ.ಸೆಲ್ವಮಣಿ– ನಿರ್ದೇಶಕರು, ಸ್ವಚ್ಛ ಭಾರತ ಮಿಷನ್,
- ಅಂಜುಂ ಪರ್ವೇಜ್, ಹೆಚ್ಚುವರಿ ಮುಖ್ಯ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ,
- ರಾಜೇಂದ್ರಕುಮಾರ್ ಕಟಾರಿಯ, ಹೆಚ್ಚುವರಿ ಮುಖ್ಯ ಕಾರ್ಯದರ್ಶಿ, ಗೃಹ ಇಲಾಖೆ,
- ಮೋಹನ್‌ರಾಜ್, ಕಾರ್ಯದರ್ಶಿ, ಸಮಾಜಕಲ್ಯಾಣ ಇಲಾಖೆ,
- ಡಾ.ಆರ್. ಶಿವಮಣಿ, ವ್ಯವಸ್ಥಾಪಕ ನಿರ್ದೇಶಕರು ಕೆಎಸ್‌ಆರ್‌ಟಿಸಿ,
- ಡಾ.ಎಂ. ಮಹೇಶ್, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನಗರ ನೀರು ಪೂರೈಕೆ ಮತ್ತು ಜಲಮಂಡಳಿ,
- ಖುಷ್ಬು ಜಿ ಚೌಧರಿ, ಆಯುಕ್ತರು, ಕೈಗಾರಿಕಾ ಅಭಿವೃದ್ಧಿ ಹಾಗೂ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯ ನಿರ್ದೇಶಕಿ.

# ಬೆಂಗಳೂರಿನ ಕಸ ಸಂಸ್ಕರಣೆ ಟೆಂಡರ್‌ನಲ್ಲಿ 39 ಸಾವಿರ ಕೋಟಿ ರೂ. ಹಗರಣ

## ಟೆಂಡರ್‌ನ ಒಟ್ಟು ಮೊತ್ತದಲ್ಲಿ 10 ಸಾವಿರ ಕೋಟಿ ಕಿಕ್‌ಬ್ಯಾಕ್: ಆರ್.ಅಶೋಕ್ ಆರೋಪ

**ಬೆಂಗಳೂರು, ಜೂ.10:** ಕಾಂಗ್ರೆಸ್ ಸರ್ಕಾರ ಬೆಂಗಳೂರಿನಲ್ಲಿ ಕಸ ಸಂಸ್ಕರಣೆ ಮಾಡುವ ನೆಪದಲ್ಲಿ 39,000 ಕೋಟಿ ರೂ. ಹಗರಣ ನಡೆಸಿದೆ. 35 ವರ್ಷಗಳ ಸುದೀರ್ಘ ಅವಧಿಗೆ ಎಂಎಸ್‌ಡಬ್ಲ್ಯು ಸೊಲ್ಯೂಶನ್ಸ್ ಸಂಸ್ಥೆಗೆ ನೀಡುತ್ತಿರುವ ಟೆಂಡರ್‌ನ ಒಟ್ಟು ಮೊತ್ತದಲ್ಲಿ 10,000 ಕೋಟಿ ರೂ. ಕಿಕ್‌ಬ್ಯಾಕ್ ಪಡೆಯಲಾಗಿದೆ ಎಂದು ಪ್ರತಿಪಕ್ಷ ಆರ್. ಅಶೋಕ ಆರೋಪಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಹಿಂದೆ ಬಿಜೆಪಿ ಸರ್ಕಾರವಿದ್ದಾಗ ಸ್ವಚ್ಛತೆಯಲ್ಲಿ ಅತ್ಯುತ್ತಮ ನಗರ ಎಂಬ ಹೆಗ್ಗಳಿಕೆ ಬೆಂಗಳೂರಿಗೆ ಸಿಕ್ಕಿತ್ತು. ಈಗ ಬೆಂಗಳೂರು ಬೆಚ್ಚಿಬೀಳುವ 39,000 ಕೋಟಿ ರೂ. ಹಗರಣವನ್ನು ಕಾಂಗ್ರೆಸ್ ಸರ್ಕಾರ ಕಸದ ಹೆಸರಲ್ಲಿ ಮಾಡಿದೆ. ದೇಶದ ಇತಿಹಾಸದಲ್ಲಿ ಕಸದಲ್ಲಿ ಲೂಟಿ ಮಾಡಿರುವ ಹಗರಣ ಇದೇ ಮೊದಲು. ಇದು ಹೈಕಮಾಂಡ್‌ನ ಕಪ್ಪ–ಕಾಣಿಕೆ ಟೆಂಡರ್ ಆಗಿದೆ. ಪ್ರತಿವರ್ಷ ಬೆಂಗಳೂರಿನಲ್ಲಿ ಕಸ ಸಂಗ್ರಹ ಮತ್ತು ಸಾಗಣೆಗೆ 514 ಕೋಟಿ ರೂ. ಮತ್ತು ಸಂಸ್ಕರಣೆ ಮತ್ತು ವಿಲೇವಾರಿಗೆ 380 ಕೋಟಿ ರೂ. ಖರ್ಚು ಮಾಡಲಾಗುತ್ತಿದೆ. 11,000 ಪೌರಕಾರ್ಮಿಕರಿಗೆ ವರ್ಷಕ್ಕೆ 444 ಕೋಟಿ ರೂ. ಸಂಬಳ ನೀಡಲಾಗುತ್ತಿದೆ. ಎಲ್ಲ ಸೇರಿ ಸೇರಿ ವರ್ಷಕ್ಕೆ ಒಟ್ಟು 1,344 ಕೋಟಿ ರೂ. ಖರ್ಚಾಗುತ್ತದೆ ಎಂದು ತಿಳಿಸಿದರು.

ಜಿಬಿಎನಲ್ಲಿ ಈವರೆಗೆ ರಾಜ್ಯದ ಗುತ್ತಿಗೆದಾರರು ಕೆಲಸ ಮಾಡುತ್ತಿದ್ದರು. ಹೊಸ 39,000 ಕೋಟಿ ರೂ. ಮೊತ್ತದ ಟೆಂಡರ್‌ನ್ನು ದೆಹಲಿಯ ಕಂಪನಿಗೆ ನೀಡಿದ್ದು, ಇದರಲ್ಲಿ 10,000 ಕೋಟಿ ರೂ. ಕಿಕ್‌ಬ್ಯಾಕ್ ಇದೆ. ಸಾಮಾನ್ಯವಾಗಿ



ಪ್ರತಿವರ್ಷ ಟೆಂಡರ್ ಮಾಡುತ್ತಿದ್ದರೆ, ಈ ಬಾರಿ 30 ವರ್ಷ ಹಾಗೂ ಇನ್ನೂ ವಿಸ್ತರಣೆಯ ಅವಕಾಶದ 5 ಸೇರಿ 35 ವರ್ಷಕ್ಕೆ ದೆಹಲಿಯ ಎಂಎಸ್‌ಡಬ್ಲ್ಯು ಸೊಲ್ಯೂಶನ್ಸ್ ಲಿಮಿಟೆಡ್ ಅಥವಾ ರಾಮ್‌ಕಿ ಕಂಪನಿಗೆ ಟೆಂಡರ್ ನೀಡಲಾಗಿದೆ. ಬೆಂಗಳೂರು ಉತ್ತರ ಹಾಗೂ ದಕ್ಷಿಣಕ್ಕೆ ಎರಡು ಪ್ಯಾಕೇಜ್ ಮಾಡಲಾಗಿದೆ. ಇದಕ್ಕೂ ಮುನ್ನ ಸರ್ಕಾರಿ ಸ್ವಾಮ್ಯದ ರೈಟ್ಸ್ ಕಂಪನಿಯಿಂದ ಸಲಹೆ ಪಡೆದು, ಆ ಸಲಹೆಯನ್ನು ಕಸದ ಬುಟ್ಟಿಗೆ ಹಾಕಲಾಗಿದೆ. ಇದರ ಬದಲು ಮಾನ್ಯತೆ ಇಲ್ಲದ ಕಂಪನಿಗೆ ಸಲಹೆಗಾಗಿ ಅವಕಾಶ ನೀಡಲಾಗಿದೆ. ಈಗ ಕಸದ ಟೆಂಡರ್‌ನ್ನು ಎಂಎಸ್‌ಡಬ್ಲ್ಯು ಕಂಪನಿಗೆ ನೀಡಿ, 1,500 ಕೋಟಿ ಸಾಲ ಪಡೆಯಲು ಕೂಡ ಅವಕಾಶ ಕೊಡಲಾಗಿದೆ. ಇದಕ್ಕೆ ಜಮೀನನ್ನು ಕೂಡ ಸರ್ಕಾರದಿಂದಲೇ ನೀಡಲಾಗಿದೆ ಎಂದರು.

**950% ಅಧಿಕ ಶುಲ್ಕ**

ಸದ್ಯ ಪ್ರತಿ ಟನ್‌ಗೆ ಟಿಪ್ಪಿಂಗ್ ಶುಲ್ಕವಾಗಿ 260 ರೂ. ನೀಡಲಾಗುತ್ತಿದೆ. ಹೊಸ ಟೆಂಡರ್‌ನಂತೆ 2,400 ರೂ. ನೀಡುತ್ತಿದ್ದು, 950% ಅಧಿಕವಾಗಿದೆ. ಹಳೇ ವೆಚ್ಚದಲ್ಲೇ ಮುಂದುವರಿಸಿದರೆ 30 ವರ್ಷಕ್ಕೆ 6,117 ಕೋಟಿ ರೂ. ಆಗುತ್ತದೆ. ಹೊಸ ಟೆಂಡರ್‌ನಿಂದ ಈ ಖರ್ಚು 39,437 ಕೋಟಿ ರೂ. ಆಗುತ್ತಿದ್ದು, ಹೆಚ್ಚುವರಿಯಾಗಿ 33,320 ಕೋಟಿ ರೂ. ವೆಚ್ಚವಾಗುತ್ತದೆ. ಟೆಂಡರ್ ಪ್ರಕಾರ, ದಕ್ಷಿಣದ ಪ್ಯಾಕೇಜ್‌ನಲ್ಲಿ 19.43% ಹಾಗೂ ಉತ್ತರದ ಪ್ಯಾಕೇಜ್‌ನಲ್ಲಿ 19.25% ಅಧಿಕ ಮೊತ್ತ ನಮೂದಾಗಿದೆ. ಎರಡೂ ಪ್ಯಾಕೇಜ್ ಸೇರಿ ಒಟ್ಟಾಗಿ 19.33% ಹೆಚ್ಚಿದೆ ಎಂದರು.

ಮೊದಲೆರಡು ಬಾರಿ ಟೆಂಡರ್ ಕರೆದು ವಿಫಲವಾಗಿ ಮೂರನೇ ಬಾರಿಗೆ ದೆಹಲಿಯ ಎಂಎಸ್‌ಡಬ್ಲ್ಯು ಸೊಲ್ಯೂಶನ್ಸ್ ಲಿಮಿಟೆಡ್ ಅಥವಾ ರಾಮ್‌ಕಿ ಕಂಪನಿಗೆ (ಮಾತ್ರ ಸಂಸ್ಥೆ) ನೀಡಲಾಗಿದೆ. ಟೆಂಡರ್ ಪರಿಶೀಲನೆಯನ್ನು ಅಧಿಕಾರಿಗಳ ತಂಡಕ್ಕೆ ನೀಡಿದ್ದರೂ ಅದನ್ನು ಸರಿಯಾಗಿ ಪರಿಶೀಲಿಸಿಲ್ಲ. ಈ ಟೆಂಡರ್ ಪ್ರಕಾರ, ಒಂದು ಟನ್ ಸಂಸ್ಕರಣೆಯ ಖರ್ಚು 430% ಹೆಚ್ಚಲಿದೆ. ಈಗ ಟನ್‌ಗೆ 2,151 ರೂ. ಆಗಿದ್ದರೆ, 30 ವರ್ಷದ ನಂತರ 9,297 ರೂ. ಆಗುತ್ತದೆ. ಕಾನೂನು ಪ್ರಕಾರ ಪತ್ರಿಕೆಗಳಲ್ಲಿ ಜಾಹೀರಾತು ನೀಡಬೇಕಿದ್ದರೂ, ಅದನ್ನು ಮಾಡದೆ ಅಕ್ರಮ ಎಸಗಲಾಗಿದೆ.

**ಆರ್ಥಿಕ ಇಲಾಖೆಯಿಂದ ಎಚ್ಚರಿಕೆ**

ಎರಡೂ ಪ್ಯಾಕೇಜ್‌ಗಳನ್ನು ಒಂದೇ ಕಂಪನಿಗೆ ನೀಡಿರುವುದು, 30 ವರ್ಷಗಳ ದೀರ್ಘ ಅವಧಿ, 5% ಹೆಚ್ಚಳ ಮೊದಲಾದ ಅಂಶಗಳ ಬಗ್ಗೆ ಹಣಕಾಸು ಇಲಾಖೆ ತಕರಾರರು ಎತ್ತಿದೆ. ಅವಧಿಯನ್ನು 10 ವರ್ಷಕ್ಕೆ ಇಳಿಸಿ, ಹೆಚ್ಚಿನ ಮೊತ್ತವನ್ನು 2.5% ಇಳಿಸಬೇಕು, ಇಲ್ಲವಾದರೆ ಜಿಬಿಎಗೆ ಮುಂದೆ ಹೊರೆಯಾಗುತ್ತದೆ ಎಂದು ಸಲಹೆ ನೀಡಲಾಗಿದೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್ ಮುಖ್ಯಮಂತ್ರಿಗೆ ಪತ್ರ ಬರೆದು, ಇದರಲ್ಲಿನ ಲೋಪಗಳನ್ನು ಎತ್ತಿ ತೋರಿಸಿದ್ದಾರೆ ಎಂದರು.

ರಾಮ್‌ಕಿ ಕಂಪನಿ ವಂಚನೆ ಮಾಡಿದೆ, ನಿಯಮಗಳನ್ನು ಉಲ್ಲಂಘಿಸಿದೆ ಎಂದು ವಿಶ್ವಬ್ಯಾಂಕ್ ಹೇಳಿದ್ದು, ಇದನ್ನು ಕಪ್ಪುಪಟ್ಟಿಗೆ ಸೇರಿಸಲಾಗಿದೆ. 2016 ರಲ್ಲಿ ಬಿಬಿಎಂಪಿಯಿಂದಲೇ ರಾಮ್‌ಕಿ ಕಂಪನಿಯ ಗುತ್ತಿಗೆ ರದ್ದು ಮಾಡಲಾಗಿತ್ತು. ಇಷ್ಟಿದ್ದರೂ ಇದೇ ಕಂಪನಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಮಾಜಿ ಸಿಎಂ ಸಿದ್ದರಾಮಯ್ಯನವರ ಕಾಂಗ್ರೆಸ್ ಸರ್ಕಾರ ಟೆಂಡರ್ ನೀಡಿದೆ ಎಂದರು.

ಸಿದ್ದರಾಮಯ್ಯ ರಾಜೀನಾಮೆ ನೀಡುವ ಮುನ್ನ ಇದನ್ನು ಸಂಪುಟಕ್ಕೆ ತಂದು ಅನುಮೋದನೆ ನೀಡಲಾಗಿದೆ. ಇದಕ್ಕಾಗಿ ಸಿದ್ದರಾಮಯ್ಯನವರಿಗೆ ದೆಹಲಿಯಿಂದ ಕರೆ ಬಂದಿತ್ತು. ಸಂಪುಟದಲ್ಲಿ ಸುಮಾರು 10 ಸಚಿವರು ಈ ಬಗ್ಗೆ ಗಲಾಟೆ ಮಾಡಿದ್ದರು. ಬೆಂಗಳೂರು ಚುನಾವಣೆಯಲ್ಲಿ ಇದು ಸಮಸ್ಯೆಯಾಗಲಿದೆ ಎಂದು ಸಚಿವರು ಹೇಳಿದಾಗ, 'ಇದು ಮೇಲಿನಿಂದ ಬಂದ ಸೂಚನೆ'ಎಂದು ಸಿದ್ದರಾಮಯ್ಯ ಹೇಳಿದ್ದರು ಎಂದರು.

ಮಾಜಿ ಸಿಎಂ ಸಿದ್ದರಾಮಯ್ಯ ಟೆಂಡರ್ ಪರಿಶೀಲನೆಗೆ ಅಪರ ಮುಖ್ಯ ಕಾರ್ಯದರ್ಶಿ ಉಮಾ ಮಹದೇವನ್ ನೇತೃತ್ವದ ಸಮಿತಿ ರಚಿಸಿದರೆ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅದನ್ನು ರದ್ದು ಮಾಡಿ, ಅಂಜುಮ್ ಪರ್ವೇಜ್ ಹಾಗೂ ಜಾಫರ್ ನೇತೃತ್ವದ ಸಮಿತಿ ರಚಿಸಿ ಕೇವಲ ಏಳು ದಿನಗಳ ಕಾಲಾವಕಾಶ ನೀಡಿದ್ದಾರೆ.

ಕಸದಲ್ಲೂ ಕಾಸು ತೆಗೆಯುವ ಕೆಲಸವನ್ನು ಕಾಂಗ್ರೆಸ್ ಮಾಡಿದ್ದು, ಅಕ್ರಮದ ವಾಸನೆ ಹರಡಿದೆ ಎಂದರು.

### ಬಿಜೆಪಿ ನಿಯೋಗದಿಂದ ಲೋಕಾಯುಕ್ತರಿಗೆ ದೂರು, ಹಗರಣದ ತನಿಖೆಗೆ ಒತ್ತಾಯ

**ಮಹಾನಗರ ಪಾಲಿಕೆ ವ್ಯಾಪ್ತಿಯ ಕಸದ ಟೆಂಡರ್‌ನಲ್ಲಿ ಕೋಟ್ಯಂತರ ರೂಪಾಯಿ ಅವ್ಯವಹಾರ ನಡೆದಿದೆ ಎಂದು ಆರೋಪಿಸಿ ಬಿಜೆಪಿ ನಾಯಕರ ನಿಯೋಗವು ಲೋಕಾಯುಕ್ತರಿಗೆ ಅಧಿಕೃತವಾಗಿ ದೂರು ಸಲ್ಲಿಸಿದೆ.**

**ವಿಧಾನಸಭೆ ವಿರೋಧ ಪಕ್ಷದ ನಾಯಕರಾದ ಆರ್. ಅಶೋಕ್ ಹಾಗೂ ವಿಧಾನ ಪರಿಷತ್ತಿನ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ನೇತೃತ್ವದಲ್ಲಿ ಕಚೇರಿಗೆ ಭೇಟಿ ನೀಡಿ, ಈ ಹಗರಣದ ಕುರಿತು ಸಮಗ್ರ ತನಿಖೆ ನಡೆಸಬೇಕೆಂದು ಒತ್ತಾಯಿಸಲಾಗಿದೆ. ಸರ್ಕಾರದ ವಿರುದ್ಧ ಸಾಕ್ಷ್ಯಾಧಾರ ಕಲೆಹಾಕಿರುವ ಬಿಜೆಪಿ ತಂಡವು, ಕಸ ವಿಲೇವಾರಿ ಗುತ್ತಿಗೆ ನೀಡಿಕೆಯಲ್ಲಿ ನಡೆದಿರುವ ಪಾರದರ್ಶಕತೆಯ ಕೊರತೆ ಮತ್ತು ಆರ್ಥಿಕ ನಷ್ಟದ ಬಗ್ಗೆ ಲೋಕಾಯುಕ್ತ ಅಧಿಕಾರಿಗಳಿಗೆ ಮನವರಿಕೆ ಮಾಡಿಕೊಟ್ಟಿದೆ ಎಂದು ಮೂಲಗಳು ತಿಳಿಸಿವೆ.**

## ಜಾಗತಿಕ ಬಿಕ್ಕಟ್ಟಿನ ನಡುವೆ ದೇಶವನ್ನು ಮುನ್ನಡೆಸುವ ಶಕ್ತಿ ಮೋದಿಗೆ ಇದೆ



**ಗದಗ, ಜೂ.10,** ಜಾಗತಿಕ ಬಿಕ್ಕಟ್ಟಿನಿಂದ ಭಾರತಕ್ಕೆ ಯಾವುದೇ ತೊಂದರೆಯಾಗದಂತೆ ಮುನ್ನಡೆಸುವಂಥ ಶಕ್ತಿ ಪ್ರಧಾನಿ ನರೇಂದ್ರ ಮೋದಿಯವರಿಗೆ ಮಾತ್ರ ಇದೆ. 2047ರಲ್ಲಿ ಆತನಿರ್ಭರ ಭಾರತ, ವಿಕಸಿತ ಭಾರತ ಆಗಲು ಅವರ ಅವಶ್ಯಕತೆ ಬಹಳ ಇದೆ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ನರೇಂದ್ರ ಮೋದಿ ಅವರು ಅತಿ ದೀರ್ಘಾವಧಿ ಚುನಾಯಿತ ಪ್ರಧಾನಿ ಎಂಬ ಹೆಗ್ಗಳಿಕೆಗೆ ಪಾತ್ರರಾದ ಹಿನ್ನೆಲೆಯಲ್ಲಿ ಗದಗ ನಗರದ ವೀರನಾರಾಯಣ ದೇವಸ್ಥಾನದಲ್ಲಿ ಬಿಜೆಪಿ ಏರ್ಪಡಿಸಿದ್ದ ವಿಶೇಷ ಪೂಜೆ ಕೈಂಕರ್ಯದಲ್ಲಿ ಪಾಲ್ಗೊಂಡು ನಂತರ ಅವರು ಮಾತನಾಡಿ, ಇಂದು ನಾವು ಯಾಕೆ ದೇವರಲ್ಲಿ ಪ್ರಾರ್ಥನೆ ಮಾಡುತ್ತಿದ್ದೇವೆ ಎಂದರೆ ಜಗತ್ತು ಅತ್ಯಂತ ಸಂಕೀರ್ಣ ಕಾಲದಲ್ಲಿದೆ. ಜಾಗತಿಕ ಬಿಕ್ಕಟ್ಟಿದೆ. ಇದರಿಂದ ಭಾರತಕ್ಕೆ ಯಾವುದೇ ರೀತಿಯ ತೊಂದರೆಯಾಗದಂತೆ ಮುನ್ನಡೆಸುವಂತ ಶಕ್ತಿ ನರೇಂದ್ರಮೋದಿಯವರಿಗಿದೆ. ದೇಶಕ್ಕೆ ಅವರ ಅವಶ್ಯಕತೆ ಬಹಳ ಇದೆ. ಹೀಗಾಗಿ ದೇವರಲ್ಲಿ ಪ್ರಾರ್ಥನೆ ಮಾಡಿದ್ದೇವೆ ಎಂದರು.

ದೇಶದಲ್ಲಿ ಎಲ್ಲದಕ್ಕೂ ಕಾನೂನಿನಲ್ಲಿ ಅವಕಾಶ ಇದೆ. ಆರ್‌ಎಸ್‌ಎಸ್ ಇಡಿ ಜಗತ್ತಿನಲ್ಲಿಯೇ ಅತಿದೊಡ್ಡ ಸಂಸ್ಥೆ ಮತ್ತು ಜನಸೇವೆಯಲ್ಲಿ ಶ್ರೇಷ್ಠ ಕೆಲಸ ಮಾಡುತ್ತ ಬಂದಿದೆ. ಹೀಗಾಗಿ ಆಗಾಗ ಕೆಲವರು ಈ ರೀತಿಯ ಮಾತುಗಳನ್ನು ಆಡುತ್ತಾರೆ. ಆರ್‌ಎಸ್‌ಎಸ್ ಜನ ಸೇವೆಯಲ್ಲಿ ಮುಂದುವರೆಯುತ್ತದೆ. ಅದರ ಮಾರ್ಗದರ್ಶನದಲ್ಲಿ ನಮ್ಮ ರಾಜಕೀಯ ತತ್ವ ಹಾಗೂ ಮೌಲ್ಯಗಳು ಬಂದಿವೆ ಎಂದು ಹೇಳಿದರು.ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿಯ ಇಬ್ಬರೂ ಅಭ್ಯರ್ಥಿಗಳು ಗೆಲ್ಲುವುದು ನಿಶ್ಚಿತ ನಮ್ಮಹೆಚ್ಚುವರಿ ಮತಗಳನ್ನು ನಮ್ಮ ಮೈತ್ರಿ ಪಕ್ಷ ಜೆಡಿಎಸ್ ಹಾಗೂ ಬಿಜೆಪಿ ನಾಯಕರು ಕುಳಿತುಕೊಂಡು ಯಾವ ರೀತಿ ಯಾರಿಗೆ ಏನು ಕೊಡಬೇಕೆಂದು ತೀರ್ಮಾನ ಮಾಡುತ್ತಾರೆ. ಬಿಜೆಪಿಯ ಇಬ್ಬರು ಮತ್ತು ಮೈತ್ರಿ ಅಭ್ಯರ್ಥಿ ಕೂಡ ಗೆಲ್ಲುತ್ತಾರೆ ಎನ್ನುವ ವಿಶ್ವಾಸ ಇದೆ ಎಂದು ಹೇಳಿದರು.



ಗ್ರಾಹಕರಿಗೆ ಗುಣಮಟ್ಟದ ದಿನಸಿ, ತಾಜಾ ಹಣ್ಣು–ತರಕಾರಿಗಳು ಹಾಗೂ ದಿನಬಳಕೆ ವಸ್ತುಗಳನ್ನು ಒಂದೇ ಸೂರಿನಡಿ ಒದಗಿಸುವ ಉದ್ದೇಶದಿಂದ ಸ್ಮಾರ್ಟ್ ಕ್ವಿಕ್ ಇ–ಕಾಮರ್ಸ್ ಸಂಸ್ಥೆಯ ಗ್ರಾಹಕಸ್ನೇಹಿ ಬೃಹತ್ ಮಳಿಗೆ ನಿಯೋ ಫ್ರೆಶ್‌ನ 6ನೇ ಶಾಖೆಗೆ ನಂಜಾವಧೂತ ಮಹಾಸ್ವಾಮೀಜಿ ಬೆಂಗಳೂರಿನ ಕೂಡ್ಲು ಗ್ರಾಮದಲ್ಲಿ ಬುಧವಾರ ಚಾಲನೆ ನೀಡಿದರು.

# ಪ್ರಧಾನಮಂತ್ರಿಗಳಾಗಿ 4399 ದಿನ ನಿರಂತರ ಸೇವೆ: ಬಿ.ವೈ.ವಿಜಯೇಂದ್ರ ಮೆಚ್ಚುಗೆ



**ಬೆಂಗಳೂರು, ಜೂ.10:** ದೇಶದ ಹೆಮ್ಮೆಯ ಪ್ರಧಾನಮಂತ್ರಿಗಳಾದ ನರೇಂದ್ರ ಮೋದಿ ಅವರು 2014ರ ಮೇ ತಿಂಗಳಿನಲ್ಲಿ ಪ್ರಮಾಣವಚನ ಸ್ವೀಕಾರ ಮಾಡಿ, ಸತತ 3 ಬಾರಿಗೆ ಕೇಂದ್ರದಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಸರಕಾರವನ್ನು ಅಧಿಕಾರಕ್ಕೆ ತಂದಿದ್ದಾರೆ. 4399 ದಿನಗಳು ನಿರಂತರವಾಗಿ ಪ್ರಧಾನಿಯಾಗಿ, ದೇಶದ ಪ್ರಧಾನ ಸೇವಕ ಎಂಬ ಭಾವನೆಯಿಂದ ಭಾರತವನ್ನು ಮುನ್ನಡೆಸುತ್ತಿದ್ದಾರೆ. ಇದೊಂದು ದಾಖಲೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ವಿಶ್ಲೇಷಿಸಿದರು.

ಸುದ್ದಿಗಾರರ ಜೊತೆ ಮಾತನಾಡಿದ ಅವರು, ಪ್ರಜಾಸತ್ತಾತ್ಮಕವಾಗಿ ಚುನಾಯಿತ ಪ್ರಧಾನಿಯಾಗಿ ಅವರು ಸುದೀರ್ಘ ಸೇವೆ ಸಲ್ಲಿಸಿದ್ದಾರೆ ಎಂದು ಮೆಚ್ಚುಗೆ ಸೂಚಿಸಿದರು. ಪ್ರತಿಯೊಬ್ಬ ಭಾರತೀಯರು ಇದು ಹೆಮ್ಮೆ ಪಡುವ ವಿಚಾರ ಎಂದು ನುಡಿದರು.

ಪ್ರಧಾನಿ ನರೇಂದ್ರ ಮೋದಿ ಅವರ ವಿಕಸಿತ ಭಾರತ, ಆತ್ಮನಿರ್ಭರ ಭಾರತದ ಕನಸು ಈಡೇರಲಿ ಎಂದು ಕಾಡುಮಲ್ಲೇಶ್ವರ ದೇವಸ್ಥಾನದಲ್ಲಿ ಪ್ರಾರ್ಥನೆ ಸಲ್ಲಿಸಿದ್ದಾಗಿ ತಿಳಿಸಿದರು. ಮೋದಿ ಅವರಿಗೆ ಇನ್ನಷ್ಟು ಹೆಚ್ಚು ಆಯುಸ್ಸು ಕೊಟ್ಟು, ಹೆಚ್ಚು ಶಕ್ತಿ ಕೊಟ್ಟು, ಹೆಚ್ಚು ದಿನಗಳ ಕಾಲ ಪ್ರಧಾನಿಯಾಗಿ ಕೆಲಸ ಮಾಡುವ ಶಕ್ತಿಯನ್ನು ಭಗವಂತನು ದಯಪಾಲಿಸಲಿ ಎಂದು ಪ್ರಾರ್ಥನೆ ಸಲ್ಲಿಸಿದ್ದಾಗಿ ವಿವರಿಸಿದರು.

ಒಂದು ದಿನವೂ ವಿಶ್ರಾಂತಿ ಪಡೆಯದೇ ಭ್ರಷ್ಟಾಚಾರರಹಿತ ಆಡಳಿತವನ್ನು ಮೋದಿ ಅವರು ನೀಡುತ್ತಿದ್ದಾರೆ.

ಜಾಗತಿಕ ಸವಾಲುಗಳ ನಡುವೆ ಮೂಲಭೂತ ಸೌಕರ್ಯ, ಕೃಷಿ ಕ್ಷೇತ್ರ, ಆರೋಗ್ಯ ಕ್ಷೇತ್ರ ಸೇರಿ ಎಲ್ಲ ಕ್ಷೇತ್ರಗಳಲ್ಲಿ ಭಾರತವನ್ನು ಮುನ್ನಡೆಸುತ್ತಿದ್ದಾರೆ. ಇದರಿಂದ ಭಾರತ ಜಗತ್ತಿನ 4ನೇ ಆರ್ಥಿಕ ಶಕ್ತಿಯಾಗಿ ಹೊರಹೊಮ್ಮಿದೆ. ಇದಕ್ಕೆ ಮೋದಿಜೀ ಅವರ ದಿಟ್ಟ ನಾಯಕತ್ವ ಕಾರಣ ಎಂದು ಹೇಳಿದರು.



ಛತ್ತೀಸ್‌ಗಢದ ಮಾಜಿ ಮುಖ್ಯಮಂತ್ರಿ ಭೂಪೇಶ್ ಬಘೇಲ್ ಅವರು ಕರ್ನಾಟಕ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಕರ್ನಾಟಕ ಭವನದಲ್ಲಿ ಭೇಟಿಯಾಗಿದ್ದರು

# ಜೂ.21: ಕೆಪಿಸಿಸಿ ಅಧ್ಯಕ್ಷ ಹರಿಪ್ರಸಾದ್ ಪದಗ್ರಹಣ

**ಬೆಂಗಳೂರು, ಜೂ.10:** ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ನೂತನ ಅಧ್ಯಕ್ಷರಾಗಿ ನೇಮಕಗೊಂಡಿರುವ ಬಿ.ಕೆ. ಹರಿಪ್ರಸಾದ್ ಅವರು ಈ ತಿಂಗಳ 21 ರಂದು ಪಕ್ಷದ ಅಧ್ಯಕ್ಷರಾಗಿ ಪದಗ್ರಹಣ ಮಾಡಲಿದ್ದಾರೆ

ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯಲಿರುವ ಕೆಪಿಸಿಸಿಯ ನೂತನ ಅಧ್ಯಕ್ಷ ಪದಗ್ರಹಣ ಕಾರ್ಯಕ್ರಮದಲ್ಲಿ ಕೇಂದ್ರ ಮಟ್ಟದ ಕಾಂಗ್ರೆಸ್ ನಾಯಕರು ಭಾಗಿಯಾಗಲಿದ್ದಾರೆ.

ಅರಮನೆ ಮೈದಾನದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಮುಂಖಡರ ಸಮ್ಮುಖದಲ್ಲಿ ಹರಿಪ್ರಸಾದ್ ಕೆಪಿಸಿಸಿ ಸಾರಥಿಯ ಜವಾಬ್ದಾರಿಯನ್ನು ವಹಿಸಿಕೊಳ್ಳುವರು ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಜಿ.ಸಿ. ಚಂದ್ರಶೇಖರ್ ಸುದ್ದಿಗೋಷ್ಠಿಯಲ್ಲಿ ಹೇಳಿದರು.

2023ರಲ್ಲಿ ಕೆಪಿಸಿಸಿ ಅಧ್ಯಕ್ಷರಾಗಿ ಡಿ.ಕೆ. ಶಿವಕುಮಾರ್ ಅವರು ರಾಜ್ಯದಲ್ಲಿ ಪಕ್ಷವನ್ನು ಅಧಿಕಾರಕ್ಕೆ ತಂದರು. ಈಗ ಮುಖ್ಯಮಂತ್ರಿಯಾದ ನಂತರ ಪಕ್ಷದ ಅಧ್ಯಕ್ಷತೆಯ್ನು ಬಿಟ್ಟುಕೊಟ್ಟಿದ್ದಾರೆ. ಹೈಕಮಾಂಡ್ ಹರಿಪ್ರಸಾದ್ ಅವರಿಗ ಪಕ್ಷದ ಸಾರಥ್ಯ ವಹಿಸಿದೆ.

ಕಾರ್ಯಕರ್ತರೊಬ್ಬರಿಗೆ ಪಕ್ಷದ ನಾಯಕತ್ವ ವಹಿಸಿರುವ ವರಿಷ್ಠರಿಗೆ ಜಿ.ಸಿ ಚಂದ್ರಶೇಖರ್ ಧನ್ಯವಾದ ಹೇಳಿದರು.

ಪಕ್ಷದಲ್ಲಿ ಯಾವುದೇ ಗಾಡ್ ಫಾದರ್‌ಗಳಿಲ್ಲದೆ ಹರಿಪ್ರಸಾದ್ ಇಷ್ಟು ಎತ್ತರಕ್ಕೆ ಬೆಳೆದಿದ್ದಾರೆ. ರಾಜ್ಯಸಭಾ ಸದಸ್ಯರಾಗಿ, ವಿಧಾನಪರಿಷತ್ ಸದಸ್ಯರಾಗಿ ಕೆಲಸ ಮಾಡಿದ್ದಾರೆ, 19 ರಾಜ್ಯಗಳಲ್ಲಿ ಕಾಂಗ್ರೆಸ್ ಉಸ್ತುವಾರಿಯಾಗಿ ಬೆಳೆದವರು ಬಹಳ ಸರಳ ನಾಯಕ ಎಂದರು

ಮುಂದೆ ನಮಗೆ ಚುನಾವಣಾ ಪರ್ವ ಇದೆ. ಜಿಬಿಎ, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯ್ತಿ ಚುನಾವಣೆಗಳು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಹಾಗೂ ಹರಿಪ್ರಸಾದ್ ಅವರ ನಾಯಕತ್ವದಲ್ಲಿ ನಾವೆಲ್ಲಾ ಚುನಾವಣೆಎ ಎದುರಿಸಿ ಪಕ್ಷವನ್ನು ಗೆಲ್ಲಿಸುವ ಕೆಲಸ ಮಾಡುತ್ತೇವೆ. 2028ರಲ್ಲಿ ವಿಧಾನಸಭೆ ಮತ್ತು 2029ರ ಲೋಕಸಭೆ ಚುನಾವಣೆಗಳಲ್ಲಿ ಈ ಮೂವರು ನಾಯಕರ ನಾಯಕತ್ವದಲ್ಲಿ ನಾವೆಲ್ಲಾ ಚುನಾವಣೆಯನ್ನು ಗೆಲ್ಲುವ ಕೆಲಸ ಮಾಡೋಣ ಎಂದರು.

ಕೆಪಿಸಿಸಿ ಅಧ್ಯಕ್ಷರಾಗಿ ಹರಿಪ್ರಸಾದ್ ಪಕ್ಷದ ಕಚೇರಿಯಲ್ಲೇ ಜವಾಬ್ದಾರಿ ಹಸ್ತಾಂತರ ಕಾರ್ಯಕ್ರಮ ಮಾಡೋಣ ಎಂದು ಹೇಳಿದರು. ಆದರೆ ಪಕ್ಷ ಅರಮನೆ ಮೈದಾನದಲ್ಲಿ ಪದಗ್ರಹಣ ಕಾರ್ಯಕ್ರಮವನ್ನು ಆಯೋಜಿಲು ತೀರ್ಮಾನಿಸಿತು ಎಂದು ಅವರು ಹೇಳಿದರು

ಹರಿಪ್ರಸಾದ್ ಅವರು ಮಂತ್ರಿ ಸ್ಥಾನ ಬಿಟ್ಟು ಪಕ್ಷದ ಅಧ್ಯಕ್ಷತೆಯನ್ನು ಆಯ್ಕೆ ಮಾಡಿಕೊಂಡಿದ್ದಾರೆ. ಅವರಿಂದ ನಾವೆಲ್ಲಾ ಕಲಿಯಬೇಕಾಗಿರುವುದು ಬಹಳ ಇದೆ ಎಂದು ತಿಳಿಸಿದರು.

**ಅದ್ದೂರಿ ಸ್ವಾಗತ**

ಕೆಪಿಸಿಸಿ ಅಧ್ಯಕ್ಷರಾದ ನಂತರ ಇದೇ ಮೊದಲ ಬಾರಿಗೆ ಪಕ್ಷದ ಕಚೇರಿಗೆ ಆಗಮಿಸಿದ ಹರಿಪ್ರಸಾದ್ ಅವರನ್ನು ಪಕ್ಷದ ಕಾರ್ಯಕರ್ತರು ಅದ್ದೂರಿಯಾಗಿ ಸ್ವಾಗತಿಸಿದರು.

ವಿಧಾನಪರಿಷತ್ ಸದಸ್ಯ ಸಲೀಂ ಅಹಮದ್, ಮಾಜಿ ಸಚಿವ ಜಮೀರ್ ಅಹಮದ್ ಖಾನ್, ಕಾರ್ಯಾಧ್ಯಕ್ಷ ಜಿ.ವಿ. ಚಂದ್ರಶೇಖರ್, ಮಂಜುನಾಥ ಭಂಡಾರಿ ಸೇರಿದಂತೆ ಹಲವು ನಾಯಕರು ಹರಿಪ್ರಸಾದ್ ಅವರಿಗೆ ಪುಷ್ಪಗುಚ್ಛ ನೀಡಿ ಪಕ್ಷದ ಕಚೇರಿಗೆ ಬರಮಾಡಿಕೊಂಡರು.

ಪಕ್ಷದ ಕಚೇರಿಗೆ ಆಗಮಿಸಿದ ಅವರು, ಎಲ್ಲ ಮುಖಂಡರು ಹಾಗೂ ಕಾರ್ಯಕರ್ತರಿಗೆ ಧನ್ಯವಾದ ಹೇಳಿ, ಜಿಬಿಎ ಚುನಾವಣೆಗೆ ಸಂಬಂಧಿಸಿದಂತೆ ಪಕ್ಷದ ಮುಖಂಡರ ಜತೆ ಸಭೆ ನಡೆಸಿ ಚರ್ಚಿಸಿದರು.

ಇಂದು ಪಕ್ಷದ ಕಚೇರಿಗೆ ಆಹ್ವಾನ ನೀಡಿದ್ದೇನೆ. ಸುದ್ದಿಗೋಷ್ಠಿಯನ್ನು ಮುಂದೆ ನಡೆಸುತ್ತೇನೆ.

ಸದಸ್ಯರೆಲ್ಲರಿಗೂ ಧನ್ಯವಾದ ಎಂದು ಹರಿಪ್ರಸಾದ್ ಹೇಳಿ, ಮಧ್ಯಪ್ರದೇಶದಲ್ಲಿ ಮೀನಾಕ್ಷಿನಟರಾಜ್ ಅವರ ರಾಜ್ಯಸಭಾ ನಾಮಪತ್ರ ಸಲ್ಲಿಕೆ ತಿರಸ್ಕಾರವಾಗಿರುವ ಬಗ್ಗೆ ಪ್ರತಿಕ್ರಿಯಿಸಿ ಬಿಜೆಪಿಯವರು ವೋಟ್ ಚೋರಿ ಜತೆ ಸೀಟ್ ಚೋರಿಯನ್ನು ಮಾಡುತ್ತಿದ್ದಾರೆ. ಇದೆಲ್ಲಾ ನಮಗೆ ಹೊಸದಲ್ಲ, ಎಲ್ಲವನ್ನೂ ನಾವು ಎದುರಿಸುತ್ತೇವೆ ಎಂದು ಹೇಳಿ ಎಚ್ಚರಿಕೆ ಕೊಟ್ಟರು.

# 102 ಗೀಗಾವ್ಯಾಟ್ ಸಾಮರ್ಥ್ಯದ ಫ್ಲೋಟಿಂಗ್ ಸೌರ ಯೋಜನೆಗೆ ಚಾಲನೆ: ಕೇಂದ್ರ ಸಚಿವ ಜೋಶಿ

- **ದೆಹಲಿಯಲ್ಲಿ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಪ್ರಕಟ**
- **ಭಾರತದ ಅಂದಾಜು ಸೌರ ಸಾಮರ್ಥ್ಯ 3,445 GWp**
- **ಪಳೆಯುಳಿಕೆಯೇತರ ಇಂಧನ ಸಾಮರ್ಥ್ಯ 288 GWಗೆ ವಿಸ್ತರಣೆ**
- **ವಿದ್ಯುತ್ ಕೊರತೆಯ ಭಾರತವೀಗ ಹೆಚ್ಚುವರಿ ಸಾಮರ್ಥ್ಯದ ರಾಷ್ಟ್ರ**

**ನವದೆಹಲಿ, ಜೂ.10:** ಸಣ್ಣ ಜಲ ವಿದ್ಯುತ್ ಅಭಿವೃದ್ಧಿ ಯೋಜನೆಗಾಗಿ ಕೇಂದ್ರ ಸರ್ಕಾರ 'ತೇಲುವ (Floating Solar Scheme) ಸೌರ ಯೋಜನೆ' ಪರಿಚಯಿಸುತ್ತಿದೆ ಎಂದು ಹೊಸ ಮತ್ತು ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ ಜೋಶಿ ಪ್ರಕಟಿಸಿದರು.

ದೆಹಲಿಯಲ್ಲಿ ಬುಧವಾರ, ಡಾ.ಮೊಹಮ್ಮದ್ ರಿಹಾನ್ ಬರೆದ ಗ್ರೀನ್ ಎನರ್ಜಿ ಅಂಡ್ ಸಸ್ಟೈನಬಲ್ ಡೆವಲಪ್‌ಮೆಂಟ್" ಪುಸ್ತಕ ಬಿಡುಗಡೆಗೊಳಿಸಿ ಮಾತನಾಡಿ, ಭಾರತದಲ್ಲಿ 102 GWpಗಿಂತ ಹೆಚ್ಚು 'ತೇಲುವ ಸೌರ ಪಿವಿ' ಸಾಮರ್ಥ್ಯವನ್ನು ನಿರ್ಣಯಿಸಲಾಗಿದೆ ಎಂದು ಹೇಳಿದರು.

ಭಾರತದ ತೇಲುವ ಸೌರ ಪಿವಿ ಸಂಭಾವ್ಯ ಮೌಲ್ಯಮಾಪನದ ವರದಿ ಸಹ ಬಿಡುಗಡೆ ಮಾಡಿದ ಸಚಿವರು, ದೇಶದ ತೇಲುವ ಸೌರ ಸಾಮರ್ಥ್ಯವನ್ನು 102 GWpಗಿಂತ ಅಧಿಕ ಎಂಬುದನ್ನು ಈ ವರದಿ ಅಂದಾಜಿಸಿದ್ದು, ಈ ಮೂಲಕ ಭಾರತದ ಒಟ್ಟು ಅಂದಾಜು ಸೌರ ಸಾಮರ್ಥ್ಯವನ್ನು 3,445 GWpಗೆ ಕೊಂಡೊಯ್ಯುತ್ತದೆ ಎಂದು ಹೇಳಿದರು.

ದೇಶಾದ್ಯಂತ ತೇಲುವ ಸೌರ ನಿಯೋಜನೆ ಉತ್ತೇಜಿಸಲಾಗುತ್ತಿದೆ. ನವೀಕರಿಸಬಹುದಾದ ಇಂಧನ ಸಾಮರ್ಥ್ಯ, ಉತ್ಪಾದನೆ ಮತ್ತು ನಾಗರಿಕರ ಭಾಗವಹಿಸುವಿಕೆ ದೇಶದ ಶುದ್ಧ ಇಂಧನ ಪರಿವರ್ತನೆಯನ್ನು ಸಾಕಾರಗೊಳಿಸುತ್ತಿದೆ ಎಂದು ಹೇಳಿದರು. ಜಲಾಶಯಗಳು, ಮತ್ತಿತರ ಜಲಮೂಲಗಳು ತೇಲುವ ಸೌರ ಯೋಜನೆಗಳ ಮೂಲಕ ಶುದ್ಧ ಇಂಧನ ಉತ್ಪಾದನೆಗೆ ಪ್ರಮುಖ ಕೊಡುಗೆಯಾಗಿವೆ. ಇದು ಶುದ್ಧ ಇಂಧನ ಪರಿವರ್ತನೆ ಗುರಿಗೆ ನೈಸರ್ಗಿಕ ಸಂಪನ್ಮೂಲಗಳನ್ನು ಪರಿಣಾಮಕಾರಿ ರೀತಿಯಲ್ಲಿ ಬಳಸಿಕೊಳ್ಳುವ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ ಎಂದರು. ಇದೇ ವೇಳೆ ಸಣ್ಣ ಜಲವಿದ್ಯುತ್ ಅಭಿವೃದ್ಧಿ ಯೋಜನೆಯ ಆನ್‌ಲೈನ್ ಪೋರ್ಟಲ್ ಸಹ ಉದ್ಘಾಟಿಸಿದ ಸಚಿವರು, ಈ ಪೋರ್ಟಲ್ ಯೋಜನೆ ಅನುಷ್ಠಾನದಲ್ಲಿ ಪಾರದರ್ಶಕತೆ ಮತ್ತು ದಕ್ಷತೆಯನ್ನು ಹೆಚ್ಚಿಸುತ್ತದೆ ಎಂದರು.




**ಹೆಚ್ಚುವರಿ ವಿದ್ಯುತ್ ಸಾಮರ್ಥ್ಯದ ರಾಷ್ಟ್ರ ಭಾರತ:**

ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ಫಲವಾಗಿ ಭಾರತವೀಗ ವಿದ್ಯುತ್ ಕೊರತೆ ಬದಲಾಗಿ ಹೆಚ್ಚುವರಿ ವಿದ್ಯುತ್ ಸಾಮರ್ಥ್ಯದ ರಾಷ್ಟ್ರವಾಗಿ ಮಾರ್ಪಟ್ಟಿದೆ. ಶುದ್ಧ ಇಂಧನದಲ್ಲಿ ಜಾಗತಿಕ ನಾಯಕತ್ವವನ್ನು ಪ್ರದರ್ಶಿಸಿದೆ ಎಂದು ಪ್ರತಿಪಾದಿಸಿದರು.

ಭಾರತದ ಶುದ್ಧ ಇಂಧನ ಸಾಧನೆಗಳು ಜಾಗತಿಕ ಮನ್ನಣೆಯನ್ನು ಗಳಿಸಿವೆ ಮತ್ತು ಮಹತ್ವಾಕಾಂಕ್ಷೆಯ ಹವಾಮಾನ ಮತ್ತು ಇಂಧನ ಗುರಿಗಳನ್ನು ಸಾಧಿಸುವ ದೇಶದ ಸಾಮರ್ಥ್ಯವನ್ನು ಪ್ರದರ್ಶಿಸಿವೆ ಎಂದು ಸಚಿವರು ಹೇಳಿದರು.

**ಪಳೆಯುಳಿಕೆಯೇತರ ಇಂಧನ ಸಾಮರ್ಥ್ಯ 288 GWಗೆ ವಿಸ್ತರಣೆ:**

ದೇಶದಲ್ಲಿ ಪಳೆಯುಳಿಕೆಯೇತರ ಇಂಧನ ಸಾಮರ್ಥ್ಯ 2014ರಲ್ಲಿ 81 GW ಇತ್ತು. ಅದೀಗ ದುಪ್ಪಟ್ಟು ಏರಿಕೆ ಕಂಡಿದೆ. ಬರೋಬ್ಬರಿ 288 GWಗೆ ವಿಸ್ತರಣೆಯಾಗಿದೆ. ಸೌರ ಸಾಮರ್ಥ್ಯವೂ ಅಷ್ಟೇ ವೇಗದಲ್ಲಿದೆ. 2.8GW ನಿಂದ 155 GW ಗರಿಷ್ಠ ಮಟ್ಟಕ್ಕೇರಿದೆ. ದೇಶೀಯ ಸೌರ ಉತ್ಪಾದನಾ ಸಾಮರ್ಥ್ಯವು ಗಮನಾರ್ಹ ರೀತಿಯಲ್ಲಿ ವಿಸ್ತರಿಸಿದೆ. ಮಾಡ್ಯೂಲ್ ಉತ್ಪಾದನೆ 192 GWತಲುಪಿದೆ ಮತ್ತು ಕೋಶ ಉತ್ಪಾದನಾ ಸಾಮರ್ಥ್ಯವು 30GWತಲುಪಿದೆ ಎಂದು ವಿವರಿಸಿದರು.

1ಪಿಎಂ ಸೂರ್ಯ ಘರ್' ಮತ್ತು 'ಪಿಎಂ–ಕುಸುಮ್' ಭಾರತದ ಶುದ್ಧ ಇಂಧನ ಪರಿವರ್ತನೆಯಲ್ಲಿ ನಾಗರಿಕರ ಭಾಗವಹಿಸುವಿಕೆಗೆ ವೇಗ ನೀಡಿದೆ. ದೇಶಾದ್ಯಂತ ನವೀಕರಿಸಬಹುದಾದ ಇಂಧನ ಅಳವಡಿಕೆಯನ್ನು ಚುರುಕುಗೊಳಿಸಿದೆ ಎಂದರು. ಈ ಸಂದರ್ಭದಲ್ಲಿ NISE ಮತ್ತು ಮಿಲಿಟರಿ ಎಂಜಿನಿಯರಿಂಗ್ ಸೇವೆಗಳು ರಕ್ಷಣಾ ಸಂಸ್ಥೆಗಳಲ್ಲಿ ಸೌರಶಕ್ತಿ ಅಳವಡಿಕೆ ಬಲಪಡಿಸಲು ಒಪ್ಪಂದ ಮಾಡಿಕೊಂಡಿದ್ದು, ನವೀಕರಿಸಬಹುದಾದ ಇಂಧನ ಯೋಜನೆಗಳ ಅನುಷ್ಠಾನ ಮತ್ತು ಮೇಲ್ವಿಚಾರಣೆಗೆ NISE ತಾಂತ್ರಿಕ ಬೆಂಬಲ ಒದಗಿಸುತ್ತದೆ ಎಂದು ಸಚಿವ ಪ್ರಲ್ಹಾದ ಜೋಶಿ ತಿಳಿಸಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಜೂನ್ 11 2026, ಗುರುವಾರ

# ದೆಹಲಿ ವಿಶೇಷ ಪ್ರತಿನಿಧಿಯಾಗಿ ಟಿ.ಬಿ. ಜಯಚಂದ್ರ ನೇಮಕ



**ಬೆಂಗಳೂರು, ಜೂ.10:** ಹಿರಿಯ ಶಾಸಕ ಟಿ.ಬಿ.ಜಯಚಂದ್ರ ಅವರನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ಕರ್ನಾಟಕ ರಾಜ್ಯದ ದೆಹಲಿ ವಿಶೇಷ ಪ್ರತಿನಿಧಿಯನ್ನಾಗಿ ಮತ್ತೆ ನೇಮಿಸಲಾಗಿದೆ. ಅವರು ಸಚಿವ ಸ್ಥಾನದ ನಿರೀಕ್ಷೆಯಲ್ಲಿದ್ದರು. ಜಯಚಂದ್ರ ಅವರಿಗೆ ಸಂಪುಟ ಸ್ಥಾನಮಾನದೊಂದಿಗೆ ಸಂಪುಟ ದರ್ಜೆ ಸಚಿವರಿಗೆ ಅನ್ವಯವಾಗುವ ಎಲ್ಲ ಸೌಲಭ್ಯಗಳನ್ನು ನೀಡಬೇಕು ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ ಸರಕಾರದ ಅಧೀನ ಕಾರ್ಯದರ್ಶಿ – ಆದೇಶ ಹೊರಡಿಸಿದ್ದಾರೆ. ಬೆಳಗಾವಿ ಜಿಲ್ಲೆ ಚಿಕ್ಕೋಡಿ ತಾಲೂಕಿನ ಪರಿಷತ್ ಸದಸ್ಯ ಪ್ರಕಾಶ್ ಹುಕ್ಕೇರಿ ಅವರನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ಕರ್ನಾಟಕ ರಾಜ್ಯದ ವಿಶೇಷ ಪ್ರತಿನಿಧಿ–2 ಆಗಿ ನೇಮಿಸಿದ್ದು, ಸಂಪುಟ ದರ್ಜೆ ಸಚಿವರಿಗೆ ಅನ್ವಯವಾಗುವ ಎಲ್ಲ ಸೌಲಭ್ಯಗಳನ್ನು ನೀಡಬೇಕು ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಆದೇಶಿಸಿದೆ.

# ಉತ್ತಮ ಆಡಳಿತಕ್ಕೆ ಹೈಕಮಾಂಡ್ ನಾಯಕರ ಸಲಹೆ

**ನವದೆಹಲಿ, ಜೂ.10:** ಮುಖ್ಯಮಂತ್ರಿಯಾದ ಬಳಿಕ ಮೊದಲ ಬಾರಿಗೆ ದೆಹಲಿಗೆ ಆಗಮಿಸಿರುವ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಬುಧವಾರ ಕಾಂಗ್ರೆಸ್ ಅಧಿನಾಯಕಿ ಸೋನಿಯಗಾಂಧಿ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹಾಗೂ ಸಂಸದೆ ಪ್ರಿಯಾಂಕಾ ಗಾಂಧಿ ಭೇಟಿಯಾದರು. ಜನಪಥ್ ನಲ್ಲಿರುವ ಸೋನಿಯಗಾಂಧಿ ನಿವಾಸದಲ್ಲಿ ಹೈಕಮಾಂಡ್ ನಾಯಕರನ್ನು ಭೇಟಿಮಾಡಿದ ಅವರು ಮುಖ್ಯಮಂತ್ರಿಯಾಗಿ ಆಯ್ಕೆ ಮಾಡಿದಕ್ಕೆ ಕೃತ್ಯಜ್ಞತೆ ಸಲ್ಲಿಸಿದರು.

ಇದೇ ಸಮಯದಲ್ಲಿ ಅವರು ಸಚಿವ ಸಂಪುಟ ವಿಸ್ತರಣೆ ಬಗ್ಗೆ ಚರ್ಚೆ ನಡೆಸಿದ್ದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಹಾಗೂ ಉಸ್ತುವಾರಿ ರಣದೀಪ್ ಸುರ್ಜೇವಾಲ ಜೊತೆಗೆ ಚರ್ಚಿಸಿ ಪಟ್ಟಿ ಅಂತಿಮಗೊಳಿಸಲು ಸಲಹೆ ನೀಡಿದರು ಎನ್ನಲಾಗಿದೆ. ಭೇಟಿ ವೇಳೆ ಸೋನಿಯಗಾಂಧಿ ಅವರು ಉತ್ತಮ ಆಡಳಿತ ನೀಡಲು ಸಲಹೆ ನೀಡಿದ್ದಾರೆ ಎಂದು ಮೂಲಗಳು ಹೇಳಿವೆ. ಪಕ್ಷದ ಎಲ್ಲ ಹಿರಿಯ ನಾಯಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಬೇಕು, ಮುಂಬರುವ ಚುನಾವಣೆಗಳಿಗೆ ಅಣಿಯಾಗುವಂತೆ ಪಕ್ಷ ಸಂಘಟನೆಗೆ ಒತ್ತು ನೀಡಬೇಕು, ಮುಂಬರುವ ಚುನಾವಣೆಯಲ್ಲಿ ಪಕ್ಷವನ್ನು ಮತ್ತೆ ಅಧಿಕಾರಕ್ಕೆ ತರಲು ಆಡಳಿತ ನೀಡಬೇಕು ಎಂದು ಸಲಹೆ ನೀಡಿದ್ದಾರೆಎಂದು ಮೂಲಗಳು ತಿಳಿಸಿವೆ.

## ಸಿಎಂ ಮಾಡಿದ್ದಕ್ಕೆ ವರಿಷ್ಠರಿಗೆ ಕೃತಜ್ಞತೆ ಸಲ್ಲಿಸಿದ ಸಿಎಂ ಡಿ.ಕೆ. ಶಿವಕುಮಾರ್



## ದೆಹಲಿಯಲ್ಲಿ ಸಚಿವ ಆಕಾಂಕ್ಷಿಗಳ ದಂಡು

ಸಿಎಂ – ಡಿಸಿಎಂ ದೆಹಲಿ ಭೇಟಿ ಹಿನ್ನೆಲೆ ಸಚಿವ ಆಕಾಂಕ್ಷಿಗಳ ದೆಹಲಿ ಯಾತ್ರೆ ಶುರುವಾಗಿದೆ. ಪ್ರಕಾಶ್ ಹುಕ್ಕೇರಿ, ಗಣೇಶ್ ಹುಕ್ಕೇರಿ, ಪಿಎಮ್ ನರೇಂದ್ರ ಸ್ವಾಮಿ, ಎಸ್.ಎನ್.ಸುಬ್ಬಾರೆಡ್ಡಿ, ಹಂಪನಗೌಡ ಬಾದರ್ಲಿ, ಬಸನಗೌಡ ದದ್ದಲ್, ಎಸಿ ಶ್ರೀನಿವಾಸ್, ಬೇಳೂರು ಗೋಪಾಲಕೃಷ್ಣ, ಎಚ್.ಕೆ. ಪಾಟೀಲ್ ಸೇರಿದಂತೆ ಹಲವರು ನಾಯಕರು ದೆಹಲಿಯಲ್ಲಿ ಠಿಕಾಣಿ ಹೂಡಿದ್ದಾರೆ.

## ಇಂದು ಸಂಪುಟ ವಿಸ್ತರಣೆ ಚರ್ಚೆ?

ಸಿಎಂ ಪ್ರವಾಸದ ನಡುವೆ ಡಿಸಿಎಂ ಜಿ. ಪರಮೇಶ್ವರ್ ಕೆಪಿಸಿಸಿ ಅಧ್ಯಕ್ಷ ಬಿ.ಕೆ ಹರಿಪ್ರಸಾದ್ ಕೂಡಾ ದೆಹಲಿಗೆ ಆಗಮಿಸಿದ್ದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ, ಸಂಘಟನಾ ಪ್ರಧಾನ ಕಾರ್ಯದರ್ಶಿ ಕೆ.ಸಿ ವೇಣುಗೋಪಾಲ್, ಉಸ್ತುವಾರಿ ರಣದೀಪ್ ಸುರ್ಜೇವಾಲ ಭೇಟಿಯಾಗಿ ಚರ್ಚಿಸುವ ಸಾಧ್ಯತೆಗಳಿದೆ. ಸಚಿವ ಸಂಪುಟ ವಿಸ್ತರಣೆ ಕಸರತ್ತು ನಡೆಯುತ್ತಿದ್ದು 20 ಸ್ಥಾನಗಳಿಗೆ 50ಕ್ಕೂ ಹೆಚ್ಚು ಆಕಾಂಕ್ಷಿಗಳಿಂದ ಲಾಬಿ ನಡೆಯುತ್ತಿದೆ. ಇದಕ್ಕಾಗಿ ಡಿಕೆ ಶಿವಕುಮಾರ್ ಸಂಭಾವ್ಯ ಸಚಿವರ ಪಟ್ಟಿ ಸಿದ್ಧಪಡಿಸಿಕೊಂಡಿದ್ದು, ವರಿಷ್ಠರಿಗೆ ಸಲ್ಲಿಸಿ ಸಂಪುಟ ವಿಸ್ತರಣೆಗೆ ಅನುಮತಿ ಕೇಳುವ ನಿರೀಕ್ಷೆ ಇದೆ. ಅದಾಗ್ಯೂ ಡಿ.ಕೆ.ಶಿವಕುಮಾರ್ ಆಯ್ಕೆಯ ಹೆಸರುಗಳಿಗೆ ಹೈಕಮಾಂಡ್ ಒಪ್ಪಿಗೆ ಕೊಡುವುದು ಅನುಮಾನವಿದ್ದು, ಇದರ ಬದಲಿಗೆ ಸಿದ್ದರಾಮಯ್ಯ ಸೂಚಿಸುವ 3–4 ಜನರಿಗೆ ಸಂಪುಟದಲ್ಲಿ ಸ್ಥಾನ ಸಿಗಬಹುದು, ಹೈಕಮಾಂಡ್‌ನಿಂದಲೂ ಕೆಲವು ಹೆಸರು ಸೇರಬಹುದು ಎನ್ನಲಾಗುತ್ತಿದೆ.

**ಕೇರಳ, ತಮಿಳುನಾಡು ಮಾದರಿ ಯುವಕರಿಗೆ ಆದ್ಯತೆ?:** ಬಾಕಿ ಉಳಿದ 20 ಸ್ಥಾನಗಳ ಪೈಕಿ ಕನಿಷ್ಠ 5–6 ಯುವ ಶಾಸಕರಿಗೆ ಮಣೆ ಹಾಕುವ ಸಾಧ್ಯತೆ ಇದೆ. ಕೇರಳ, ತಮಿಳುನಾಡಿನಂತೆ ಯುವಕರಿಗೆ ಆದ್ಯತೆ ನೀಡುವ ಸಾಧ್ಯತೆಯಿದೆ. ಹಾಗಾದರೆ, ಡಿ.ಕೆ. ಸಂಪುಟದಲ್ಲಿ ಯುವ ಶಾಸಕರಿಗೂ ಅವಕಾಶ ಸಿಗಬಹುದು ಎನ್ನುವುದು ರಾಹುಲ್ ಗಾಂಧಿ ಅವರ ಲೆಕ್ಕಾಚಾರ ಎನ್ನಲಾಗಿದೆ. ಮೂಲಗಳ ಪ್ರಕಾರ ಹೈಕಮಾಂಡ್ ಮಟ್ಟದಲ್ಲಿ ಅಜಯ್ ಸಿಂಗ್, ಪ್ರಿಯಾಕೃಷ್ಣ, ನಾರಾ ಭರತ್ ರೆಡ್ಡಿ, ಶರತ್ ಬಚ್ಚೆಗೌಡ, ರಿಜ್ವಾನ್ ಅರ್ಷದ್, ಶ್ರೀನಿವಾಸ್ ಮಾನೆ, ಸಲೀಂ ಅಹ್ಮದ್, ಎ.ಎಸ್.ಪೊನ್ನಣ್ಣ ಹೆಸರುಗಳು ಚರ್ಚೆಯಲ್ಲಿವೆ.

# ಪ್ರಧಾನಮಂತ್ರಿಯಾಗಿ 4,399 ದಿನ ಪೂರೈಸಿದ ನಮೋ



## ಮೋದಿ ಭಾವುಕ ಸಂದೇಶ

ಐತಿಹಾಸಿಕ ಮೈಲಿಗಲ್ಲಿನ ಕುರಿತು ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿರುವ ಪ್ರಧಾನಿ ಮೋದಿ, ಕಳೆದ 12 ವರ್ಷಗಳ ಈ ಸುದೀರ್ಘ ಪಯಣವು ದೇಶದ ಜನರ ನಂಬಿಕೆ, ಅಭಿವೃದ್ಧಿ ಮತ್ತು ಸಾರ್ವಜನಿಕ ಕಲ್ಯಾಣಕ್ಕೆ ಸಮರ್ಪಿತವಾಗಿದೆ. 140 ಕೋಟಿ ಭಾರತೀಯರ ಆಶೀರ್ವಾದದೊಂದಿಗೆ ನಾವು ಯುವಕರು, ಮಹಿಳೆಯರು ಹಾಗೂ ರೈತ ಬಾಂಧವರ ಸಬಲೀಕರಣಕ್ಕಾಗಿ ಶ್ರಮಿಸಿದ್ದೇವೆ. ಮೂಲಸೌಕರ್ಯ ಅಭಿವೃದ್ಧಿಯಿಂದ ಹಿಡಿದು ಡಿಜಿಟಲ್ ಕ್ರಾಂತಿಯವರೆಗೆ ಭಾರತವು ಇಂದು ಜಾಗತಿಕ ಮಟ್ಟದಲ್ಲಿ ಹೊಸ ಗುರುತನ್ನು ಪಡೆದುಕೊಂಡಿದೆ ಎಂದು ಹೇಳಿದ್ದಾರೆ.

**ನವದೆಹಲಿ, ಜೂ.10: ನರೇಂದ್ರ ಮೋದಿ ನಿರಂತರ ಪ್ರಧಾನಿಯಾಗಿ 12 ವರ್ಷ ಪೂರೈಸಿದ್ದು, ಭಾರತದ ಮಾಜಿ ಪ್ರಧಾನಿ ಜವಹರ ಲಾಲ್ ಅವರ ದಾಖಲೆಯನ್ನು ಸರಿಗಟ್ಟಿ ಹೊಸ ಇತಿಹಾಸ ಸೃಷ್ಟಿಸಿದ್ದಾರೆ.**

ನೆಹರೂ 4,398 ದಿನಗಳ ಕಾಲ ಪ್ರಧಾನಿಯಾಗಿದ್ರೆ, ಮೋದಿಯರು ಬುಧವಾರ ಆ ದಾಖಲೆ ಮುರಿದು 4,399 ದಿನಗಳನ್ನು ಪೂರೈಸಿದ್ದಾರೆ. ನೆಹರೂ ಅವರು 1952ರ ಮೇ 13ರಂದು ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಿ, 1964ರ ಮೇ 27ರವರೆಗೆ ಒಟ್ಟು 4,398 ದಿನಗಳ ಕಾಲ ನಿರಂತರವಾಗಿ ಸೇವೆ ಸಲ್ಲಿಸಿದ್ದರು. ಈ ದಾಖಲೆಯು ಕಳೆದ 64 ವರ್ಷಗಳಿಂದಲೂ ಅಚ್ಚಳಿಯದೇ ಉಳಿದಿತ್ತು 2014 ಮೇ 26ರಂದು ಮೊದಲ ಬಾರಿಗೆ ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಿದ್ದ ನರೇಂದ್ರ ಮೋದಿಯವರು ಅಂದಿನಿಂದ ಇಂದಿನವರೆಗೆ ಪ್ರಧಾನಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಹೀಗಾಗಿ ಭಾರತದ ಪ್ರಜಾಪ್ರಭುತ್ವದ ಇತಿಹಾಸದಲ್ಲಿ ಅತ್ಯಂತ ದೀರ್ಘಕಾಲ ಸೇವೆ ಸಲ್ಲಿಸಿದ ಪ್ರಧಾನಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಬುಧವಾರ ನಡೆದ ಸಚಿವ ಸಂಪುಟ ನಿರ್ಣಯವು ಮೋದಿ ಅವರ ಅಧಿಕಾರಾವಧಿಯನ್ನು ಪರಿವರ್ತನಾಶೀಲ ಆಡಳಿತ, ಆರ್ಥಿಕ ಸುಧಾರಣೆಗಳು, ಕಲ್ಯಾಣ ವಿಸ್ತರಣೆ ಮತ್ತು ಭಾರತಕ್ಕೆ ಬೆಳೆಯುತ್ತಿರುವ ಅಂತರರಾಷ್ಟ್ರೀಯ ಪ್ರಭಾವದ ಅವಧಿ ಎಂದು ಶ್ಲಾಘಿಸಿದೆ.

ಬಿಜೆಪಿಯು ಮೋದಿಯನ್ನು ದೃಢವಾದ ರಾಷ್ಟ್ರೀಯತೆ, ಕಲ್ಯಾಣ–ಚಾಲಿತ ಆಡಳಿತ, ಮೂಲಸೌಕರ್ಯ ವಿಸ್ತರಣೆ ಮತ್ತು ಬಲವಾದ ಜಾಗತಿಕ ಪ್ರೊಫೈಲ್‌ನಿಂದ ಗುರುತಿಸಲ್ಪಟ್ಟ ಹೊಸ ಭಾರತದ ನಾಯಕ ಎಂದು ಬಿಂಬಿಸಿದೆ. ಕಳೆದ ದಶಕದಲ್ಲಿ, ಮೋದಿ ಅವರು ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ಜಾರಿ, ನೇರ ಲಾಭ ವರ್ಗಾವಣೆ ಯೋಜನೆಗಳ ವಿಸ್ತರಣೆ, ದೊಡ್ಡ ಪ್ರಮಾಣದ ಮೂಲಸೌಕರ್ಯ ...3ನೇ ಪುಟಕ್ಕೆ

## ನೆಹರೂ ಅವರನ್ನು ಹಿಂದಿಕ್ಕಿದ್ದಕ್ಕಾಗಿ ಪ್ರಧಾನಿಗೆ ಸಂಪುಟ ಸೆಲ್ಯೂಟ್

## ಭಾರತದ ರಾಜಕೀಯ ಇತಿಹಾಸದಲ್ಲಿ ಹೊಸ ಮೈಲಿಗಲ್ಲು ಸ್ಥಾಪಿಸಿದ ಮೋದಿ

## ಪ್ರಧಾನಿ ಮೋದಿಗೆ ವಿದೇಶಿ ಗಣ್ಯರ ಅಭಿನಂಧನೆ

ಸುದೀರ್ಘ 12 ವರ್ಷಗಳ ಕಾಲ ಪ್ರಧಾನಿಯಾಗಿ ಸೇವೆ ಸಲ್ಲಿಸುತ್ತಿರುವ ಮೋದಿಯನ್ನು ಹಲವಾರು ದೇಶದ ಮುಖ್ಯಸ್ಥರು ಅಭಿನಂದಿಸಿದ್ದಾರೆ. ಶ್ರೀಲಂಕಾದ ಅಧ್ಯಕ್ಷ ಅನುರಕುಮಾರ ದಿಸ್ಸಾನಾಯಕೆ, ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವದ ಜನರು ಮೋದಿಯವರ ನಾಯಕತ್ವದಲ್ಲಿ ಪದೇಪದೇ ಇಟ್ಟಿರುವ ನಂಬಿಕೆ ಮತ್ತು ವಿಶ್ವಾಸಕ್ಕೆ ಸಾಕ್ಷಿಯಾಗಿದೆ ಎಂದು ಅಭಿನಂದಿಸಿದ್ದಾರೆ. ಪಪುವಾ ನ್ಯೂಗಿನಿಯಾದ ಪ್ರಧಾನಿ ಜೇಮ್ಸ್ ಮರಾಪೆ ಮತ್ತು ಟ್ರಿನಿಡಾಡ್ ಮತ್ತು ಟೊಬಾಗೋದ ಪ್ರಧಾನಿ ಕಮಲಾ ಪರ್ಸಾದ್–ಬಿಸ್ಸೆಸ್ಸರ್ ಅವರು ಮೋದಿ ಅವರನ್ನು ನಾಯಕತ್ವದ ಮಾದರಿ ಮತ್ತು ಉದಾಹರಣೆ ಎಂದು ಶ್ಲಾಘಿಸಿದ್ದಾರೆ. ಮತ್ತು ಭಾರತವು ಜಾಗತಿಕ ವಿಷಯಗಳಲ್ಲಿ ಪ್ರಮುಖ ಧ್ವನಿಯಾಗಿ ಹೊರಹೊಮ್ಮಿದೆ ಎಂದಿದ್ದಾರೆ.



# ಕರ್ನಾಟಕದ ಸರ್ವತೋಮುಖ ಅಭಿವೃದ್ಧಿಗೆ ಕೈಜೋಡಿಸಿ

## ಐಎಎಸ್, ಐಪಿಎಸ್, ಐಎಫ್‌ಎಸ್ ಅಧಿಕಾರಿಗಳಿಗೆ ಸಿಎಂ ಡಿ.ಕೆ. ಶಿವಕುಮಾರ್ ಕರೆ




ಸಿಎಂ ಡಿ.ಕೆ.ಶಿವಕುಮಾರ್ ಅವರು ದೆಹಲಿಯ ಕರ್ನಾಟಕ ಭವನದಲ್ಲಿ ಬುಧವಾರ ಸಂಜೆ ಹಿರಿಯ ಐಎಎಸ್, ಐಪಿಎಸ್, ಐಎಫ್‌ಎಸ್ ಅಧಿಕಾರಿಗಳ ಜತೆ ಔತಣಕೂಟ ಸಭೆ ನಡೆಸಿದರು. ಡಿಸಿಎಂ ಡಾ.ಜಿ. ಪರಮೇಶ್ವರ, ಸಚಿವ ಕೃಷ್ಣಬೈರೇಗೌಡ, ಕರ್ನಾಟಕ ಸರಕಾರದ ವಿಶೇಷ ಪ್ರತಿನಿಧಿ ಟಿ.ಬಿ. ಜಯಚಂದ್ರ, ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಸಿಎಂ ಆರ್ಥಿಕ ಸಲಹೆಗಾರ ಎಲ್.ಕೆ. ಅತೀಕ್, ಅಪರ ಮುಖ್ಯ ಕಾರ್ಯದರ್ಶಿಗಳಾದ ತುಷಾರ್ ಗಿರಿನಾಥ್, ಗೌರವ್ ಗುಪ್ತಾ, ಕಾರ್ಯದರ್ಶಿ ರಾಜೇಂದ್ರ ಚೋಳನ್ ಇತರರಿದ್ದರು.

**ನವದೆಹಲಿ, ಜೂ.10:** ನಿಮ್ಮ ಶಕ್ತಿ ಅದಮ್ಯ. ನೀವು ಮನಸ್ಸು ಮಾಡಿದರೆ ಅಭಿವೃದ್ಧಿ ರಥ ಮುನ್ನುಗ್ಗುತ್ತದೆ. ಹೀಗಾಗಿ ಕರ್ನಾಟಕದ ಸರ್ವತೋಮುಖ ಪ್ರಗತಿಗೆ ಕೈಜೋಡಿಸಿ ಎಂದು ಸಿಎಂ ಡಿ.ಕೆ.ಶಿವಕುಮಾರ್ ಅವರು ಐಎಎಸ್, ಐಪಿಎಸ್, ಐಎಫ್‌ಎಸ್ ಅಧಿಕಾರಿಗಳಿಗೆ ಕರೆ ನೀಡಿದರು.

ಕರ್ನಾಟಕ ಭವನದಲ್ಲಿ ಅಧಿಕಾರಿಗಳ ಜತೆ ಬುಧವಾರ ರಾತ್ರಿ ಏರ್ಪಡಿಸಿದ್ದ ಔತಣಕೂಟ ಸಂವಾದದಲ್ಲಿ ಅವರು ಈ ಮನವಿ ಮಾಡಿದರು. ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕಾರ ಬಳಿಕ ಇದೇ ಮೊದಲ ಬಾರಿಗೆ ದೆಹಲಿಗೆ ಆಗಮಿಸಿದ್ದ ಶಿವಕುಮಾರ್ ಅವರು ಇಷ್ಟು ಬೇಗ ತಮ್ಮನ್ನು ಕರೆದು ಸಭೆ ಮಾಡಿದ್ದಕ್ಕೆ ಅಧಿಕಾರಿಗಳು ಪ್ರಶಂಸೆ ವ್ಯಕ್ತಪಡಿಸಿದರು.

ನಿಮ್ಮಲ್ಲಿ ಅಪಾರ ಜ್ಞಾನ ಸಂಪತ್ತಿದೆ. ಸಾಮರ್ಥ್ಯ ಇದೆ. ನಿಮ್ಮಲ್ಲಿರುವ ಅಗಾಧ ಪ್ರತಿಭೆಯನ್ನು ಕರ್ನಾಟಕದ ಪ್ರಗತಿಗೆ ವಿನಿಯೋಗಿಸಿ. ನಿಮಗೆ ಬೇಕಾದ ಸಹಕಾರವನ್ನು ಸರಕಾರ ನೀಡಲಿದೆ ಎಂದು ಸಿಎಂ ಅವರು ತಿಳಿಸಿದರು. ಕೇಂದ್ರ ಸರಕಾರದ ಅನೇಕ ಯೋಜನೆಗಳ ಲಾಭ ರಾಜ್ಯಕ್ಕೆ ದೊರೆಯುವಂತೆ ಮಾಡುವಲ್ಲಿ ನಿಮ್ಮ ಸಹಕಾರ ಬಹು ಮುಖ್ಯ. ಕರ್ನಾಟಕದಲ್ಲಿರುವ ನಿಮ್ಮದೇ ಸಹೋದ್ಯೋಗಿಗಳ ಜತೆ ನಿರಂತರ ಸಂಪರ್ಕ, ಸಮಾಲೋಚನೆ ನಡೆಸಿ ಅಭಿವೃದ್ಧಿ ಯೋಜನೆಗಳನ್ನು ರೂಪಿಸಿ. ಬಾಕಿ ಇರುವ ಯೋಜನೆಗಳ ತ್ವರಿತ ಅನುಷ್ಠಾನಕ್ಕೆ ಕ್ರಮ ಕೈಗೊಳ್ಳಿ ಎಂದು ಹೇಳಿದರು.

ನೀವು 35 ವರ್ಷ ಸೇವೆಯಲ್ಲಿರುತ್ತೀರಿ. ನಾವು ರಾಜಕಾರಣಿಗಳು ಐದು ವರ್ಷಕ್ಕೊಮ್ಮೆ ಹಗ್ಗಜಗ್ಗಾಟ ನಡೆಸುತ್ತೇವೆ. ಆದರೆ ಒಂದು ಸರಕಾರಕ್ಕೆ ಉತ್ತಮ ಹೆಸರು ತರುವ ಶಕ್ತಿ ನಿಮ್ಮ ಕೈಯಲ್ಲೇ ಇದೆ. ನಾನು ಅಧಿಕಾರಕ್ಕಾಗಿ ಅಧಿಕಾರ ಮಾಡುವವನಲ್ಲ. ಏನಾದರೂ ಸಾಧನೆ ಮಾಡಬೇಕೆಂಬ ಛಲಕ್ಕೆ ಅಧಿಕಾರ ಬಳಸುವವನು. ನಿಮ್ಮ ಸಹಕಾರ ಇದ್ದರೆ ಸಾಧನೆ ಅಸಾಧ್ಯವಲ್ಲ ಎಂದರು.



ಸಿಎಂ ಡಿ ಕೆ ಶಿವಕುಮಾರ್ ಅವರು ಕೇಂದ್ರ ಇಂಧನ, ವಸತಿ ಮತ್ತು ನಗರಾಭಿವೃದ್ಧಿ ಸಚಿವ ಮನೋಹರಲಾಲ್ ಖಟ್ಟರ್ ಅವರನ್ನು ದೆಹಲಿಯಲ್ಲಿ ಬುಧವಾರ ಭೇಟಿಮಾಡಿ ಮನವಿ ಸಲ್ಲಿಸಿದರು. ದೆಹಲಿಯಲ್ಲಿ ಕರ್ನಾಟಕ ಸರಕಾರದ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ, ಉಪಸ್ಥಿತರಿದ್ದರು.

# ಮೋದಿ ಜತೆಗಿನ ಬಾಂಧವ್ಯ ರಾಜ್ಯಸಭೆ ಸ್ಥಾನವನ್ನೂ ಮೀರಿದ್ದು

**ಅಧಿಕಾರ ವ್ಯಾಮೋಹವಿಲ್ಲ, ಸುದೀರ್ಘ ರಾಜಕೀಯ ಬದುಕಿನಲ್ಲಿ ಜನಸೇವೆಯೇ ಮುಖ್ಯವಾಗಿತ್ತು: ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ**

**ಬೆಂಗಳೂರು, ಜೂ.10:** ನನ್ನ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರ ನಡುವಿನ ಬಾಂಧವ್ಯವು ರಾಜ್ಯಸಭೆ ಸ್ಥಾನವನ್ನು ಮೀರಿದ್ದು ಎಂದು ಮಾಜಿ ಪ್ರಧಾನಿ ಹಾಗೂ ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ನೇರಮಾತುಗಳಲ್ಲಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಎಪ್ಪತ್ತು ವರ್ಷಗಳ ಸುದೀರ್ಘ ರಾಜಕೀಯ ಜೀವನ ಸವೆಸಿರುವ ನನಗೆ ರಾಜ್ಯಸಭೆ ಸದಸ್ಯನಾಗಬೇಕೆಂಬ ವ್ಯಾಮೋಹವಿಲ್ಲ. ಸುದೀರ್ಘ ರಾಜಕೀಯ ಜೀವನದಲ್ಲಿ ಅಧಿಕಾರಕ್ಕಿಂತ ಜನಸೇವೆಯೇ ಮುಖ್ಯವಾಗಿತ್ತು ಎಂಬುದನ್ನು ವಿನಯಪೂರ್ವಕವಾಗಿ ಹೇಳಲು ಬಯಸುತ್ತೇನೆ ಎಂದರು.

ಕಳೆದೆರಡು ದಿನಗಳಿಂದ ರಾಜ್ಯಸಭೆ ಸ್ಥಾನದ ವಿಚಾರದಲ್ಲಿ ತಮ್ಮ ಬಗ್ಗೆ ನಡೆಯುತ್ತಿರುವ ಚರ್ಚೆಗೆ ತೆರೆ ಎಳೆದ ಮಾಜಿ ಪ್ರಧಾನಿ, ಈ ಚರ್ಚೆ ಅನಗತ್ಯ. ಕೆಲವರು ಸುಖಾಸುಮ್ಮನೆ ಮಾತಾಡುತ್ತಿದ್ದಾರೆ. ಈ ವಿಚಾರದಲ್ಲಿ ನನಗೆ ಅಪಮಾನವಾಗಿದೆ ಎಂಬ ಹೇಳಿಕೆಗಳಿಗೆ ಯಾವುದೇ ಮಹತ್ವವನ್ನು ನಾನು ನೀಡುವುದಿಲ್ಲ. ಅದರಲ್ಲಿ ಯಾವುದೇ ಅರ್ಥವೂ ಇಲ್ಲ ಎಂದು ಹೇಳಿದರು.

**ರಾಜ್ಯಸಭೆ ಸ್ಥಾನಕ್ಕೆ ಬೇಡಿಕೆ ಇಟ್ಟಿರಲಿಲ್ಲ:** ರಾಜ್ಯಸಭೆ ಸ್ಥಾನ ತಪ್ಪಿಸಿ ಬಿಜೆಪಿ ದೇವೇಗೌಡರಿಗೆ ಅಪಮಾನ ಮಾಡಿದೆ ಎಂದು ಕಾಂಗ್ರೆಸ್ ನಾಯಕರು ಪದೇಪದೇ ದೂರುತ್ತಿದ್ದಾರಲ್ಲ ಎನ್ನುವ ಪ್ರಶ್ನೆಗೆ ಖಡಕ್ಕಾಗಿ ಉತ್ತರಿಸಿದ ದೇವೇಗೌಡರು; ಮೋದಿ ಅವರ ವಿಶ್ವಾಸದ ಮುಂದೆ ಇವರೆಲ್ಲರ ಹೇಳಿಕೆಗಳು ಟೀಕೆ-ಟಿಪ್ಪಣಿ ಬಹಳ ಸಣ್ಣವು. ರಾಜ್ಯಸಭೆ ಸ್ಥಾನ ಬೇಕೆಂದು ಬೇಡಿಕೆ ಇಟ್ಟಿರಲಿಲ್ಲ ಎಂದು ಮಾಜಿ ಪ್ರಧಾನಿ ಸ್ಪಷ್ಟಪಡಿಸಿದರು. ಕಾಂಗ್ರೆಸ್ ಪಕ್ಷ



ನೀಡುತ್ತಿರುವ ಹೇಳಿಕೆಗಳು ಮತ್ತು ಮಾಡುತ್ತಿರುವ ಟೀಕೆಗಳ ಬಗ್ಗೆ ಉತ್ತರಿಸಲು ನನಗೆ ಆಸಕ್ತಿ ಇಲ್ಲ ಎಂದ ದೇವೇಗೌಡರು; ಪಕ್ಷಕ್ಕಾಗಿ ಮತ್ತು ಕಾರ್ಯಕರ್ತರ ಸಲುವಾಗಿ ನಾನು ಕೆಲಸ ಮಾಡಲು ಸದಾ ಮುಂದೆ ಇರುತ್ತೇನೆ. ಇವತ್ತು ಒಂದು ವಿಷಯ ಇಟ್ಟುಕೊಂಡು ನನ್ನ ಬಗ್ಗೆ ಇಷ್ಟೆಲ್ಲಾ ಅನುಕಂಪದ ನಾಟಕ ಆಡುತ್ತಿರುವ ಕಾಂಗ್ರೆಸ್ ನಾಯಕರು ಹಿಂದೆಲ್ಲಾ ನನ್ನ ವಿಚಾರದಲ್ಲಿ ಹೇಗೆಲ್ಲಾ ನಡೆದುಕೊಂಡರು ಎಂಬುದು ಗೊತ್ತಿದೆ. ಇದರ ಬಗ್ಗೆ ಹೇಳುತ್ತಾ ಹೋದರೆ ಬಹಳಷ್ಟು ಹೇಳಬಹುದು. ನನಗೆ ಅದರ ಬಗ್ಗೆ ಆಸಕ್ತಿ ಇಲ್ಲ ಎಂದು ಅವರು ತಿಳಿಸಿದರು.

ಪಕ್ಷದ ಗ್ರೇಟರ್ ಬೆಂಗಳೂರು ಅಧ್ಯಕ್ಷ ಎಚ್.ಎಂ.ರಮೇಶ್ ಗೌಡ, ಮಾಜಿ ಶಾಸಕರಾದ ಕೆ.ಎ.ತಿಪ್ಪೇಸ್ವಾಮಿ, ಚೌಡರೆಡ್ಡಿ ತೂಪಲ್ಲಿ, ದೊಡ್ಡನಗೌಡ ಪಾಟೀಲ್, ಜೆಡಿಎಸ್ ರಾಜ್ಯ ಕಾನೂನು ವಿಭಾಗದ ಅಧ್ಯಕ್ಷ ಎ.ಪಿ. ರಂಗನಾಥ್, ಸಾಮಾಜಿಕ ಜಾಲತಾಣ ವಿಭಾಗದ ಅಧ್ಯಕ್ಷ ಚಂದನ್ ಇತರರು ಹಾಜರಿದ್ದರು.

### ರಾಜಕಾರಣಕ್ಕಾಗಿ ಸಂಬಂಧ ಕಳೆದುಕೊಳ್ಳಲು ಬಯಸಲ್ಲ

**ನನ್ನ ಮತ್ತು ಪ್ರಧಾನಿ ಮೋದಿ ಅವರ ನಡುವೆ ಉತ್ತಮ ಬಾಂಧವ್ಯ ಇದೆ. ಒಂದು ರಾಜ್ಯಸಭೆ ಸ್ಥಾನ ಇಂತಹ ಉತ್ತಮ ಬಾಂಧವ್ಯವನ್ನು ಹಾಳು ಮಾಡುತ್ತದೆ ಎಂದು ಯಾರಾದರೂ ಭಾವಿಸಿದ್ದರೆ ಅದು ಅವರ ಮೂರ್ಖತನ. ಒಂದು ಕಾಲದಲ್ಲಿ ನಾನು ಮೋದಿಯವರನ್ನು ಕಟುವಾಗಿ ಟೀಕಿಸಿದ್ದೆ ಎಂಬುದು ನಿಜ. ಆದರೆ ಕಳೆದ ಹಲವು ವರ್ಷಗಳಿಂದ ನಾನು ಅವರನ್ನು ಬಹಳಷ್ಟು ಅರ್ಥ ಮಾಡಿಕೊಂಡಿದ್ದೇನೆ. ಅವರಲ್ಲಿ ವಿಶ್ವಾಸ ಇರಿಸಿದ್ದೇನೆ. ಅವರ ಒಳ್ಳೆಯ ಕೆಲಸಗಳನ್ನು ಹೃದಯಪೂರ್ವಕವಾಗಿ ಶ್ಲಾಘಿಸಿದ್ದೇನೆ ಎಂದು ದೇವೇಗೌಡರು ಪ್ರತಿಪಾದಿಸಿದರು. ಕಾಂಗ್ರೆಸ್ ಪಕ್ಷದ ನಾಯಕರ ಹೇಳಿಕೆಗಳಿಗೆ ಅತೀವ ಬೇಸರ ವ್ಯಕ್ತಪಡಿಸಿದ ಅವರು, ನರೇಂದ್ರ ಮೋದಿ ಬಗ್ಗೆ ಭಾರತ ಅಷ್ಟೇ ಅಲ್ಲ ಜಗತ್ತಿನ ಎಲ್ಲಾ ಭಾಗಗಳಲ್ಲಿಯೂ ಗೌರವಭಾವ ಇದೆ. ಅದರಿಂದ ರಾಷ್ಟ್ರಕ್ಕೂ ಒಳ್ಳೆಯದಾಗುತ್ತಿದೆ. ಅವರ ಮಟ್ಟಕ್ಕೆ ಯಾವ ನಾಯಕನೂ ಬೆಳೆಯಲು ಸಾಧ್ಯವಿಲ್ಲ. ಅವರೊಂದಿಗೆ ನಾನು ಹೊಂದಿರುವ ಬಾಂಧವ್ಯ ವೈಯಕ್ತಿಕ ಮಟ್ಟದ್ದು. ಅದನ್ನು ರಾಜಕೀಯ ಕಾರಣಕ್ಕಾಗಿ ಕಳೆದುಕೊಳ್ಳಲು ಬಯಸುವುದಿಲ್ಲ. ನಾನು ಸಂಸತ್ತಿನಲ್ಲಿ ಇರಲಿ, ಇಲ್ಲದಿರಲಿ ಮೋದಿ ಅವರ ನಡುವಿನ ಸಂಬಂಧಕ್ಕೆ ಧಕ್ಕೆ ಬರುವುದಿಲ್ಲ. ಕೊನೆಯವರೆಗೂ ನಮ್ಮ ಸಂಬಂಧ ಹೀಗೆ ಇರುತ್ತದೆ ಎಂದು ಮಾಜಿ ಪ್ರಧಾನಿ ಸ್ಪಷ್ಟವಾಗಿ ಹೇಳಿದರು.**

**ಅಮೆರಿಕದ ಹೆಲಿಕಾಪ್ಟರ್ ಮೇಲೆ ದಾಳಿ**

# ಇರಾನ್‌ನ 20 ಸ್ಥಳಗಳ ಮೇಲೆ ಅಮೆರಿಕ ಸೇನೆಯಿಂದ ದಾಳಿ



**ವಾಷಿಂಗ್ಟನ್, ಜೂ.10:** ಈ ವಾರದ ಆರಂಭದಲ್ಲಿ ಅಮೆರಿಕದ ಸೇನಾ ಅಪಾಚೆ ಹೆಲಿಕಾಪ್ಟರ್ ಅನ್ನು ಹೊಡೆದುರುಳಿಸಿದ ನಂತರ ಅಮೆರಿಕ ಸೇನೆ ಇರಾನ್‌ನಲ್ಲಿ 20 ಗುರಿಗಳ ಮೇಲೆ ದಾಳಿ ಮಾಡಿದೆ, ಇದನ್ನು ವಾಷಿಂಗ್ಟನ್ "ಪ್ರತೀಕಾರದ ದಾಳಿ" ಎಂದು ಬಣ್ಣಿಸಿದೆ. ಸೆಂಟ್ಕಾಮ್ ಬಿಡುಗಡೆ ಮಾಡಿದ ಹೇಳಿಕೆಯ ಪ್ರಕಾರ, ದಾಳಿಗೊಳಗಾದ ಗುರಿಗಳಲ್ಲಿ ಇರಾನಿನ ವಾಯು ರಕ್ಷಣಾ ವ್ಯವಸ್ಥೆಗಳು, ರೇಡಾರ್ ಸ್ಥಾಪನೆಗಳು ಮತ್ತು ಡ್ರೋನ್ ಭೂ-ನಿಯಂತ್ರಣ ಕೇಂದ್ರಗಳು ಸೇರಿವೆ. "ಈ ಕಾರ್ಯಾಚರಣೆಯು ಪ್ರಾದೇಶಿಕ ನೀರನ್ನು ಸಾಗಿಸುವ ಅಮೆರಿಕ ಪಡೆಗಳು ಮತ್ತು ಅಂತರರಾಷ್ಟ್ರೀಯ ವಾಣಿಜ್ಯ ಹಡಗುಗಳ ಮೇಲಿನ ಇತ್ತೀಚಿನ ದಾಳಿಗಳಿಗೆ ಅನುಪಾತದ ಪ್ರತಿಕ್ರಿಯೆಯಾಗಿದೆ" ಎಂದು ಕೇಂದ್ರ ಕಮಾಂಡ್ ಹೇಳಿದೆ. ಕುವೈತ್ ಮತ್ತು ಬಹ್ರೇನ್‌ನಲ್ಲಿರುವ ಯುಎಸ್ ಮಿಲಿಟರಿ ಸೌಲಭ್ಯಗಳ ವಿರುದ್ಧ ಬುಧವಾರ ಮುಂಜಾನೆ ಇಸ್ಲಾಮಿಕ್ ಗಣರಾಜ್ಯವು ನಡೆಸಿದ ಡ್ರೋನ್ ದಾಳಿಯ ನಂತರ ಹಿಮ್ಮುಖ ಉಲ್ಬಣವು ಬಹಿರಂಗವಾಯಿತು. ಇಸ್ಲಾಮಿಕ್ ಗಣರಾಜ್ಯದ ನೌಕಾ ಪಡೆಗಳು ಬಹ್ರೇನ್‌ನಲ್ಲಿರುವ ಯುಎಸ್ ನೌಕಾಪಡೆಯ ಐದನೇ ತುಕಡಿಯ ಪ್ರಧಾನ ಕಚೇರಿಯನ್ನು ಹಾಗೂ ಕುವೈತ್‌ನಲ್ಲಿರುವ ಅಲಿ ಅಲ್ ಸಲೇಮ್ ವಾಯುನೆಲೆಯನ್ನು ಗುರಿಯಾಗಿಸಿಕೊಂಡವು. ಕುವೈತ್ ಮಿಲಿಟರಿ ಅಧಿಕಾರಿಗಳು ನಂತರ ವಾಯು ರಕ್ಷಣಾ ವ್ಯವಸ್ಥೆಗಳು ಪ್ರತಿಕೂಲ ವೈಮಾನಿಕ ಗುರಿಗಳೆಂದು ವಿವರಿಸಿದ್ದನ್ನು ಸಕ್ರಿಯವಾಗಿ ಪ್ರತಿಬಂಧಿಸುತ್ತಿವೆ ಎಂದು ಹೇಳಿದರು. ಆದಾಗ್ಯೂ, ಇಲ್ಲಿಯವರೆಗೆ, ಯಾವುದೇ ಡ್ರೋನ್‌ಗಳು ತಮ್ಮ ಉದ್ದೇಶಿತ ಗುರಿ ತಲುಪಿವೆ ಎಂಬುದಕ್ಕೆ ತಕ್ಷಣದ ದೃಢೀಕರಣವಿಲ್ಲ.

# ಭೂಸ್ವಾಧೀನದಿಂದ ಮಂಜೂರಾತಿವರೆಗಿನ ಎಲ್ಲ ಪ್ರಕ್ರಿಯೆಗಳಿಗೆ ಡಿಜಿಟಲ್ ರೂಪ



**ಬೆಂಗಳೂರು, ಜೂ.10:** ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಲಿಯ (ಕೆಐಎಡಿಬಿ) ಮೂಲಕ ನಡೆಯುವ ಭೂಸ್ವಾಧೀನ ಮತ್ತು ನಿವೇಶನ ಮಂಜೂರಾತಿಯವರೆಗಿನ ಪ್ರತಿಯೊಂದು ಪ್ರಕ್ರಿಯೆಯೂ ಮುಂದಿನ ದಿನಗಳಲ್ಲಿ ಡಿಜಿಟಲ್ ರೂಪದಲ್ಲಿ ನಡೆಯಲಿದೆ. ಇದರಿಂದ ರೈತರು ಮತ್ತು ಉದ್ಯಮಿಗಳು ಸೇರಿದಂತೆ ಎಲ್ಲರಿಗೂ ಅನುಕೂಲವಾಗಲಿದೆ. ಈ ಸಂಬಂಧದ ಕೆಲಸಗಳನ್ನು ಮುಂದಿನ ನೂರು ದಿನಗಳಲ್ಲಿ ಮುಗಿಸಬೇಕು ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ. ನೂತನ ಸರಕಾರ ಅಸ್ತಿತ್ವಕ್ಕೆ ಬಂದ ಬಳಿಕ ಅವರು ಖನಿಜ ಭವನದಲ್ಲಿ ಬುಧವಾರ ತಮ್ಮ ಇಲಾಖೆಯ ಎರಡನೇ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಈ ಸಭೆಯಲ್ಲಿ ಅವರು ನೂರು ದಿನಗಳಲ್ಲಿ ಮಾಡಬೇಕಾದ ಕೆಲಸಗಳೇನೇನು ಎಂದು ಸ್ಪಷ್ಟಪಡಿಸಿದರು.

ಸಭೆಯ ಬಗ್ಗೆ ಮಾತನಾಡಿದ ಅವರು, ಸರಕಾರದ ಇ-ಗವರ್ನೆನ್ಸ್ ಇಲಾಖೆಯು ಏಕೀಕೃತ ಭೂ ನಿರ್ವಹಣಾ ವ್ಯವಸ್ಥೆಯನ್ನು ಹೊಂದಿದೆ. ಇದರ ಅಡಿಯಲ್ಲೇ ಈಗ ರಾಜ್ಯದ ಹಳೆಯ ಮತ್ತು ಹೊಸ ಕೈಗಾರಿಕಾ ಪ್ರದೇಶಗಳಲ್ಲಿನ ನಿವೇಶನಗಳ ಪ್ರತಿಯೊಂದು ವಿವರವನ್ನೂ ಡಿಜಿಟಲೀಕರಣ ಮಾಡಲಾಗುವುದು. ಇದರಲ್ಲಿ ಪ್ರತಿ ನಿವೇಶನಕ್ಕೆ ಸಂಬಂಧಿಸಿದಂತೆಯೂ ಒಟ್ಟು 77 ಕಾಲಂಗಳಲ್ಲಿ ಮಾಹಿತಿ ಇರಲಿದೆ ಎಂದಿದ್ದಾರೆ. ಕೈಗಾರಿಕಾ ನಿವೇಶನದ ಮಂಜೂರಾತಿ, ಅದರ ಸ್ಥಿತಿಗತಿ, ಅಲ್ಲಿರುವ ಕೈಗಾರಿಕೆ, ಮಾಡಿರುವ ಹೂಡಿಕೆ, ಆಗಿರುವ ಉದ್ಯೋಗಸೃಷ್ಟಿ, ಸಂತ್ರಸ್ತ ರೈತರಿಗೆ ಕೊಟ್ಟಿರುವ ಪರಿಹಾರ, ಕೋರ್ಟ್ ಮೊಕದ್ದಮೆ ವಿವರಗಳು, ಹೂಡಿಕೆದಾರರಿಗೆ ಕೊಟ್ಟಿರುವ ಕಾಲಾವಕಾಶ ಮುಂತಾದ ವಿವರಗಳು ಡಿಜಿಟಲೀಕರಣದಿಂದ ಕ್ಷಣಾರ್ಧದಲ್ಲಿ ಸಿಗಲಿವೆ. ಬಹಳ ಹಿಂದಿನ ದಾಖಲೆಗಳನ್ನು ಕಾಪಾಡುವ ಕಷ್ಟವೂ ಇದರಿಂದ ತಪ್ಪಲಿದ್ದು, ಪ್ರತಿಯೊಂದು ಮಾಹಿತಿಯೂ ಶಾಶ್ವತವಾಗಿ ಉಳಿಯಲಿದೆ ಎಂದು ವಿವರಿಸಿದ್ದಾರೆ.

ಹಿಂದೆ ಎಷ್ಟೋ ಪ್ರಕರಣಗಳಲ್ಲಿ ದಾಖಲೆಗಳು ಸರಿಯಾಗಿಲ್ಲದೆ ಒಂದೊಂದೇ ಜಮೀನಿಗೆ ಎರಡೆರಡು ಬಾರಿ ಪರಿಹಾರ ಕೊಟ್ಟಿರುವ ಪ್ರಕರಣಗಳು ಕೂಡ ಸಂಭವಿಸಿವೆ. ಹೊಸ ವ್ಯವಸ್ಥೆಯಿಂದ ಸಂಪೂರ್ಣ ಪಾರದರ್ಶಕತೆ ಬರಲಿದ್ದು, ಹೂಡಿಕೆದಾರರು ತಾವು ಇರುವಲ್ಲಿಂದಲೇ ತಮಗೆ ಬೇಕಾದ ಮಾಹಿತಿ ಪಡೆದುಕೊಳ್ಳಬಹುದು. ಇಲ್ಲಿ ಮಧ್ಯವರ್ತಿಗಳ ಕಾಟ ಇರುವುದಿಲ್ಲ ಎಂದು ಅವರು ನುಡಿದಿದ್ದಾರೆ. ರಾಜ್ಯದಲ್ಲಿ ಈಗ 224 ಕೈಗಾರಿಕಾ ಪ್ರದೇಶಗಳಿವೆ. ಇಲ್ಲಿರುವ ಸಾವಿರಾರು ನಿವೇಶನಗಳ ಸ್ಥಿತಿಗತಿ ಎಲ್ಲವೂ ಸದ್ಯದಲ್ಲೇ ಸ್ಕ್ಯಾನ್ ಆಗಿ, ಸುರಕ್ಷಿತವಾಗಲಿದೆ. ಕೈಗಾರಿಕಾ ಇಲಾಖೆಯಲ್ಲಿ ಜನಸ್ನೇಹಿ ಸುಧಾರಣೆಗಳನ್ನು ತರಬೇಕು ಎನ್ನುವ ಉದ್ದೇಶದಿಂದ ಡಿಜಿಟಲೀಕರಣವನ್ನು ಕೈಗೆತ್ತಿಕೊಳ್ಳಲಾಗುತ್ತಿದೆ ಎಂದು ಪಾಟೀಲ ಹೇಳಿದ್ದಾರೆ.

ಹಳೇ ಕೈಗಾರಿಕಾ ಪ್ರದೇಶಗಳಲ್ಲಿನ ನಿವೇಶನಗಳ ಹಂಚಿಕೆ ಮಾಹಿತಿಯನ್ನು ಸ್ಕ್ಯಾನ್ ಮಾಡುವ ಪ್ರಕ್ರಿಯೆಯನ್ನು ಒಂದು ತಿಂಗಳಲ್ಲಿ ಮಾಡಬೇಕು. ಬಳಿಕ ಆ ದತ್ತಾಂಶವನ್ನು ಇ-ಆಡಳಿತ ಇಲಾಖೆ ಜತೆ ಹಂಚಿಕೊಂಡು ಕೆಐಎಡಿಬಿಗೆ ಬೇಕಾಗುವ ಹಾಗೆ ಸಾಫ್ಟ್‌ವೇರ್ ಅಭಿವೃದ್ಧಿಪಡಿಸಲಾಗುವುದು. ಬಳಿಕ ಅದನ್ನು ಗ್ರಾಮೀಣಾಭಿವೃದ್ಧಿ ಇಲಾಖೆ ಇ- ಸ್ವತ್ತು ತಂತ್ರಾಂಶದ ಜತೆ ಜೋಡಣೆ ಮಾಡಲಾಗುತ್ತದೆ. ಆ ಮೂಲಕ ಇ- ಖಾತಾ ಕೊಡುವುದು ಸೇರಿದಂತೆ ಇತರ ಪ್ರಕ್ರಿಯೆಗಳಿಗೂ ಅನುಕೂಲ ಆಗಲಿದೆ ಎಂದು ಅವರು ಹೇಳಿದರು. ಸಭೆಯಲ್ಲಿ ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್, ಆಯುಕ್ತೆ ಖುಷ್ಬೂ ಗೋಯಲ್, ಕೆಐಎಡಿಬಿ ಸಿಇಒ ಗೋವಿಂದ ರೆಡ್ಡಿ, ಕೈಗಾರಿಕಾ ಸಚಿವರ ತಾಂತ್ರಿಕ ಸಲಹೆಗಾರ ಅರವಿಂದ ಗಲಗಲಿ ಮುಂತಾದವರು ಇದ್ದರು.

# 200 ವೈದ್ಯರ ಕಾಯಂ ನೇಮಕಾತಿ ನಿರ್ಧಾರ: ಸಚಿವ ಯು.ಟಿ. ಖಾದರ್



**ಬೆಂಗಳೂರು, ಜೂ.10:** ಸರ್ಕಾರಿ ಆಸ್ಪತ್ರೆಗಳಲ್ಲಿ ದೀರ್ಘ ಕಾಲದಿಂದ ಕಾಡುತ್ತಿರುವ ವೈದ್ಯರು ಮತ್ತು ಸಿಬ್ಬಂದಿ ಕೊರತೆ ನೀಗಿಸಲು ಆರೋಗ್ಯ ಇಲಾಖೆ ಅತ್ಯಂತ ಮಹತ್ವದ ನಿರ್ಧಾರ ಕೈಗೊಂಡಿದೆ. ಆರೋಗ್ಯ ಸಚಿವ ಯು.ಟಿ. ಖಾದರ್ ಅವರ ನೇತೃತ್ವದಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ಈ ಕುರಿತು ಮಹತ್ತರ ತೀರ್ಮಾನಗಳನ್ನು ತೆಗೆದುಕೊಳ್ಳಲಾಗಿದ್ದು, ಸಾರ್ವಜನಿಕ ಆರೋಗ್ಯ ಕ್ಷೇತ್ರಕ್ಕೆ ಹೊಸ ಭರವಸೆ ಮೂಡಿಸಿದೆ. ರಾಜ್ಯದ ವಿವಿಧ ಕಡೆಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳ ಭರ್ತಿಗೆ ಮೊದಲ ಹಂತವಾಗಿ 200 ವೈದ್ಯರನ್ನು ಕಾಯಂ ಹಾಗೂ ನೇರ ನೇಮಕಾತಿ ಮಾಡಿಕೊಳ್ಳಲು ಇಲಾಖೆ ನಿರ್ಧರಿಸಿದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಈ ನೇಮಕಾತಿ ಪ್ರಕ್ರಿಯೆ ನಡೆಯಲಿದ್ದು, ಪರೀಕ್ಷೆ ಮುಗಿದ ಕೇವಲ ಒಂದು ವಾರದ ಒಳಗಾಗಿ ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಪತ್ರ ನೀಡಲು ನಿರ್ಧಾರ ಮಾಡಲಾಗಿದೆ. ಈ 200 ವೈದ್ಯರ ನೇಮಕಾತಿಗೆ ಆರ್ಥಿಕ ಇಲಾಖೆಯಿಂದ ಈಗಾಗಲೇ ಅಧಿಕೃತ ಅನುಮೋದನೆ ಕೂಡ ದೊರೆತಿದೆ.ಸದ್ಯ ರಾಜ್ಯದ ಸರ್ಕಾರಿ ಆಸ್ಪತ್ರೆಗಳಲ್ಲಿ ಒಟ್ಟು 1,280 ವೈದ್ಯರ ಕೊರತೆಯಿದೆ ಎಂದು ಅಂದಾಜಿಸಲಾಗಿದೆ. ವೈದ್ಯರ ಜೊತೆಗೆ ಆಸ್ಪತ್ರೆಗಳ ಸುಗಮ ನಿರ್ವಹಣೆಗೆ ಅಗತ್ಯವಿರುವ ಪ್ಯಾರಾ ಮೆಡಿಕಲ್ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳಲು ಇಲಾಖೆ ಮುಂದಾಗಿದೆ. ಇದರ ಭಾಗವಾಗಿ 400 ನರ್ಸ್‌ಗಳು, 400 ಫಾರ್ಮಾಸಿಸ್ಟ್‌ಗಳು ಹಾಗೂ 400 ಲ್ಯಾಬ್ ಟೆಕ್ನಿಷಿಯನ್ ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕವೇ ಖಾಯಂ ಆಗಿ ಭರ್ತಿ ಮಾಡಿಕೊಳ್ಳಲು ಸಭೆಯಲ್ಲಿ ಒಪ್ಪಿಗೆ ಸೂಚಿಸಲಾಗಿದೆ.

ತುರ್ತು ಅಗತ್ಯತೆಗಳನ್ನು ಪೂರೈಸಲು ತಕ್ಷಣವೇ ಜಾರಿಗೆ ಬರುವಂತೆ ಗುತ್ತಿಗೆ ಆಧಾರದ ಮೇಲೆ 1,000 ವೈದ್ಯರನ್ನು ನೇಮಕ ಮಾಡಿಕೊಳ್ಳಲು ಆರೋಗ್ಯ ಇಲಾಖೆ ನಿರ್ಧರಿಸಿದೆ. ಈ ಹುದ್ದೆಗಳಿಗೆ ಯಾವುದೇ ಲಿಖಿತ ಪರೀಕ್ಷೆ ಇರುವುದಿಲ್ಲ, ಬದಲಾಗಿ ನೇರ ಸಂದರ್ಶನದ ಮೂಲಕ ಆಯ್ಕೆ ಪ್ರಕ್ರಿಯೆ ನಡೆಯಲಿದೆ. ಆಸಕ್ತ ವೈದ್ಯರು ಆಯಾ ಜಿಲ್ಲೆಯ ಜಿಲ್ಲಾ ಆರೋಗ್ಯ ಅಧಿಕಾರಿಗಳಿಗೆ ನೇರವಾಗಿ ಅರ್ಜಿ ಸಲ್ಲಿಸಿ, ಸಂದರ್ಶನದಲ್ಲಿ ಭಾಗವಹಿಸಬಹುದಾಗಿದೆ.: ಗುತ್ತಿಗೆ ಆಧಾರದ ಮೇಲೆ ಸೇವೆಗೆ ಸೇರುವ ವೈದ್ಯರಿಗೆ ಇಲಾಖೆಯು ಮತ್ತೊಂದು ಸುವರ್ಣ ಅವಕಾಶವನ್ನು ನೀಡಿದೆ. ಗುತ್ತಿಗೆ ಅವಧಿಯಲ್ಲಿ ವೈದ್ಯರು ತೋರುವ ಸೇವಾ ಸಾಧನೆ ಮತ್ತು ಕರ್ತವ್ಯ ನಿಷ್ಠೆಯನ್ನು ಪರಿಗಣಿಸಿ, ಮುಂದಿನ ದಿನಗಳಲ್ಲಿ ಅವರನ್ನು ಖಾಯಂ ಗೊಳಿಸುವ ಬಗ್ಗೆ ಸರ್ಕಾರ ಭರವಸೆ ನೀಡಿದೆ. ವೈದ್ಯರ 5 ವರ್ಷಗಳ ಸುದೀರ್ಘ ಸೇವಾ ಸಾಧನೆಯನ್ನು ಸಂಪೂರ್ಣವಾಗಿ ಪರಿಶೀಲಿಸಿದ ಬಳಿಕ ಅವರ ಸೇವೆಯನ್ನು ಕಾಯಂಗೊಳಿಸುವ ಕುರಿತು ಅಂತಿಮ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದು ಸಚಿವ ಯು.ಟಿ ಖಾದರ್ ನೇತೃತ್ವದ ಸಭೆಯಲ್ಲಿ ತೀರ್ಮಾನಿಸಲಾಗಿದೆ.

# ಪ್ರಧಾನಿಯಾಗಿ 4,399 ದಿನ ಪೂರೈಸಿದ ನಮೋ

■ ಒಂದನೇ ಪುಟದಿಂದ...

ಯೋಜನೆಗಳು, ಜಮ್ಮು ಮತ್ತು ಕಾಶ್ಮೀರದಲ್ಲಿ 370 ನೇ ವಿಧಿಯನ್ನು ರದ್ದುಪಡಿಸುವುದು, ಪೌರತ್ವ ತಿದ್ದುಪಡಿ ಕಾಯ್ದೆಯ ಅನುಷ್ಠಾನ ಮತ್ತು ಡಿಜಿಟಲ್ ಆಡಳಿತದತ್ತ ಮಹತ್ವಾಕಾಂಕ್ಷೆಯ ತಳ್ಳುವಿಕೆ ಸೇರಿದಂತೆ ಹಲವಾರು ಪ್ರಮುಖ ನೀತಿ ಉಪಕ್ರಮಗಳ ಅಧ್ಯಕ್ಷತೆ ವಹಿಸಿದ್ದಾರೆ. ಅವರ ಸರ್ಕಾರವು ಭಾರತವನ್ನು ಜಾಗತಿಕ ದಕ್ಷಿಣದ ಪ್ರಮುಖ ಧ್ವನಿಯಾಗಿ ಮತ್ತು ಹೆಚ್ಚುತ್ತಿರುವ ಬಹುಧ್ರುವೀಯ ವಿಶ್ವ ಕ್ರಮದಲ್ಲಿ ಪ್ರಮುಖ ಪಾತ್ರ ವಹಿಸುವ ಸ್ಥಾನದಲ್ಲಿ ಇರಿಸಲು ಪ್ರಯತ್ನಿಸಿದೆ.



**ಎನ್ಡಿಎ ನಾಯಕರಿಂದ ಸನ್ಮಾನ:** ಈ ಮಹತ್ವದ ಸಾಧನೆಯನ್ನು ಸಂಭ್ರಮಿಸಲು ಎನ್ಡಿಎ 72 ಪ್ರಮುಖ ನಾಯಕರು ಸಭೆ ಸೇರಲಿದ್ದು, ಮೋದಿ ಅವರ ಆಡಳಿತ ವೈಖರಿ ಮತ್ತು ನಾಯಕತ್ವವನ್ನು ಶ್ಲಾಘಿಸಿ ಜಂಟಿ ನಿರ್ಣಯವನ್ನು ಅಂಗೀಕರಿಸಲಿದ್ದಾರೆ. ಇದೇ ವೇಳೆ ಪ್ರಧಾನಿ ಮೋದಿ ಅವರಿಗೆ ವಿಶೇಷ ಗೌರವ ಸನ್ಮಾನಿಸಲಾಯಿತು.

**ರಾಷ್ಟ್ರವ್ಯಾಪಿ ಪ್ರಾರ್ಥನೆ:** ಪ್ರಧಾನಿ ನರೇಂದ್ರ ಮೋದಿ ಅವರು ಅಧಿಕಾರದಲ್ಲಿ 4,399 ದಿನಗಳನ್ನು ಪೂರೈಸಿದ ಮತ್ತು ಭಾರತದ ಇತಿಹಾಸದಲ್ಲಿ ಅತಿ ಹೆಚ್ಚು ಕಾಲ ಪ್ರಜಾಸತ್ತಾತ್ಮಕವಾಗಿ ಆಯ್ಕೆಯಾದ ಪ್ರಧಾನಿಯಾದುದನ್ನು ಗುರುತಿಸಲು ದೇಶಾದ್ಯಂತ ಬಿಜೆಪಿ ನಾಯಕರು ಬುಧವಾರ ದೇವಾಲಯಗಳು, ಗುರುದ್ವಾರಗಳು ಮತ್ತು ದರ್ಗಾಗಳಲ್ಲಿ ಪ್ರಾರ್ಥನೆಗಳು, ಧಾರ್ಮಿಕ ಸಮಾರಂಭಗಳು ಮತ್ತು ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಆಯೋಜಿಸಿದರು. ಈ ಕಾರ್ಯಕ್ರಮಗಳ ನೇತೃತ್ವವನ್ನು ಬಿಜೆಪಿ ಅಧ್ಯಕ್ಷ ನಿತಿನ್ ನವೀನ್ ವಹಿಸಿದ್ದರು. ಅವರು ನವದೆಹಲಿಯ ಝುಂಡೆವಾಲನ್ ದೇವಿ ದೇವಸ್ಥಾನದಲ್ಲಿ ದೆಹಲಿ ಬಿಜೆಪಿ ಅಧ್ಯಕ್ಷ ಹರ್ಷ ಮಲ್ಹೋತ್ರಾ, ಸಂಸದೆ ಬಾನ್ಸುರಿ ಸ್ವರಾಜ್ ಮತ್ತು ಇತರ ಪಕ್ಷದ ನಾಯಕರೊಂದಿಗೆ ಪ್ರಾರ್ಥನೆ ಸಲ್ಲಿಸಿದರು.

# ಎರಡೂವರೆ ತಿಂಗಳಲ್ಲಿ ರಾಷ್ಟ್ರೀಯ ಗ್ರಿಡ್‌ಗೆ 423 ಕೋಟಿ ರೂ. ವಿದ್ಯುತ್ ಮಾರಾಟ: ಕೆ.ಜೆ. ಜಾರ್ಜ್

**ಹಿರಿಯ ಅಧಿಕಾರಿಗಳ ಜತೆ ಇಂಧನ ಸಚಿವರ ಸಭೆ**
**ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ**
**ಮಾನ್ಸೂನ್ ಸಿದ್ಧತೆಗಳ ಕುರಿತು ಚರ್ಚೆ**

**ಬೆಂಗಳೂರು, ಜೂ.10:** ಪವರ್ ಕಂಪನಿ ಆಫ್ ಕರ್ನಾಟಕ ಮೂಲಕ ರಾಜ್ಯವು ಕಳೆದ ಎರಡೂವರೆ ತಿಂಗಳಲ್ಲಿ ಪ್ರತಿ ಯೂನಿಟ್‌ಗೆ 9.08 ರೂ.ನಂತೆ ಬರೋಬ್ಬರಿ 423 ಕೋಟಿ ರೂಪಾಯಿ ಮೌಲ್ಯದ ವಿದ್ಯುತ್ತನ್ನು ರಾಷ್ಟ್ರೀಯ ಗ್ರಿಡ್‌ಗೆ ಮಾರಾಟ ಮಾಡಿದೆ ಎಂದು ಇಂಧನ ಹಾಗೂ ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ತಿಳಿಸಿದರು.

ಬೆಸ್ಕಾಂ ಕಾರ್ಪೊರೇಟ್ ಕಚೇರಿಯಲ್ಲಿ ಬುಧವಾರ ಹಿರಿಯ ಅಧಿಕಾರಿಗಳ ಸಭೆ ನಡೆಸಿದ ಸಚಿವರು, ಮಾನ್ಸೂನ್ ಸಿದ್ಧತೆ, ಕುಸುಮ್ ಯೋಜನೆ, ಮುಖ್ಯಮಂತ್ರಿ ಸೌರ ಕೃಷಿ ಯೋಜನೆ ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿ ಪರಿಶೀಲಿಸಿ ಮಾತನಾಡಿದರು.

2026ರ ಏಪ್ರಿಲ್ – ಜೂನ್ (8ರವರೆಗೆ) ಅವಧಿಯಲ್ಲಿ 423 ಕೋಟಿ ರೂಪಾಯಿ ಮೌಲ್ಯದ ವಿದ್ಯುತ್ತನ್ನು ರಾಷ್ಟ್ರೀಯ ಗ್ರಿಡ್‌ಗೆ ಮಾರಾಟ ಮಾಡಿದ್ದೇವೆ. ಹಗಲಿನ ವೇಳೆ ಕಡಿಮೆ ದರಕ್ಕೆ ವಿದ್ಯುತ್ ಖರೀದಿಸಿ, ರಾತ್ರಿ ವೇಳೆ ಜಲ ಮತ್ತು ಉಷ್ಣ ವಿದ್ಯುತ್ ಸ್ಥಾವರಗಳಲ್ಲಿ ವಿದ್ಯುತ್ ಉತ್ಪಾದಿಸಿ ಹೆಚ್ಚಿನ ಬೆಲೆಗೆ ಮಾರಾಟ ಮಾಡಲಾಗಿದೆ.

ಈ ಬೇಸಿಗೆಯಲ್ಲಿ ವಿದ್ಯುತ್ ಬೇಡಿಕೆಯನ್ನು ಸಮರ್ಥವಾಗಿ ಪೂರೈಸುವ ಜತೆಗೆ ಈ ಸಾಧನೆ ಮಾಡಿದ್ದೇವೆ. ವಿದ್ಯುತ್ ಉತ್ಪಾದನೆ, ಗ್ರಿಡ್ ನಿರ್ವಹಣೆ ಮತ್ತು ಇಂಧನ ಮಾರುಕಟ್ಟೆಯಲ್ಲಿ



ವ್ಯಾವಹಾರಿಕ ಜಾಣ್ಮೆಯ ಫಲ ಇದು" ಎಂದು ಇಂಧನ ಸಚಿವರು ಹೇಳಿದರು.

ಕಳೆದ ಮೂರು ಹಣಕಾಸು ವರ್ಷಗಳಲ್ಲಿ ಇಂಧನ ಬೇಡಿಕೆ ಮತ್ತು ಬಳಕೆಯ ಕುರಿತು ಪ್ರಮುಖ ಅಂಕಿ-ಅಂಶಗಳನ್ನು ನೀಡಿದ ಸಚಿವ ಕೆ.ಜೆ. ಜಾರ್ಜ್, "2023-24ರ ಆರ್ಥಿಕ ವರ್ಷದಲ್ಲಿ ರಾಜ್ಯದ ಗರಿಷ್ಠ ಬೇಡಿಕೆ 18,478 ದಶಲಕ್ಷ ಯೂನಿಟ್ ಆದರೆ ಒಟ್ಟು ಬಳಕೆ 10,451 ದಶಲಕ್ಷ ಯೂನಿಟ್‌ನಷ್ಟಿತ್ತು. ವರ್ಷದಿಂದ ವರ್ಷಕ್ಕೆ ಇದು ಶೇ. 19ರಷ್ಟು ಹೆಚ್ಚಳವನ್ನು ಸೂಚಿಸುತ್ತದೆ.

ನಂತರ 2024-25ರ ಅವಧಿಯಲ್ಲಿ ಗರಿಷ್ಠ ಬೇಡಿಕೆ 17,682 ದಶಲಕ್ಷ ಯೂನಿಟ್ ಆದರೆ ಮತ್ತು ಒಟ್ಟು ಬಳಕೆ 9,324 ದಶಲಕ್ಷ ಯೂನಿಟ್‌ನಷ್ಟಿತ್ತು.

ವರ್ಷದಿಂದ ವರ್ಷಕ್ಕೆ ಶೇ.28ರಷ್ಟು ಹೆಚ್ಚಳವನ್ನು ದಾಖಲಿಸಿದೆ. ಪ್ರಸಕ್ತ ಆರ್ಥಿಕ ವರ್ಷ ಜೂನ್ 8ರವರೆಗಿನ ಗರಿಷ್ಠ ಬೇಡಿಕೆ 13,904 ದಶಲಕ್ಷ ಯೂನಿಟ್ ಆಗಿದ್ದು, ಬಳಕೆ 2,103 ದಶಲಕ್ಷ ಯೂನಿಟ್ ನಷ್ಟಿದೆ. ಇದು ವರ್ಷದಿಂದ ವರ್ಷಕ್ಕೆ ಶೇ. 14ರಷ್ಟು ಹೆಚ್ಚಳವನ್ನು ಸೂಚಿಸುತ್ತದೆ ಎಂದರು.

ವಿದ್ಯುತ್ ಉತ್ಪಾದನೆ- "ವಿದ್ಯುತ್ ಉತ್ಪಾದನೆಯಲ್ಲಿ ಸದೃಢ ಹೆಜ್ಜೆಗಳನ್ನಿಡುತ್ತಿರುವ ರಾಜ್ಯವು 2025-26ರಲ್ಲಿ ಉಷ್ಣ, ಜಲ, ಅನಿಲ, ಸೌರ, ಪವನ ಮತ್ತು ತ್ಯಾಜ್ಯದಿಂದ ಇಂಧನ ಮೂಲಗಳಿಂದ ಒಟ್ಟು ವಿದ್ಯುತ್ 38,041 ಮಿಲಿಯನ್ ಯೂನಿಟ್ ಉತ್ಪಾದಿಸಿದೆ. 2026-27ರ ಅಂದಾಜಿಸಲಾಗಿರುವ ವಿದ್ಯುತ್ ಉತ್ಪಾದನೆಯ ಪ್ರಮಾಣ 38,205 ದಶಲಕ್ಷ ಯೂನಿಟ್ ಆಗದೆ. ಗುಣಮಟ್ಟದ ವಿದ್ಯುತ್ ಪೂರೈಕೆ ಮತ್ತು ಸಾಮರ್ಥ್ಯ ವೃದ್ಧಿ ಜತೆಗೆ ವಿದ್ಯುತ್ ಮೂಲಸೌಕರ್ಯ ಸುಧಾರಣೆ ಮೂಲಕ ಇಂಧನ ಇಲಾಖೆಯು ಸುಸ್ಥಿರ ಪ್ರಗತಿ ಸಾಧಿಸುತ್ತಿದೆ ಎಂದು ಜಾರ್ಜ್ ಹೇಳಿದರು.

ಇಂಧನ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ, ಕೆಪಿಟಿಸಿಎಲ್ ವ್ಯವಸ್ಥಾಪಕ ನಿರ್ದೇಶಕ ರಾಮ್ ಪ್ರಸಾತ್ ಮನೋಹರ್, ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ ಡಾ.ಎನ್. ಶಿವಶಂಕರ, ಪಿಸಿಕೆಎಲ್ ವ್ಯವಸ್ಥಾಪಕ ನಿರ್ದೇಶಕ ಕೋದಂಡಪಾಣಿ, ಕ್ರೆಡಲ್ ವ್ಯವಸ್ಥಾಪಕ ನಿರ್ದೇಶಕ ಕೆ.ಪಿ. ರುದ್ರಪ್ಪಯ್ಯ ಹಾಗೂ ಇತರ ಎಸ್ಕಾಂಗಳ ವ್ಯವಸ್ಥಾಪಕ ನಿರ್ದೇಶಕರು ಮತ್ತು ಹಿರಿಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

# ಮೀನಾಕ್ಷಿ ನಟರಾಜನ್ ನಾಮಪತ್ರ ತಿರಸ್ಕಾರ: ಪ್ರಜಾಪ್ರಭುತ್ವದ ವಿರುದ್ಧದ ಅತಿದೊಡ್ಡ ಅಣಕ– ಸಿದ್ದರಾಮಯ್ಯ ಟೀಕೆ

**ಬೆಂಗಳೂರು, ಜೂ.10:** ಮಾಜಿ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ಕಾರ್ಯಕಾರಿಣಿ ಸಮಿತಿ ಸದಸ್ಯರಾದ ಸಿದ್ದರಾಮಯ್ಯ ಅವರು ಕೇಂದ್ರ ಸರ್ಕಾರ ಮತ್ತು ಚುನಾವಣಾ ಆಯೋಗದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಮಧ್ಯಪ್ರದೇಶದ ರಾಜ್ಯಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೀನಾಕ್ಷಿ ನಟರಾಜನ್ ಅವರ ನಾಮಪತ್ರವನ್ನು ತಿರಸ್ಕರಿಸಿರುವುದು ಪ್ರಜಾಪ್ರಭುತ್ವದ ವಿರುದ್ಧದ ಅತಿದೊಡ್ಡ ಅಣಕ ಹಾಗೂ ಸ್ಪಷ್ಟ ರಾಜಕೀಯ ಷಡ್ಯಂತ್ರ ಎಂದು ಅವರು ಆರೋಪಿಸಿದ್ದಾರೆ.

ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಚುನಾವಣಾ ಆಯೋಗವು ಪ್ರಧಾನಿ ನರೇಂದ್ರ ಮೋದಿ ಅವರ ಕಪಿಮುಷ್ಠಿಯಲ್ಲಿದೆ.



ಮೀನಾಕ್ಷಿ ನಟರಾಜನ್ ನಾಮಪತ್ರ ಸಲ್ಲಿಕೆಯಲ್ಲಿ ಯಾವುದೇ ಲೋಪಗಳಿರಲಿಲ್ಲ. ಅವರ ವಿರುದ್ಧ ಯಾವುದೇ ಕ್ರಿಮಿನಲ್ ಪ್ರಕರಣಗಳಿಲ್ಲ. ಕೇವಲ ಖಾಸಗಿ ದೂರಿನನ್ವಯ ನ್ಯಾಯಾಲಯದಿಂದ ಬಂದಿದ್ದ ಶೋಕಾಸ್ ನೋಟಿಸ್ ವಿಷಯ ಅಫಿಡವಿಟ್‌ನಲ್ಲಿ ಸೇರಿಸುವ ಅಗತ್ಯವಿಲ್ಲ ಎಂದು ಖುದ್ದು ಆಯೋಗದ ನಿಯಮಗಳೇ ಸ್ಪಷ್ಟವಾಗಿ ಹೇಳುತ್ತವೆ.

ಆದರೂ, ಆಯೋಗವು ಸ್ವತಂತ್ರವಾಗಿ ನಿರ್ಧಾರ ತೆಗೆದುಕೊಳ್ಳದೆ, ಪಕ್ಷಪಾತದಿಂದ ಹಾಗೂ ಸಂಪೂರ್ಣ ಕಾನೂನು ಬಾಹಿರವಾಗಿ ನಾಮಪತ್ರವನ್ನು ತಿರಸ್ಕರಿಸಿದೆ ಎಂದು ಕಿಡಿಕಾರಿದ್ದಾರೆ.

ಮಧ್ಯಪ್ರದೇಶದಲ್ಲಿ ಕೇವಲ ಇಬ್ಬರು ಅಭ್ಯರ್ಥಿಗಳನ್ನು ಮಾತ್ರ ಗೆಲ್ಲಿಸಿಕೊಳ್ಳುವ ಸಂಖ್ಯಾಬಲವಿದ್ದರೂ, ಬಿಜೆಪಿ ಮೂರನೇ ಅಭ್ಯರ್ಥಿಯನ್ನು ಕಣಕ್ಕಿಳಿಸಿತ್ತು. ಕಾಂಗ್ರೆಸ್ ಶಾಸಕರಿಗೆ ದೊಡ್ಡ ಮೊತ್ತದ ಹಣದ ಆಮಿಷವೊಡ್ಡಿ ಕುದುರೆ ವ್ಯಾಪಾರಕ್ಕೆ ಯತ್ನಿಸಿತ್ತು. ಆದರೆ, ಕಾಂಗ್ರೆಸ್ ಶಾಸಕರು ಒಗ್ಗಟ್ಟು ಪ್ರದರ್ಶಿಸಿದ ಕಾರಣ ಬಿಜೆಪಿಯ ಹುನ್ನಾರ ವಿಫಲವಾಯಿತು. ಚುನಾವಣೆಯಲ್ಲಿ ನ್ಯಾಯಯುತವಾಗಿ ಗೆಲ್ಲಲು ಸಾಧ್ಯವಾಗದಿದ್ದಾಗ, ಕೊನೆಯ ಅಸ್ತ್ರವಾಗಿ ಚುನಾವಣಾ ಆಯೋಗವನ್ನು ಬಳಸಿಕೊಂಡು ಬಿಜೆಪಿ ಈ ಕೃತ್ಯವೆಸಗಿದೆ



ಎಂದು ಸಿದ್ದರಾಮಯ್ಯ ವಿವರಿಸಿದ್ದಾರೆ.

ಬಿಜೆಪಿಯು ಚುನಾವಣಾ ಅಕ್ರಮಗಳು, ಎಸ್‌ಐಆರ್ ನಂತಹ ಕಳ್ಳಮಾರ್ಗಗಳು ಹಾಗೂ ಮತಗಳ್ಳತನವನ್ನು ಅಧಿಕೃತ ದಂಧೆಯನ್ನಾಗಿಸಿಕೊಂಡಿದೆ ಎಂದು ಟೀಕಿಸಿರುವ ಸಿದ್ಧರಾಮಯ್ಯ, ರಾಜ್ಯಸಭಾ ಚುನಾವಣೆಯಲ್ಲೂ ಅಕ್ರಮ ಎಸಗುವ ಮೂಲಕ ಸ್ಥಾನಗಳ್ಳತನಕ್ಕೆ ಇಳಿದಿದೆ. ಮತದಾರರ ದಿಕ್ಕು ತಪ್ಪಿಸುವುದು, ಪ್ರಾದೇಶಿಕ ಪಕ್ಷಗಳನ್ನು ಒಡೆಯುವುದು ಹಾಗೂ ಸ್ವತಂತ್ರ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಳ್ಳುವುದು ಆ ಪಕ್ಷದ ಕಾರ್ಯತಂತ್ರವಾಗಿದೆ ಎಂದು ದೂರಿದ್ದಾರೆ.

ಲೋಕಸಭೆಯಲ್ಲಿ ಕೃತಕ ಸಂಖ್ಯಾಬಲವನ್ನು ಸೃಷ್ಟಿಸಿಕೊಂಡು ತಮ್ಮ ಪ್ರಜಾಪ್ರಭುತ್ವ ಹಾಗೂ ಸಂವಿಧಾನ ವಿರೋಧಿ ಮಸೂದೆಗಳನ್ನು ಯಾವುದೇ ಪ್ರತಿರೋಧವಿಲ್ಲದೆ ಸುಲಭವಾಗಿ ಜಾರಿಗೊಳಿಸುವುದು ಬಿಜೆಪಿಯ ಅಸಲಿ ಗುರಿಯಾಗಿದೆ. ಪ್ರಜಾಪ್ರಭುತ್ವ ಮತ್ತು ಸಂವಿಧಾನದ ಮೇಲಿನ ಇಂತಹ ದಾಳಿಗಳನ್ನು ಕಾಂಗ್ರೆಸ್ ಪಕ್ಷವು ಬಲವಾಗಿ ವಿರೋಧಿಸಲಿದ್ದು, ಪ್ರತಿಯೊಂದು ಅನ್ಯಾಯದ ವಿರುದ್ಧ ದೇಶದ ನಾಗರಿಕರ ಪರವಾಗಿ ನಿಂತು ಹೋರಾಡಲಿದೆ ಎಂದು ತಿಳಿಸಿದ್ದಾರೆ.



ಪ್ರಧಾನಿ ನರೇಂದ್ರ ಮೋದಿ ಅವರು ಭಾರತದ ಅತಿಹೆಚ್ಚು ಕಾಲ ಸೇವೆಸಲ್ಲಿಸಿದ ಪ್ರಧಾನಿಯಾಗಿ 4,399 ದಿನಗಳ ಐತಿಹಾಸಿಕ ಮೈಲಿಗಲ್ಲು ಸಾಧಿಸಿದ ಹಿನ್ನೆಲೆಯಲ್ಲಿ ಬುಧವಾರ ಬೆಂಗಳೂರಿನ ವಿಧಾನಸೌಧದಲ್ಲಿ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಸಿಹಿ ವಿತರಿಸಿದರು.

## ಮುಂದಿನ ವಾರ ಅಧಿಸೂಚನೆ, 100 ದಿನದೊಳಗೆ ಅದಾಲತ್ ಮಾದರಿಯಲ್ಲಿ ಪ್ರಕ್ರಿಯೆ

# ರಾಜ್ಯದಲ್ಲಿ 15 ಸಾವಿರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕ



**ಬೆಂಗಳೂರು, ಜೂ.10:** ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳ ಭರ್ತಿಗಾಗಿ ಕಾಯುತ್ತಿದ್ದ ಉದ್ಯೋಗಾಕಾಂಕ್ಷಿಗಳಿಗೆ ಶಿಕ್ಷಣ ಇಲಾಖೆ ಸಿಹಿಸುದ್ದಿ ನೀಡಿದೆ. ಮುಂದಿನ 100 ದಿನಗಳ ಒಳಗೆ ಬರೋಬ್ಬರಿ 15,000 ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸರ್ಕಾರ ಅದಾಲತ್ ಮಾದರಿಯಲ್ಲಿ ಸಜ್ಜಾಗಿದೆ.

ಈ ಬೃಹತ್ ನೇಮಕಾತಿಗೆ ಸಂಬಂಧಿಸಿದ ಅಧಿಕೃತ ಅಧಿಸೂಚನೆಯು ಮುಂದಿನ ವಾರ ಹೊರಬೀಳಲಿದೆ ಎಂದು ಇಲಾಖೆಯ ಉನ್ನತ ಮೂಲಗಳು ತಿಳಿಸಿವೆ.

ಮುಂದಿನ 100 ದಿನಗಳ ಒಳಗೆ 15,000 ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿ ಪೂರ್ಣ. ಸರ್ಕಾರಿ ಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣಕ್ಕಾಗಿ ಪ್ರತ್ಯೇಕವಾಗಿ 2,500 ಐಟಿ ಶಿಕ್ಷಕರ ನೇಮಕ. ಮುಂದಿನ ವಾರವೇ ಅಧಿಸೂಚನೆ ಹೊರ ಬೀಳಲಿದ್ದು ಪರೀಕ್ಷೆ ಮತ್ತು ಫಲಿತಾಂಶ ಎರಡು ತಿಂಗಳಲ್ಲಿ ಪ್ರಕಟವಾಗಲಿದೆ.

ಪ್ರಸ್ತುತ ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಒಟ್ಟು 80 ಸಾವಿರಕ್ಕೂ ಹೆಚ್ಚು ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಕೊರತೆಯಿದೆ. ಈ ಬೃಹತ್ ಕೊರತೆಯನ್ನು ಹಂತಹಂತವಾಗಿ ನೀಗಿಸಲು ಒಟ್ಟು 51 ಸಾವಿರ ಶಿಕ್ಷಕರ ನೇಮಕಾತಿಗೆ ಆರ್ಥಿಕ ಇಲಾಖೆಯು ಈಗಾಗಲೇ ಹಸಿರು ನಿಶಾನೆ ತೋರಿಸಿದೆ. ಇದರ ಮೊದಲ ಭಾಗವಾಗಿ ಪ್ರಸ್ತುತ ಹಂತದಲ್ಲಿ 15 ಸಾವಿರ ಶಿಕ್ಷಕರನ್ನು ನೇಮಿಸಿಕೊಳ್ಳಲಾಗುತ್ತಿದೆ.

ಇದರಲ್ಲಿ ಪ್ರಾಥಮಿಕ, ಪ್ರೌಢಶಾಲೆ ಹಾಗೂ ದೈಹಿಕ ಶಿಕ್ಷಣ ಶಿಕ್ಷಕರು ಸೇರಿದ್ದಾರೆ. ಇದರೊಂದಿಗೆ, ಸರ್ಕಾರಿ ಶಾಲೆಗಳಲ್ಲಿ 1ನೇ ತರಗತಿಯಿಂದಲೇ ಗಣಕಯಂತ್ರ (ಕಂಪ್ಯೂಟರ್) ಶಿಕ್ಷಣವನ್ನು ಕಡ್ಡಾಯವಾಗಿ ನೀಡುವ ಮಹತ್ವಾಕಾಂಕ್ಷಿ ಯೋಜನೆಯಡಿ, ಪ್ರತ್ಯೇಕವಾಗಿ 2,500 ಐಟಿ (ಮಾಹಿತಿ ತಂತ್ರಜ್ಞಾನ) ಶಿಕ್ಷಕರನ್ನು ನೇಮಕ ಮಾಡಿಕೊಳ್ಳುತ್ತಿರುವುದು ಈ ಬಾರಿಯ ವಿಶೇಷವಾಗಿದೆ.

ಚಾಲ್ತಿಯಲ್ಲಿರುವ ಇದೇ ಶೈಕ್ಷಣಿಕ ವರ್ಷದಲ್ಲೇ ಈ ಎಲ್ಲಾ ಹೊಸ ಶಿಕ್ಷಕರು ಶಾಲೆಗಳಲ್ಲಿ ಬೋಧನೆಗೆ ಲಭ್ಯವಾಗಲಿದ್ದಾರೆ.

ಶಿಕ್ಷಣ ಇಲಾಖೆಯು ಹೊಸ ಸಿಆರ್ ಆಂಡ್ ಆರ್ ನಿಯಮಾವಳಿಗಳ ಅಡಿಯಲ್ಲಿ PSTR, GPSTR ಹಾಗೂ HSTR ಹುದ್ದೆಗಳ ಸಮಗ್ರ ವಿವರಗಳನ್ನು ಶೀಘ್ರದಲ್ಲೇ ಪ್ರಕಟಿಸಲಿದೆ. ಸಾಮಾನ್ಯವಾಗಿ ವರ್ಷಗಟ್ಟಲೆ ಎಳೆಯುವ ನೇಮಕಾತಿ ಪ್ರಕ್ರಿಯೆಗೆ ಈ ಬಾರಿ ಬ್ರೇಕ್ ಹಾಕಲಾಗಿದ್ದು, ಶರವೇಗದಲ್ಲಿ ಪ್ರಕ್ರಿಯೆ ಮುಗಿಸಲು ಇಲಾಖೆ ಕಾರ್ಯಸೂಚಿ ಸಿದ್ಧಪಡಿಸಿದೆ. ಅಧಿಸೂಚನೆ ಪ್ರಕಟವಾದ ಕೇವಲ ಎರಡು ತಿಂಗಳ ಒಳಗೆ ಲಿಖಿತ ಪರೀಕ್ಷೆ ನಡೆಸಿ, ಅತ್ಯಂತ ಕಡಿಮೆ ಅವಧಿಯಲ್ಲಿ ಫಲಿತಾಂಶವನ್ನೂ ಪ್ರಕಟಿಸಲಾಗುತ್ತದೆ.

ಕಳೆದ ಹಲವು ವರ್ಷಗಳಿಂದ ಶಿಕ್ಷಕರ ಹುದ್ದೆಗಾಗಿ ತಪಸ್ಸು ಮಾಡುತ್ತಿದ್ದ ಲಕ್ಷಾಂತರ ಅಭ್ಯರ್ಥಿಗಳಿಗೆ ಇದು ಸುವರ್ಣ ಅವಕಾಶವಾಗಿದ್ದು, ತಕ್ಷಣವೇ ಪರೀಕ್ಷಾ ಸಿದ್ಧತೆ ಆರಂಭಿಸುವಂತೆ ಶಿಕ್ಷಣ ಇಲಾಖೆ ಪ್ರಕಟಣೆಯಲ್ಲಿ ಕೋರಿದೆ.

## ರಾಮಲಿಂಗಾರೆಡ್ಡಿಗೆ ಮುಜರಾಯಿ ಇಲಾಖೆ ನೀಡಿ
### ರಾಜ್ಯ ಅರ್ಚಕರ ಸಂಘದಿಂದ ಮುಖ್ಯಮಂತ್ರಿಗೆ ಮನವಿ

**ಬೆಂಗಳೂರು, ಜೂ.10:** ಖಾತೆ ಹಂಚಿಕೆ ಕುರಿತ ಚರ್ಚೆ ಮುಂದುವರಿದಿರುವ ನಡುವೆಯೇ ಮುಜರಾಯಿ ಇಲಾಖೆ ಖಾತೆಯನ್ನು ರಾಮಲಿಂಗಾರೆಡ್ಡಿ ಅವರಿಗೇ ನೀಡುವಂತೆ ರಾಜ್ಯ ಮುಜರಾಯಿ ದೇವಾಲಯಗಳ ಅರ್ಚಕರ ಸಂಘ ಮುಖ್ಯಮಂತ್ರಿಗೆ ಮನವಿ ಮಾಡಿದೆ.

ಒಂದೆಡೆ ಕೆಲ ಸಚಿವರು ತಮಗೆ ಇಷ್ಟದ ಖಾತೆ ನೀಡುವಂತೆ ಹೈಕಮಾಂಡ್ ಮಟ್ಟದಲ್ಲಿ ಲಾಬಿ ನಡೆಸುತ್ತಿರುವಾಗ, ಮತ್ತೊಂದೆಡೆ ಅರ್ಚಕರ ಸಂಘವೇ ನೇರವಾಗಿ ರಾಮಲಿಂಗಾರೆಡ್ಡಿ ಪರ ಬ್ಯಾಟಿಂಗ್ ಮಾಡಿರುವುದು ರಾಜಕೀಯ ವಲಯದಲ್ಲಿ ಗಮನ ಸೆಳೆದಿದೆ.ಸಂಘದ ರಾಜ್ಯಾಧ್ಯಕ್ಷ ಶ್ರೀವತ್ಸ ಮಾತನಾಡಿ, ರಾಮಲಿಂಗಾರೆಡ್ಡಿ ಅವರು ಮುಜರಾಯಿ ಖಾತೆ ನಿರ್ವಹಿಸಿದ ಅವಧಿಯಲ್ಲಿ ದೇವಸ್ಥಾನಗಳ ಅಭಿವೃದ್ಧಿ, ಒತ್ತುವರಿ ತೆರವು, ಅರ್ಚಕರ ಕಲ್ಯಾಣ ಸೇರಿದಂತೆ ಹಲವು ಮಹತ್ವದ ಕ್ರಮಗಳನ್ನು ಕೈಗೊಂಡಿದ್ದಾರೆ ಎಂದು ಪ್ರಶಂಸಿಸಿದರು. ಯಾವುದೇ ಕಾರಣಕ್ಕೂ ಈ ಖಾತೆಯನ್ನು ಬೇರೆಯವರಿಗೆ ನೀಡಬಾರದು ಎಂದು ಒತ್ತಾಯಿಸಿದರು.

ಅರ್ಚಕರ ಸಂಘದ ಪ್ರಕಾರ, ರಾಜ್ಯದ ಅನೇಕ ಅರ್ಚಕ ಕುಟುಂಬಗಳು ಇನ್ನೂ ಆರ್ಥಿಕ ಸಂಕಷ್ಟದಲ್ಲಿದ್ದು, ಅವರ ಕಲ್ಯಾಣಕ್ಕಾಗಿ ರಾಮಲಿಂಗಾರೆಡ್ಡಿ ಹಲವು ಯೋಜನೆಗಳನ್ನು ರೂಪಿಸಿದ್ದಾರೆ. ವಿಶೇಷವಾಗಿ ಸಿ ದರ್ಜೆ ದೇವಸ್ಥಾನಗಳ ಅರ್ಚಕರ ಸಮಸ್ಯೆಗಳ ಪರಿಹಾರಕ್ಕೆ ಅವರು ಸ್ಪಂದಿಸಿದ್ದಾರೆ ಎಂದು ಸಂಘ ಹೇಳಿದೆ.

ಸಂಘಟನಾ ಕಾರ್ಯದರ್ಶಿ ಮಂಜುನಾಥ್ ದೀಕ್ಷಿತ್ ಮಾತನಾಡಿ, "ಹಿಂದೆ ತಸ್ತೀಕ್ ಹೊರತುಪಡಿಸಿ ಬೇರೆ ಯಾವುದೇ ಸೌಲಭ್ಯ ದೊರೆಯುತ್ತಿರಲಿಲ್ಲ. ಈಗ ಅರ್ಚಕರ ಕುಟುಂಬಗಳಿಗೆ ಹಲವು ಅನುಕೂಲಗಳು ಸಿಕ್ಕಿವೆ. ರಾಮಲಿಂಗಾರೆಡ್ಡಿ ಅವರ ಮೇಲೆ ನಮಗೆ ವಿಶ್ವಾಸ ಮತ್ತು ನಂಬಿಕೆ ಇದೆ" ಎಂದು ಹೇಳಿದರು. ಜುಲೈ 15ರಿಂದ ಆಗಸ್ಟ್ 15ರವರೆಗೆ ರಾಜ್ಯದ ಎಲ್ಲಾ ಮುಜರಾಯಿ ದೇವಸ್ಥಾನಗಳಲ್ಲಿ ಬೃಹತ್ ಸಮಾವೇಶಗಳನ್ನು ನಡೆಸಲು ಸಂಘ ನಿರ್ಧರಿಸಿದೆ.

ಈ ಸಮಾವೇಶಗಳ ಮೂಲಕ ಮುಖ್ಯಮಂತ್ರಿ ಅವರಿಗೆ ರಾಮಲಿಂಗಾರೆಡ್ಡಿಗೆ ಮುಜರಾಯಿ ಖಾತೆ ನೀಡುವಂತೆ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದೆ.

ಇದೇ ವೇಳೆ, ಮುಂದಿನ ತಿಂಗಳು ರಾಮಲಿಂಗಾರೆಡ್ಡಿ ಅವರಿಗೆ ಅಭಿನಂದನಾ ಸಮಾರಂಭ ಆಯೋಜಿಸಲು ಸಂಘ ತೀರ್ಮಾನಿಸಿದ್ದು, ಖಾತೆ ಹಂಚಿಕೆಯಲ್ಲಿ ಅವರ ಬೇಡಿಕೆಗೆ ಸ್ಪಂದನೆ ಸಿಗದಿದ್ದರೆ ಅಭಿನಂದನಾ ಸಮಾರಂಭದ ಬದಲು ಹೋರಾಟದ ಹಾದಿ ಹಿಡಿಯಬೇಕಾಗಬಹುದು ಎಂದು ಶ್ರೀವತ್ಸ ಎಚ್ಚರಿಕೆ ನೀಡಿದ್ದಾರೆ.

## ಇಲಾಖೆಗಳ ಕಾರ್ಯಕ್ಷಮತೆ ಹೆಚ್ಚಳಕ್ಕೆ ಒತ್ತು

# ಸಾರ್ವಜನಿಕರ ಡಿಜಿಟಲ್ ಮಾಹಿತಿಯ ಸಮರ್ಪಕ ಬಳಕೆಗೆ ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ

**ಬೆಂಗಳೂರು,ಜೂ.10:** ವಿವಿಧ ಇಲಾಖೆಗಳ ಕಾರ್ಯಕ್ಷಮತೆಯನ್ನು ಹೆಚ್ಚಿಸುವ ಮೂಲಕ ಸಾರ್ವಜನಿಕರಿಗೆ ಇನ್ನಷ್ಟು ವೇಗವಾಗಿ, ಪಾರದರ್ಶಕವಾಗಿ ಹಾಗೂ ಪರಿಣಾಮಕಾರಿಯಾಗಿ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ತಂತ್ರಜ್ಞಾನವನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು ಎಂದು ಗೃಹ, ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಇ–ಆಡಳಿತ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಇ–ಆಡಳಿತ ಇಲಾಖೆ ವ್ಯಾಪ್ತಿಯ ಸಂಸ್ಥೆಗಳಾದ ಇ–ಆಡಳಿತ ಕೇಂದ್ರ, ಕರ್ನಾಟಕ ರಾಜ್ಯ ದೂರಸಂವೇದಿ ಅನ್ವಯಿಕೆಗಳ ಕೇಂದ್ರ ಹಾಗೂ ಸೆಂಟರ್ ಫಾರ್ ಸ್ಮಾರ್ಟ್ ಗವರ್ನೆನ್ಸ್ ಕಾರ್ಯಚಟುವಟಿಕೆಗಳ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಸರ್ಕಾರದ ವಿವಿಧ ಇಲಾಖೆಗಳ ಬಳಿ ಈಗಾಗಲೇ ಸಾರ್ವಜನಿಕರ ಕುರಿತು ಅಪಾರ ಪ್ರಮಾಣದ ಡಿಜಿಟಲ್ ಮಾಹಿತಿ ಲಭ್ಯವಿದೆ. ಈ ಮಾಹಿತಿಯನ್ನು ಪ್ರತ್ಯೇಕವಾಗಿ ಸಂಗ್ರಹಿಸಿಡುವುದಕ್ಕಿಂತ ಇಲಾಖೆಗಳ ನಡುವೆ ಸಮನ್ವಯ ಸಾಧಿಸಿ ಬಳಸಿಕೊಳ್ಳುವ ವ್ಯವಸ್ಥೆ ರೂಪಿಸಬೇಕು ಎಂದು ಸಚಿವರು ಹೇಳಿದರು.

ಸರ್ಕಾರದ ವಿವಿಧ ಕಲ್ಯಾಣ ಕಾರ್ಯಕ್ರಮಗಳ ಸೌಲಭ್ಯಗಳನ್ನು ಸಾರ್ವಜನಿಕರಿಗೆ ಒದಗಿಸುವ



ಸಂದರ್ಭದಲ್ಲಿ ಇಲಾಖೆಗಳಲ್ಲಿರುವ ಡಿಜಿಟಲ್ ದತ್ತಾಂಶವನ್ನು ಸಮರ್ಪಕವಾಗಿ ಬಳಸುವುದರಿಂದ ಅರ್ಹ ಫಲಾನುಭವಿಗಳನ್ನು ನಿಖರವಾಗಿ ಗುರುತಿಸಲು ಸಾಧ್ಯವಾಗುತ್ತದೆ. ಇದರಿಂದ ಸಾರ್ವಜನಿಕರು ಒಂದೇ ಮಾಹಿತಿಯನ್ನು ಹಲವು ಬಾರಿ ಸಲ್ಲಿಸುವ ಅನಿವಾರ್ಯತೆಯೂ ಕಡಿಮೆಯಾಗುತ್ತದೆ ಎಂದು ಸಚಿವರು ತಿಳಿಸಿದರು.

ಸರ್ಕಾರದ ಯೋಜನೆಗಳಿಗೆ ಮೀಸಲಿಡುವ ಪ್ರತಿಯೊಂದು ರೂಪಾಯಿಯೂ ನಿಜವಾದ ಅರ್ಹ ಫಲಾನುಭವಿಗೆ ತಲುಪಬೇಕು. ಯಾವುದೇ ಕಾರಣಕ್ಕೂ ಸರ್ಕಾರದ ಹಣ ಅನರ್ಹ ಅಥವಾ ತಪ್ಪು ಫಲಾನುಭವಿಗಳಿಗೆ ಹೋಗದಂತೆ ತಂತ್ರಜ್ಞಾನ ಆಧಾರಿತ ವ್ಯವಸ್ಥೆಗಳನ್ನು ರೂಪಿಸಬೇಕು. ವಿವಿಧ ಇಲಾಖೆಗಳ ದತ್ತಾಂಶ ಏಕೀಕರಣ, ಕೃತಕ ಬುದ್ಧಿಮತ್ತೆ, ಜಿಐಎಸ್ ಹಾಗೂ ಡಿಜಿಟಲ್ ಆಡಳಿತ ವ್ಯವಸ್ಥೆಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ಸೋರಿಕೆ ರಹಿತ ಮತ್ತು ಗುರಿ–ಆಧಾರಿತ ಸೇವಾ ವಿತರಣೆಗೆ ಆದ್ಯತೆ ನೀಡಬೇಕು ಎಂದು ಸಚಿವ ಪ್ರಿಯಾಂಕ್ ಖರ್ಗೆ ಸೂಚಿಸಿದರು.

ಇದೇ ವೇಳೆ, ರಾಜ್ಯದಲ್ಲಿ ಡಿಜಿಟಲ್ ಆಡಳಿತ ವ್ಯವಸ್ಥೆಯನ್ನು ಮತ್ತಷ್ಟು ಬಲಪಡಿಸಲು ಸಿಇಜಿ, ಕೆ.ಎಸ್.ಆರ್.ಎಸ್.ಎ.ಸಿ ಹಾಗೂ ಸಿ.ಎಸ್.ಜಿ ಸಂಸ್ಥೆಗಳು ಪರಸ್ಪರ ಸ'ವ'ಂ'ನ್ವ'ಂ'ು'ಂ'ದ'ೊಂದಿಗೆ ಕಾರ್ಯನಿರ್ವಹಿಸಿ, ಸಾರ್ವಜನಿಕ ಸೇವೆಗಳ ಗುಣಮಟ್ಟ ಮತ್ತು ವೇಗವನ್ನು ಹೆಚ್ಚಿಸುವ ನಿಟ್ಟಿನಲ್ಲಿ ನವೀನ ತಂತ್ರಜ್ಞಾನ ಪರಿಹಾರಗಳನ್ನು ಅಭಿವೃದ್ಧಿಪಡಿಸಬೇಕು ಎಂದು ಸಚಿವರು ನಿರ್ದೇಶನ ನೀಡಿದರು.

ಸಾರ್ವಜನಿಕರ ಜೀವನಮಟ್ಟ ಸುಧಾರಣೆ, ಆಡಳಿತದ ಪಾರದರ್ಶಕತೆ ಹಾಗೂ ಸರ್ಕಾರಿ ಸೇವೆಗಳ ಪರಿಣಾಮಕಾರಿ ಅನುಷ್ಠಾನವೇ ಸರ್ಕಾರದ ಪ್ರಮುಖ ಗುರಿಯಾಗಿದ್ದು, ಈ ನಿಟ್ಟಿನಲ್ಲಿ ಡಿಜಿಟಲ್ ತಂತ್ರಜ್ಞಾನಗಳ ಬಳಕೆಯನ್ನು ಇನ್ನಷ್ಟು ವಿಸ್ತರಿಸಲಾಗುವುದು ಎಂದು ಸಚಿವರು ಹೇಳಿದರು.

ಇಲಾಖೆಯ ಹಿರಿಯ ಅಧಿಕಾರಿಗಳಾದ ಟಿ..ಭೂ ಬಾಲನ್, ಭೊಯರ್ ಹರ್ಷಲ್ ನಾರಾಯಣ ರಾವ್, ಡಾ.ರಾಜೇಶ್, ಎಲಿಷಾ ಆಂಡ್ರ್ಯೂಸ್ ಮುಂತಾದ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

# ನೋಂದಣಿ ರದ್ದಾಗಿರುವ ಶಾಲೆಯ ವಿದ್ಯಾರ್ಥಿಗಳಿಗೆ ಟಿ.ಸಿ. ಕೊಡದ ಬಗ್ಗೆ ದೂರು: ಶಿಕ್ಷಣ ಇಲಾಖೆಯಿಂದ ಸಮಗ್ರ ತನಿಖೆಗೆ ಆದೇಶ

**ಬೆಂಗಳೂರು, ಜೂ.10:** ಥಣಿಸಂದ್ರದ ಹೆಗ್ಗಡೆ ನಗರದ ನೋಂದಣಿ ರದ್ದಾಗಿರುವ ಸಾಮರ ಇಂಟರ್ ನ್ಯಾಷನಲ್ ಇಸ್ಲಾಮಿಕ್ ಸ್ಕೂಲ್ ಆಡಳಿತ ಮಂಡಳಿಯು ವಿದ್ಯಾರ್ಥಿಗಳಿಗೆ ಟಿಸಿ ಕೊಡದೆ, ಕಾನೂನುಬಾಹಿರ ಚಟುವಟಿಕೆ ನಡೆಸುತ್ತಿರುವ ಆರೋಪದ ಬಗ್ಗೆ ಶಾಲಾ ಶಿಕ್ಷಣ ಇಲಾಖೆಯ ಬೆಂಗಳೂರು ದಕ್ಷಿಣ ಜಿಲ್ಲೆಯ ಆಡಳಿತ ವಿಭಾಗದ ಉಪ ನಿರ್ದೇಶಕರು ಕೆ.ಆರ್.ಪುರಂನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತನಿಖೆ ನಡೆಸಿ ತುರ್ತಾಗಿ ವರದಿ ಸಲ್ಲಿಸುವಂತೆ ಆದೇಶಿಸಿದ್ದಾರೆ.

ಮುಂಬೈನ ಥಾಣೆಯ ಬಿಲಾಲ್ ಪಾರ್ಕ್‌ನ ಅಲ್ಮಾಸ್ ಕಾಲೋನಿಯ ನಿವಾಸಿ ಹಾಗೂ ಜಾಮಿಯಾ ಮೊಹಮ್ಮದೀಯ ಮನ್ಸೂರ್, ಜಾಮಿಯಾ ಮೊಹಮ್ಮದ್ದೀಯ ಮನ್ಸೂರ್ ಮದರಸಾದ ಮಾಜಿ ಪ್ರಾಂಶುಪಾಲ ಡಾ. ಖುರ್ಷಿ ಅಶರಫ್ ಇಕ್ಬಾಲ್ ನೀಡಿದ ದೂರಿನ ಆಧಾರದ ಮೇಲೆ ತನಿಖೆ ನಡೆಸುವಂತೆ ಸೂಚಿಸಿದ್ದಾರೆ.

ಮಾನ್ಯತೆ ರದ್ದಾದ ಹಿನ್ನೆಲೆಯಲ್ಲಿ ಅಧ್ಯಯನ ಮಾಡುತ್ತಿದ್ದ ವಿದ್ಯಾರ್ಥಿಗಳ ಬೇಡಿಕೆಯಂತೆ ಆಡಳಿತ ಮಂಡಳಿಯವರು ವರ್ಗಾವಣೆ ಪತ್ರ ನೀಡದೇ ಬೆದರಿಕೆ ಹಾಕುತ್ತಿದ್ದಾರೆ. ಈ ದೌರ್ಜನ್ಯ ಪ್ರಶ್ನಿಸಿ ಹೈಕೋರ್ಟ್ ಮೊರೆ ಹೋದ ಮೇಲೆ ಕೇವಲ ಮೂವರು ವಿದ್ಯಾರ್ಥಿಗಳಿಗೆ ವರ್ಗಾವಣೆ ಪತ್ರ ನೀಡಿದ್ದಾರೆ. ಪ್ರತಿನಿತ್ಯ ಹಲವಾರು ವಿದ್ಯಾರ್ಥಿಗಳು, ಪೋಷಕರು ಟಿಸಿಗಾಗಿ ಅಲೆಯುತ್ತಿದ್ದಾರೆ. ಆದರೆ ಟಿಸಿ ನೀಡದೇ ಗೂಂಡಾ ವರ್ತನೆ ತೋರಿ, ಮಕ್ಕಳ ಶಿಕ್ಷಣಕ್ಕೆ ಅಡ್ಡಿಯಾಗಿದ್ದಾರೆ. ವಿದ್ಯಾರ್ಥಿಗಳ ಭವಿಷ್ಯದ ಜೊತೆ ಚೆಲ್ಲಾಟವಾಡುತ್ತಿದ್ದಾರೆ. ಹೀಗಾಗಿ ತಕ್ಷಣವೇ ಶಾಲಾ ಆಡಳಿತ ಮಂಡಳಿ ಮೇಲೆ ಕ್ರಮ ಕೈಗೊಳ್ಳಬೇಕು ಎಂದು ಡಾ. ಖುರ್ಷಿ ಅಶ್ರಫ್ ಇಕ್ಬಾಲ್ ದೂರು ನೀಡಿದ್ದರು.

ಹೊರದೇಶದಿಂದ ಬಡಮಕ್ಕಳ ವಿದ್ಯಾಭ್ಯಾಸಕ್ಕಾಗಿ ಶಾಲಾ ಅಡಳಿತ ಮಂಡಳಿಗೆ ಆರ್ಥಿಕ ಸಂಪನ್ಮೂಲ ಹರಿದು ಬರುತ್ತದೆ. ಸಂಬಂಧಿಸಿದ ಪ್ರಾಧಿಕಾರದಿಂದ ನೋಂದಣಿ

ಕರ್ನಾಟಕ ಸರ್ಕಾರ
ಶಾಲಾ ಶಿಕ್ಷಣ ಇಲಾಖೆ

ಮಾಡಿಸದ ಶಾಲೆಗಳಲ್ಲಿ ಮಕ್ಕಳು ಓದಿ ಉನ್ನತ ಶಿಕ್ಷಣಕ್ಕೆ ತೆರಳಿದಾದ ತೊಂದರೆ ಅನುಭವಿಸುತ್ತಾರೆ ಎಂಬ ವಿಷಯವನ್ನು ಪ್ರಸ್ತಾಪಿಸಿದಾಗ ಶಾಲಾ ಅಡಳಿತ ಮಂಡಳಿಯವರು ನನ್ನನ್ನು ಶಾಲೆಯಿಂದ ಹೊರ ಹಾಕಿದ್ದಾರೆ. ಅದನ್ನು ಪ್ರಶ್ನಿಸಿ ಕಾನೂನು ಹೋರಾಟ ನಡೆಸುತ್ತಿದ್ದೇನೆ.

ಈ ಶಾಲಾ ಆಡಳಿತ ಮಂಡಳಿಯ ವಿರುದ್ಧ ಕಾನೂನು ರೀತ್ಯಾ ಕ್ರಮ ಜರುಗಿಸಬೇಕು. ಶಾಲಾ ವಿದ್ಯಾರ್ಥಿಗಳ ಮುಂದಿನ ಶೈಕ್ಷಣಿಕ ಭವಿಷ್ಯಕ್ಕೆ ಯಾರು ಹೊಣೆ. ಶಾಲಾ ಆಡಳಿತ ಮಂಡಳಿಗೆ ವಿದ್ಯಾರ್ಥಿಗಳ ಬಗ್ಗೆ ಕಿಂಚಿತ್ತೂ ಕಳಕಳಿ ಇಲ್ಲ ಎಂದು ದೂರಿದ್ದಾರೆ.

ಜಾಮಿಯ ಮೊಹಮ್ಮದಿಯ ಮನ್ಸೂರ ಮದರಸಾ ಮುಂಬೈ, ಅಲ್ ಜಾಮಿಯ ಮೊಹಮ್ಮದೀಯ ಎಜುಕೇಷನ್ ಸೊಸೈಟಿ ಮುಂಬೈ, ಜಾಮಿಯ ಮೊಹಮ್ಮದೀಯ ಸೊಸೈಟಿ ಮುಂಬೈ, ಅಲ್ ಜಾಮಿಯ ಮೊಹಮ್ಮದೀಯ ಎಜುಕೇಷನ್ ಸೊಸೈಟಿ ಮುಂಬೈ, ಸಾಮರ್ ಇಂಟರ್‌ನ್ಯಾಷನಲ್ ಇಸ್ಲಾಮಿಕ್ ಶಾಲೆ ಮುಂಬೈ, ಸಾಮರ್ ಇಂಟರ್‌ನ್ಯಾಷನಲ್ ಇಸ್ಲಾಮಿಕ್ ಶಾಲೆ ಹೆಗ್ಗಡೆ ನಗರ, ಥಣಿಸಂದ್ರ ವಿರುದ್ಧ ಕ್ರಮ ತೆಗೆದುಕೊಳ್ಳಬೇಕು ಎಂದು ಡಾ. ಖುರ್ಷಿ ಅಶ್ರಫ್ ಇಕ್ಬಾಲ್ ಮನವಿ ಮಾಡಿದ್ದಾರೆ.

ಈ ದೂರುಗಳ ಸಂಬಂಧ ಆಡಳಿತ ಮಂಡಳಿಯಿಂದ ವಿವರಣೆ ಪಡೆದು ಪರಿಶೀಲಿಸಿ ನಿಮ್ಮ ಸ್ಪಷ್ಟ ಅಭಿಪ್ರಾಯ ಮತ್ತು ಪೂರಕ ದಾಖಲೆಗಳೊಂದಿಗೆ ವಿವರವಾದ ವರದಿಯನ್ನು ತಕ್ಷಣವೇ ಸಲ್ಲಿಸುವಂತೆ ಸೂಚಿಸಿದ್ದಾರೆ.

## ನಾಳೆಯಿಂದ 14ರವರೆಗೆ ಅರಮನೆ ಮೈದಾನದಲ್ಲಿ ಅಂತಾರಾಷ್ಟ್ರೀಯ ಪೋಟೋ-ವಿಡಿಯೋ ಪ್ರದರ್ಶನ, ಮಾರಾಟ

### ಕರ್ನಾಟಕ ವೀಡಿಯೋ – ಫೋಟೋ ಅಸೋಸಿಯೇಷನ್ ರಾಜ್ಯ ಪತ್ರಿಕಾ ಛಾಯಾಗ್ರಾಹಕರ ಸಹಕಾರದೊಂದಿಗೆ ಆಯೋಜನೆ

ಬೆಂಗಳೂರು, ಜೂ.10: ಕರ್ನಾಟಕ ವಿಡಿಯೋ ಮತ್ತು ಪೋಟೋ ಅಸೋಸಿಯೇಷನ್ ಮತ್ತು ಕರ್ನಾಟಕ ರಾಜ್ಯ ಪತ್ರಿಕಾ ಛಾಯಾಗ್ರಾಹಕರ ಸಹಕಾರದೊಂದಿಗೆ ತ್ರಿಪುರ ವಾಸಿನಿ ಅರಮನೆ ಮೈದಾನದಲ್ಲಿ ಜೂನ್ 12, 13 ಮತ್ತು 14 ರಂದು ಮೂರು ದಿನಗಳ ಕಾಲ ಅಂತರಾಷ್ಟ್ರೀಯ ಮಟ್ಟದ ಪೋಟೋ ಮತ್ತು ವಿಡಿಯೋ ಪ್ರದರ್ಶನ ಮತ್ತು ಮಾರಾಟ ಏರ್ಪಡಿಸಲಾಗಿದೆ.




ಅಸೋಸಿಯೇಷನ್ ಅಧ್ಯಕ್ಷ ಎಚ್.ವಿ.ಕೃಷ್ಣಪ್ಪ, ಕಾರ್ಯದರ್ಶಿ ಎ.ಜಗದೀಶ್ ಈ ಕುರಿತು ಮಾಹಿತಿ ನೀಡಿದ್ದು, ಕ್ಯಾಮರಾ ಆಲ್ಬಮ್ ಸಾಫ್ಟ್‌ವೇರ್ ಪ್ರಿಂಟರ್ ಪ್ರೇಮ್, ಲ್ಯಾಮಿನೇಷನ್ ಸೇರಿದಂತೆ ಛಾಯಾಗ್ರಹಣ ಕ್ಷೇತ್ರದ ಹಲವಾರು ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದ 150ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸಲಿವೆ ಎಂದರು.

5,000ಕ್ಕೂ ಹೆಚ್ಚು ಛಾಯಾಗ್ರಹಣ ಉಪಕರಣಗಳ ಪ್ರದರ್ಶನ ಹಾಗೂ ಮಾರಾಟ ನಡೆಯಲಿದೆ ಈ ವಸ್ತು ಪ್ರದರ್ಶನವನ್ನು ರಾಜ್ಯದ ಹಲವಾರು ತಾಲೂಕು, ಜಿಲ್ಲಾ, ಹಾಗೂ ರಾಜ್ಯಮಟ್ಟದ ಛಾಯಾಗ್ರಹರ ಸಂಘ ಸಂಸ್ಥೆಗಳು ಬೆಂಬಲಿಸಿವೆ. ಕ್ಯಾಮರಾ ಅಲ್ಬಮ್ ಸಾಫ್ಟ್‌ವೇರ್ ಪ್ರಿಂಟರ್ ಪ್ರೇಮ್, ಲ್ಯಾಮಿನೇಷನ್ ಸೇರಿದಂತೆ ಛಾಯಾಗ್ರಹಣ ಕ್ಷೇತ್ರದ ಹಲವಾರು ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದ 150ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸಲಿವೆ. ಹಾಗೂ 5,000ಕ್ಕೂ ಹೆಚ್ಚು ಛಾಯಾಗ್ರಹಣ ಉಪಕರಣಗಳ ಪ್ರದರ್ಶನ ಹಾಗೂ ಮಾರಾಟ ನಡೆಯಲಿದೆ.

ಈ ವಸ್ತು ಪ್ರದರ್ಶನವನ್ನು ರಾಜ್ಯದ ಹಲವಾರು ತಾಲೂಕು, ಜಿಲ್ಲಾ, ಹಾಗೂ ರಾಜ್ಯಮಟ್ಟದ ಛಾಯಾಗ್ರಹರ ಸಂಘ ಸಂಸ್ಥೆಗಳು ಬೆಂಬಲಿಸಿವೆ ಛಾಯಾಗ್ರಹಣ ಕ್ಷೇತ್ರ ಅತ್ಯಂತ ತಾಂತ್ರಿಕವಾಗಿ ಕೂಡಿರುವ ಕ್ಷೇತ್ರವಾಗಿದೆ ಇದರಲ್ಲಿ ರಾಷ್ಟ್ರೀಯ ಹಾಗೂ ಹಲವಾರು ಕಂಪನಿಯಗಳು ತಂತ್ರಜ್ಞಾನದ ಬೆಳವಣಿಗಾಗಿ ಶ್ರಮಿಸುತ್ತಿವೆ ತಂತ್ರಜ್ಞಾನದ ಬೆಳವಣಿಗೆ ಜೊತೆಯಲ್ಲಿ ಕಾಲಕ್ರಮೇಣ ಬೆಳೆಯುತ್ತಿರುವ ತಂತ್ರಜ್ಞಾನವನ್ನು ಲಕ್ಷಾಂತರ ಛಾಯಾಗ್ರಾಹಕರಿಗೆ ತಲುಪಿಸುವುದು ಒಂದು ಸವಾಲಾಗಿದೆ ಹಾಗೂ ಛಾಯಾಗ್ರಾಹಕರು ಎಲ್ಲಾ ಮಾಹಿತಿಯನ್ನು ಪಡೆಯುವುದು ಕಷ್ಟವಾಗಿದ್ದ ಕಾಲದಲ್ಲಿ ಪೋಟೊ ಟುಡೇ ವಸ್ತು ಪ್ರದರ್ಶನಗಳನ್ನು 23 ವರ್ಷಗಳಿಂದ 150ಕ್ಕೂ ಹೆಚ್ಚು ವಸ್ತು ಪ್ರದರ್ಶನಗಳನ್ನು ಭಾರತದ ಹಲವಾರು ನಗರಗಳಲ್ಲಿ ಹಾಗೂ ವಿದೇಶದಲ್ಲೂ ಏರ್ಪಡಿಸುತ್ತ ಛಾಯಾಗ್ರಾಹಕ ಹಾಗೂ ರಾಷ್ಟ್ರೀಯ ಹಾಗೂ ಕಂಪನಿಗಳ ಮಧ್ಯ ಸೇತುವೆಯಾಗಿ ಕಾರ್ಯನಿರ್ವಹಿಸುತ್ತದೆ.

ಬೈಸೇಲ್ ಇಂಟ್ರಾಕ್ಷನ್ಸ್ ಸಂಸ್ಥೆ ಛಾಯಾಗ್ರಹಣ ಕ್ಷೇತ್ರ ಅತ್ಯಂತ ತಾಂತ್ರಿಕವಾಗಿ ಕೂಡಿರುವ ಕ್ಷೇತ್ರವಾಗಿದೆ ಇದರಲ್ಲಿ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಹಲವಾರು ಕಂಪನಿಯಗಳು ತಂತ್ರಜ್ಞಾನದ ಬೆಳವಣಿಗಾಗಿ ಶ್ರಮಿಸುತ್ತಿವೆ ತಂತ್ರಜ್ಞಾನದ ಬೆಳವಣಿಗೆ ಜೊತೆಯಲ್ಲಿ ಕಾಲಕ್ರಮೇಣ ಬೆಳೆಯುತ್ತಿರುವ ತಂತ್ರಜ್ಞಾನವನ್ನು ಲಕ್ಷಾಂತರ ಛಾಯಾಗ್ರಾಹಕರಿಗೆ ತಲುಪಿಸುವುದು ಒಂದು ಸವಾಲಾಗಿದೆ ಹಾಗೂ ಛಾಯಾಗ್ರಾಹಕರು ಎಲ್ಲಾ ಮಾಹಿತಿಯನ್ನು ಪಡೆಯುವುದು ಕಷ್ಟವಾಗಿದ್ದ ಕಾಲದಲ್ಲಿ ಬೈಸೇಲ್ ಇಂಟ್ರಾಕ್ಷನ್ಸ್ ಪ್ರೈವೇಟ್ ಲಿಮಿಟೆಡ್ ಪೋಟೊ ಟುಡೇ ವಸ್ತುಪ್ರದರ್ಶನಗಳನ್ನು 23 ವರ್ಷಗಳಿಂದ 150ಕ್ಕೂ ಹೆಚ್ಚು ವಸ್ತು ಪ್ರದರ್ಶನಗಳನ್ನು ಭಾರತದ ಹಲವಾರು ನಗರಗಳಲ್ಲಿ ಹಾಗೂ ವಿದೇಶದಲ್ಲೂ ಏರ್ಪಡಿಸುತ್ತ ಛಾಯಾಗ್ರಾಹಕ ಹಾಗೂ ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಕಂಪನಿಗಳ ಮಧ್ಯೆ ಸೇತುವೆಯಾಗಿ ಕಾರ್ಯ ನಿರ್ವಹಿಸುತ್ತವೆ ಎಂದರು.

## ರೇಣುಕಾಸ್ವಾಮಿ ಹತ್ಯೆ ಪ್ರಕರಣ: ಐವರು ಆರೋಪಿಗಳ ಜಾಮೀನು ರದ್ದು ಕೋರಿದ್ದ ಅರ್ಜಿ ವಜಾ

**ಬೆಂಗಳೂರು, ಜೂ.10:** ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಹೈಕೋರ್ಟ್‌ನಿಂದ ಮಹತ್ವದ ತೀರ್ಪು ಹೊರಬಿದ್ದಿದೆ. ಪ್ರಕರಣದ ಐವರು ಪ್ರಮುಖ ಆರೋಪಿಗಳ ಜಾಮೀನು ರದ್ದುಗೊಳಿಸಬೇಕೆಂದು ಪ್ರಾಸಿ ಕ್ಯೂಷನ್ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದೆ.

ಈ ಮೂಲಕ ಆರೋಪಿಗಳಾದ ಪವನ್, ಧನರಾಜು, ರಾಘವೇಂದ್ರ, ವಿನಯ್ ಮತ್ತು ನಂದೀಶ್ ಅವರಿಗೆ ನ್ಯಾಯಾಲಯದಲ್ಲಿ ದೊಡ್ಡ ಸಮಾಧಾನ ಸಿಕ್ಕಂತಾಗಿದೆ.

ಪ್ರಕರಣದ ತನಿಖೆ ಮತ್ತು ಕಾನೂನು ಪ್ರಕ್ರಿಯೆಗಳು ನಡೆಯುತ್ತಿರುವ ಬೆನ್ನಲ್ಲೇ, ಈ ಐವರು ಆರೋಪಿಗಳಿಗೆ ಕೆಳಹಂತದ ನ್ಯಾಯಾಲಯ ನೀಡಿದ್ದ ಜಾಮೀನನ್ನು ಪ್ರಶ್ನಿಸಿ ಪ್ರಾಸಿಕ್ಯೂಷನ್ ಹೈಕೋರ್ಟ್ ಮೆಟ್ಟಿಲೇರಿತ್ತು.

ಆರೋಪಿ ಗಳು ಹೊರಗಿದ್ದರೆ ಸಾಕ್ಷ್ಯ ನಾಶ ಪಡಿಸುವ ಅಥವಾ ತನಿಖೆಗೆ ಅಡ್ಡಿ ಪಡಿಸುವ ಸಾಧ್ಯತೆ




ಇರುವುದರಿಂದ ಅವರ ಜಾಮೀನನ್ನು ರದ್ದುಗೊಳಿಸ ಬೇಕು ಎಂದು ಪ್ರಾಸಿಕ್ಯೂಷನ್ ಪರ ವಕೀಲರು ಪ್ರಬಲವಾಗಿ ವಾದಿಸಿದ್ದರು.

ಆದರೆ, ಪ್ರಾಸಿಕ್ಯೂಷನ್ ಮಂಡಿಸಿದ ವಾದ ಮತ್ತು ಆಕ್ಷೇಪಣೆಗಳನ್ನು ಸುದೀರ್ಘವಾಗಿ ಆಲಿಸಿದ ಹೈಕೋರ್ಟ್‌ನ ಏಕಸದಸ್ಯ ಪೀಠದ ನ್ಯಾಯಮೂರ್ತಿ ಎಸ್. ರಾಚಯ್ಯ ಅವರು ಈ ಅರ್ಜಿಯನ್ನು ತಿರಸ್ಕರಿಸಿದ್ದಾರೆ.

ಸದ್ಯದ ಪರಿಸ್ಥಿತಿಯಲ್ಲಿ ಆರೋಪಿಗಳ ಜಾಮೀನು ರದ್ದುಗೊಳಿಸಲು ಯಾವುದೇ ಬಲವಾದ ಮತ್ತು ಸೂಕ್ತವಾದ ಕಾರಣಗಳು ಕಂಡು ಬರುತ್ತಿಲ್ಲ ಎಂದು ಅಭಿಪ್ರಾಯಪಟ್ಟ ಪೀಠ, ಅರ್ಜಿಯನ್ನು ವಜಾಗೊಳಿಸಿ ಆದೇಶ ಹೊರಡಿಸಿದೆ.

ಈ ನಿರ್ಧಾರದಿಂದಾಗಿ ತನಿಖಾ ಸಂಸ್ಥೆಗೆ ತೀವ್ರ ಹಿನ್ನಡೆಯಾಗಿದ್ದರೆ, ಜೈಲಿನಿಂದ ಹೊರಬಂದಿರುವ ಪವನ್, ಧನರಾಜು, ರಾಘವೇಂದ್ರ, ವಿನಯ್ ಹಾಗೂ ನಂದೀಶ್ ಅವರ ನಿರಾಳತೆ ಮುಂದುವರಿದಿದೆ. ನ್ಯಾಯಾಲಯ ವಿಧಿಸಿರುವ ನಿಯಮ ಮತ್ತು ಷರತ್ತುಗಳನ್ನು ಪಾಲಿಸಿಕೊಂಡು ಅವರು ಮುಕ್ತವಾಗಿರಲು ಹೈಕೋರ್ಟ್ ಹಸಿರು ನಿಶಾನೆ ನೀಡಿದಂತಾಗಿದೆ.

ನಟ ದರ್ಶನ್ ಹಾಗೂ ಪವಿತ್ರಾ ಗೌಡ ಪ್ರಮುಖ ಆರೋಪಿಗಳಾಗಿರುವ ಈ ಹೈಪ್ರೊಫೈಲ್ ರೇಣುಕಾಸ್ವಾಮಿ ಕೊಲೆ ಪ್ರಕರಣ ಇಡೀ ರಾಜ್ಯಾದ್ಯಂತ ತೀವ್ರ ಸಂಚಲನ ಮೂಡಿಸಿತ್ತು.

ಈ ಪ್ರಕರಣದಲ್ಲಿ ಪ್ರತಿಯೊಂದು ಕಾನೂನು ಬೆಳವಣಿಗೆಗಳೂ ಭಾರೀ ಕುತೂಹಲ ಕೆರಳಿಸುತ್ತಿದ್ದು, ಸದ್ಯ ಹೈಕೋರ್ಟ್ ನೀಡಿರುವ ಈ ತೀರ್ಪು ಕಾನೂನು ವಲಯದಲ್ಲಿ ಮತ್ತು ಸಾರ್ವಜನಿಕರಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

## ಜೂ.14ರವರೆಗೆ ರಾಜ್ಯಾದ್ಯಂತ ಮಳೆ, ಕರಾವಳಿ, ದಕ್ಷಿಣ ಒಳನಾಡಿನಲ್ಲಿ ಆರೆಂಜ್, ಯೆಲ್ಲೋ ಅಲರ್ಟ್

ಬೆಂಗಳೂರು, ಜೂ.10: ರಾಜ್ಯದಲ್ಲಿ ಮುಂಗಾರು ಮಳೆ ಅಬ್ಬರ ಜೋರಾಗಿದ್ದು, ಮುಂದಿನ ಐದು ದಿನಗಳ ಕಾಲ ಮಳೆ ಮುಂದುವರಿಯಲಿದೆ. ಜೂನ್ 14 ರವರೆಗೆ ರಾಜ್ಯಾದ್ಯಂತ ಅಲ್ಲಲ್ಲಿ ಗುಡುಗು, ಸಿಡಿಲು ಸಹಿತ ಜೋರಾದ ಗಾಳಿಯೊಂದಿಗೆ ಹಗುರದಿಂದ ಸಾಧಾರಣ ಹಾಗೂ ಭಾರಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.



ಕರಾವಳಿ ಹಾಗೂ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಭಾರಿ ಮಳೆಯಾಗಲಿದ್ದು, ಆರೆಂಜ್ ಹಾಗೂ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಮುಂದಿನ ಐದು ದಿನಗಳ ಕಾಲ ಕರ್ನಾಟಕದ ಬಹುತೇಕ ಕಡೆಗಳಲ್ಲಿ ಮಳೆ.ಕರಾವಳಿ, ದಕ್ಷಿಣ ಹಾಗೂ ಉತ್ತರ ಒಳನಾಡಿನಲ್ಲೂ ಮಳೆ. ಆರೆಂಜ್ ಮತ್ತು ಯೆಲ್ಲೋ ಅಲರ್ಟ್ ನೀಡಿದ ಹವಾಮಾನ ಇಲಾಖೆ

ಕರ್ನಾಟಕದಲ್ಲಿ ಮುಂದಿನ ಐದು ದಿನಗಳ ಕಾಲ ರಾಜ್ಯಾದ್ಯಂತ ಜೋರು ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆಯ ಮುನ್ಸೂಚನೆ ನೀಡಿದ್ದು, ಕರಾವಳಿ ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗಲಿದೆ. ಉತ್ತರ ಹಾಗೂ ದಕ್ಷಿಣ ಒಳನಾಡಿನ ಕೆಲವೆಡೆ ಸಾಧಾರಣದಿಂದ ಭಾರೀ ಮಳೆಯಾಗಲಿದೆ ಎಂದು ತಿಳಿಸಿದ್ದು, ಆರೆಂಜ್ ಹಾಗೂ ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ. ವಿಶೇಷವಾಗಿ, ಕಲಬುರಗಿ, ಬೀದರ್, ವಿಜಯಪುರ, ಬಾಗಲಕೋಟೆ, ಬೆಳಗಾವಿ, ಬಳ್ಳಾರಿ, ತುಮಕೂರು ಹಾಗೂ ಚಿತ್ರದುರ್ಗ ಜಿಲ್ಲೆಗಳಲ್ಲಿ ಮಳೆ ಅಬ್ಬರ ಹೆಚ್ಚಿರಲಿದ್ದು, ಈ ಜಿಲ್ಲೆಗಳಿಗೆ 'ಯೆಲ್ಲೋ ಅಲರ್ಟ್' ಘೋಷಿಸಲಾಗಿದೆ.



ಸ್ಥಳೀಯ ಕೃಷಿ ರಾಜಕೀಯವನ್ನು ಐತಿಹಾಸಿಕವಾಗಿ ಪುನರ್‌ರೂಪಿಸಿದ 2008 ರ ದುರಂತ ಪೊಲೀಸ್ ಗುಂಡಿನ ದಾಳಿ ಘಟನೆಯನ್ನು ಸ್ಮರಿಸುವ ಹಾವೇರಿ ರೈತ ಹುತಾತ್ಮರ ದಿನದ (ರೈತರ ಬಲಿದಾನ ದಿವಸ) 19ನೇ ವಾರ್ಷಿಕೋತ್ಸವವನ್ನು ಆಚರಿಸಲು ಹಾವೇರಿಯ ರೈತರು ಬುಧವಾರ ಧರಣಿ ನಡೆಸಿದರು.

# ರಸಗೊಬ್ಬರ ಡೀಲರ್–ರಿಟೇಲರ್‌ಗಳ ಜತೆ ಸಭೆ: ಹೆಚ್ಚಿನ ದರಕ್ಕೆ ಮಾರಾಟ ಮಾಡಿದರೆ ಲೈಸನ್ಸ್ ರದ್ದು, ಕಲಬುರಗಿ ಡಿ.ಸಿ ಎಚ್ಚರಿಕೆ

**ಕಲಬುರಗಿ, ಜೂ. 10:** ನಿಗದಿತ ಎಂ.ಆರ್.ಪಿ. ದರಕ್ಕಿಂತ ಹೆಚ್ಚಿನ ದರಕ್ಕೆ ರಸಗೊಬ್ಬರ ಮಾರಾಟ ಮಾಡಿದಲ್ಲಿ ಅಂತಹ ರಸಗೊಬ್ಬರ ಅಂಗಡಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದಲ್ಲದೆ, ಅಂತಹ ಕೃಷಿ ಪರಿಕರ ಮಾರಾಟ ಅಂಗಡಿಗಳ ಪರವಾನಿಗೆ ರದ್ದುಪಡಿಸಲಾಗುವುದು ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯಲ್ಲಿ ರಸಗೊಬ್ಬರ ಅಂಗಡಿಗಳ ಡೀಲರ್–ರಿಟೇಲರ್ ಹಾಗೂ ಕೃಷಿ ಇಲಾಖೆ ಅಧಿಕಾರಿಗಳ ತುರ್ತು ಸಭೆ ಕರೆದ ಅವರು ಅಲ್ಲಲ್ಲಿ ರಸಗೊಬ್ಬರ ಹೆಚ್ಚಿನ ಮಾರಾಟಕ್ಕೆ ಮಾಡಲಾಗುತ್ತಿದೆ ಎಂದು ರೈತರಿಂದ ದೂರು ಬರುತ್ತಿವೆ, ಇದನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಡಿ.ಎ.ಪಿ. 50 ಕೆ.ಜಿ. ಬ್ಯಾಗಿಗೆ 1,350 ರೂ., ಯೂರಿಯಾ 45 ಕೆ.ಜಿ. ಬ್ಯಾಗಿಗೆ 266 ರೂ. ಎಂ.ಆರ್.ಪಿ. ದರವಿದ್ದು, ಇದಕ್ಕಿಂತ ಒಂದು ರೂಪಾಯಿ ಸಹ ಅನ್ನದಾತರ ಬಳಿ ಅಂಗಡಿಯವರು ಪಡೆದರೆ ಹುಷಾರ್ ಎಂದು ಎಚ್ಚರಿಕೆ ನೀಡಿದರು.



ಜಿಲ್ಲೆಯಲ್ಲಿ ರಸಗೊಬ್ಬರ ಹೆಚ್ಚಿನ ದರಕ್ಕೆ ಮಾರಾಟದ ಹಾವಳಿ ತಡೆಯಲು ಕೂಡಲೇ ತಾಲೂಕಿಗೊಂದು ಜಿಲ್ಲಾ ಮಟ್ಟದ ಅಧಿಕಾರಿಗಳ ನೇತೃತ್ವದಲ್ಲಿ ತಂಡ ರಚಿಸಬೇಕು. ಎ.ಸಿ., ತಹಶೀಲ್ದಾರ, ಕೃಷಿ, ತೋಟಗಾರಿಕೆ ಎಲ್ಲಾ ಅಧಿಕಾರಿಗಳು ಹೋಬಳಿ, ತಾಲೂಕಿಗೆ ಹೋಗಿ ಪ್ರತಿನಿತ್ಯ ಸುಮಾರು 25 ರಸಗೊಬ್ಬರ ಅಂಗಡಿಗೆ ಭೇಟಿ ನೀಡಿ ತಪಾಸಣೆ ಮಾಡಬೇಕು. ಪಿ.ಓ.ಎಸ್, ದಾಸ್ತಾನು ಪರಿಶೀಲಿಸಬೇಕು ಎಂದರು.

ರಸಗೊಬ್ಬರ ಸಮಸ್ಯೆ ಕುರಿತು ರೈತರ ಅಹವಾಲು ಆಲಿಸಲು ಕೂಡಲೇ ಸಹಾಯವಾಣಿ ಸ್ಥಾಪಿಸಬೇಕು. ಪ್ರಸ್ತುತ ಬೇಡಿಕೆ ಅನುಗುಣವಾಗಿ ಡಿ.ಎ.ಪಿ. ಸೇರಿ ಇತರೆ ರಸಗೊಬ್ಬರಗಳನ್ನು ತಾಲೂಕಿಗೆ ಮರು ಹಂಚಿಕೆ ಮಾಡಬೇಕು. ಪ್ರತಿನಿತ್ಯ ಪಿ.ಓ.ಎಸ್., ಸ್ಟಾಕ್ ಅಪ್‌ಡೇಟ್ ಮಾಡುವಂತೆ ಸಂಬಂಧಿಸಿದವರಿಗೆ ಸೂಕ್ತ ನಿರ್ದೇಶನ ನೀಡುವಂತೆ ಮತ್ತು ಪ್ರತಿ ದಿನದ ವರದಿ ತಮಗೆ ಸಲ್ಲಿಸುವಂತೆ ಜಂಟಿ ಕೃಷಿ ನಿದೇಶಕರಿಗೆ ಡಿ.ಸಿ. ಸೂಚಿಸಿದರು.

ರಿಟೇಲರ್‌ಗಳು ರೈತರಿಗೆ ಹೊಸ ತಂತ್ರಜ್ಞಾನದ ನ್ಯಾನೋ ಯೂರಿಯಾ, ನ್ಯಾನೋ ಡಿ.ಎ.ಪಿ. ರಸಗೊಬ್ಬರ ತೆಗೆದುಕೊಂಡರೆ ಮಾತ್ರ ಡಿ.ಎ.ಪಿ. ನೀಡುತ್ತೇವೆ ಎನ್ನುವುದು ಸಮಂಜಸವಲ್ಲ. ಈ ರೀತಿ ರೈತರಿಗೆ ಯಾವುದೇ ಅಂಗಡಿವರು ಇಂತಹದೆ ರಸಗೊಬ್ಬರ ಪಡೆಯುವಂತೆ ಒತ್ತಾಯ ಮಾಡುವಂತಿಲ್ಲ. ರೈತರಿಗೆ ನೂತನ ತಂತ್ರಜ್ಞಾನದ ರಸಗೊಬ್ಬರ ಕುರಿತು ಸಲಹೆ ಮಾತ್ರ ನೀಡಬಹುದಾಗಿದೆ ಎಂದ ಅವರು, ಕೊನೆಗೆ ರೈತನ ಇಚ್ಛೆಯಂತೆ ಗೊಬ್ಬರ ಪೂರೈಸಿ ಎಂದರಲ್ಲದೆ ಜಿಲ್ಲಾಡಳಿತ, ಕೃಷಿ ಇಲಾಖೆಯ ನಿರ್ದೇಶನ ಪಾಲಿಸುವ ಮೂಲಕ ಅನ್ನದಾತನ ಒಳಿತಿಗಾಗಿ ಅಗತ್ಯ ಸಹಕಾರ ನೀಡುವಂತೆಯೂ ರಿಟೇಲರ್‌ಗಳಿಗೆ ಮನವಿ ಮಾಡಿಕೊಂಡರು. ಚಿತ್ತಾಪುರ ಪಟ್ಟಣದಲ್ಲಿ ರಸಗೊಬ್ಬರ ಹೆಚ್ಚಿನ ದರಕ್ಕೆ ಮಾರಾಟ ಮಾಡಲಾಗುತ್ತಿದೆ ಎಂದು ಪತ್ರಿಕೆಯಲ್ಲಿ ಸುದ್ದಿ ಬಂದಿದೆ ಏನು ಮಾಡಿದ್ದೀರಿ ಎಂದು ಸಹಾಯಕ ಕೃಷಿ ನಿರ್ದೇಶಕ ಸಂಜೀವ ಕುಮಾರ ಅವರನ್ನು ಕೇಳಿದ ಜಿಲ್ಲಾಧಿಕಾರಿಗಳು, ಕೂಡಲೆ ಸತ್ಯಾಸತ್ಯತೆ ಪರಿಶೀಲಿಸಿ ಅಂಗಡಿ ಮೇಲೆ ಇಂದೇ ಕ್ರಮ ವಹಿಸುವಂತೆ ಸೂಚಿಸಿದರು.

ಜಂಟಿ ಕೃಷಿ ನಿರ್ದೇಶಕ ಸಮದ್ ಪಟೇಲ್ ಮಾತನಾಡಿ, ಜಿಲ್ಲೆಯಲ್ಲಿ ಒಟ್ಟು 733 ಡೀಲರ್‌ಗಳಿದ್ದು, ಇದರಲ್ಲಿ 81 ಹೋಲಸೇಲ್ ಡೀಲರ್ ಮತ್ತು 540 ರಿಟೇಲರ್ ಮಾತ್ರ ಚಾಲ್ತಿಯಲ್ಲಿದ್ದಾರೆ. ಪ್ರಸ್ತುತ ಜಿಲ್ಲೆಯ ಅವಿಭಜಿತ ಏಳು ತಾಲೂಕುಗಳ ರಿಟೇಲ್ ಶಾಪ್‌ಗಳಲ್ಲಿ ವಿಶೇಷವಾಗಿ 2,143 ಮೆಟ್ರಿಕ್ ಟನ್ ಡಿ.ಎ.ಪಿ. 6,421 ಮೆಟ್ರಿಕ್ ಟನ್ ಯೂರಿಯಾ ಲಭ್ಯವಿದೆ. ಅದೇ ರೀತಿ ಅಫಜಲಪೂರ, ಚಿತ್ತಾಪುರ, ಜೇವರ್ಗಿ, ಕಲಬುರಗಿ ತಾಲೂಕಿನ ತಾಲೂಕಾ ಡೀಲರ್ ಬಳಿ 2,999 ಮೆಟ್ರಿಕ್ ಟನ್ ಡಿ.ಎ.ಪಿ, 3,011 ಮೆಟ್ರಿಕ್‌ಟನ್ ಯೂರಿಯಾ ದಾಸ್ತಾನು ಲಭ್ಯವಿದ್ದು, ಜಿಲ್ಲೆಯಲ್ಲಿ ರಸಗೊಬ್ಬರದ ಯಾವುದೇ ಕೊರತೆ ಇಲ್ಲ. ಕಳೆದ 15 ದಿನದಲ್ಲಿ 117 ಕಡೆ ಕೃಷಿ ಅಧಿಕಾರಿಗಳ ತಂಡ ರಸಗೊಬ್ಬರ ಅಂಗಡಿಗಳ ಮೇಲೆ ದಾಳಿ ಮಾಡಲಾಗಿದ್ದು, ಸುಮಾರು 51 ಅಂಗಡಿಗಳು ನಿಯಮ ಉಲ್ಲಂಘಿಸಿ ಮಾರಾಟ ಮಾಡುತ್ತಿರುವುದು ಕಂಡುಬಂದಿರುವುದರಿಂದ ನೋಟಿಸ್ ಜಾರಿ ಮಾಡಲಾಗಿದೆ. ಅಲ್ಲದೆ 66.27 ಲಕ್ಷ ರೂ. ಮೊತ್ತದ ರಸಗೊಬ್ಬರ ಮಾರಾಟ ಮಾಡದಂತೆ ತಡೆ ಆದೇಶ ಸಹ ನೀಡಲಾಗಿದೆ ಎಂದು ಸಭೆಗೆ ತಿಳಿಸಿದರು.

### ಪ್ರಿಯಾಂಕ ಖರ್ಗೆ ಅವರೇ ಇದು ಸರಿಯಲ್ಲ...

# ನಾನು ಬಂದಿರೋದು ಮಂತ್ರಾಲಯಕ್ಕೆ, ನನ್ನನ್ಯಾಕೆ ತಡೀತಿದ್ದೀರಿ: ಪುನೀತ್ ಕೆರೆಹಳ್ಳಿ

**ರಾಯಚೂರು, ಜೂ. 10:** ಜಿಲ್ಲೆಯ ಲಿಂಗಸುಗೂರು ತಾಲೂಕಿನ ಹಟ್ಟಿ ಪಟ್ಟಣದಲ್ಲಿ ಬುಧವಾರ ಆಯೋಜಿಸಲಾಗಿದ್ದ ಹಿಂದೂ ಮಹೋತ್ಸವ' ಸಮಾರಂಭದಲ್ಲಿ ಭಾರಿ ಹೈಡ್ರಾಮಾ ಸೃಷ್ಟಿಯಾಗಿದೆ. ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿ ಆಗಮಿಸಬೇಕಿದ್ದ ಹಿಂದೂ ಕಾರ್ಯಕರ್ತ ಪುನೀತ್ ಕೆರೆಹಳ್ಳಿ ಅವರಿಗೆ ರಾಯಚೂರು ಜಿಲ್ಲಾ ಪೊಲೀಸರು ಜಿಲ್ಲೆಗೆ ಪ್ರವೇಶಿಸದಂತೆ ನಿಷೇಧ ಹೇರಿದ್ದಾರೆ.



ಅಷ್ಟೇ ಅಲ್ಲದೆ, ಮಂತ್ರಾಲಯಕ್ಕೂ ಬಂದಿದ್ದ ಪುನೀತ್ ಕೆರೆಹಳ್ಳಿ ಅವರನ್ನು ಪೊಲೀಸರು ಅಲ್ಲಿಗೇ ಹೋಗಿ ಅವರನ್ನು ತಡೆದು ನೋಟಿಸ್ ಜಾರಿ ಮಾಡಿದ್ದಾರೆ.

ಹಟ್ಟಿಯಲ್ಲಿ ಶ್ರೀರಾಮ ಸೇನೆ ಸಂಘಟನೆಯ ನೇತೃತ್ವದಲ್ಲಿ ಬೃಹತ್ ಹಿಂದೂ ಮಹೋತ್ಸವ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಪುನೀತ್ ಕೆರೆಹಳ್ಳಿ ಅವರು ಆಗಮಿಸುತ್ತಿದ್ದರು.

ಆದರೆ, ಜಿಲ್ಲೆಯಲ್ಲಿ ಕೋಮು ಸೌಹಾರ್ದತೆ ಮತ್ತು ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ಮುನ್ನೆಚ್ಚರಿಕೆ ಕ್ರಮವಾಗಿ ರಾಯಚೂರು ಜಿಲ್ಲಾ ಪೊಲೀಸ್ ಇಲಾಖೆಯು ಅವರಿಗೆ ರಾಯಚೂರು ಜಿಲ್ಲೆಗೆ ಆಗಮಿಸದಂತೆ ಖಡಕ್ ನಿರ್ಬಂಧ ವಿಧಿಸಿದೆ. ಮಂತ್ರಾಲಯದಲ್ಲಿ ತಮಗೆ ಪೊಲೀಸರು ತಡೆ ಒಡ್ಡಿ ನೋಟಿಸ್ ನೀಡಿದ ತಕ್ಷಣ ರಾಯಚೂರು ಪೊಲೀಸರ ನಡೆಗೆ ಪುನೀತ್ ಕೆರೆಹಳ್ಳಿ ತೀವ್ರವಾಗಿ ಗರಂ ಆಗಿದ್ದಾರೆ. "ನಾನು ಮಂತ್ರಾಲಯಕ್ಕೆ ದರ್ಶನಕ್ಕಾಗಿ ಬಂದಿದ್ದೇನೆ. ಇಲ್ಲಿಗೆ ಬಂದು ನನ್ನನ್ನು ತಡೆದು, ಕಾರ್ಯಕ್ರಮಕ್ಕೆ ಬರದಂತೆ ಕಾನೂನುಬಾಹಿರವಾಗಿ ನಿರ್ಬಂಧ ವಿಧಿಸುತ್ತಿದ್ದೀರಿ ಎಂದು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಇದರ ಜತೆಗೆ ಗೃಹ ಸಚಿವ ಪ್ರಿಯಾಂಕ ಖರ್ಗೆಗೂ ಎಚ್ಚರಿಕೆಯನ್ನು ನೀಡಿದ್ದಾರೆ.

### ಮಾಜಿ ಸಚಿವ ಎನ್.ಎಸ್. ಬೋಸರಾಜು ಹೇಳಿಕೆ

# ಸರ್ಕಾರ ಪತನವಾಗಲಿದೆ ಎಂಬ ಪ್ರಧಾನಿ ನಿರೀಕ್ಷೆ ಹುಸಿ: ರಾಜ್ಯದಲ್ಲಿ ಕಾಂಗ್ರೆಸ್ ಪ್ರಬಲ

**ರಾಯಚೂರು, ಜೂ.10:** ಸಿದ್ಧರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಿದರೆ ಕಾಂಗ್ರೆಸ್ ಸರ್ಕಾರ ಪತನವಾಗಲಿದೆ ಎನ್ನುವ ನಿರೀಕ್ಷೆಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಇದ್ದರು. ಆದರೆ, ರಾಜ್ಯದಲ್ಲಿ ಪಕ್ಷ ಬಲಿಷ್ಠವಾಗಿರುವ ಕಾರಣ ಅಂತಹದ್ದೇನು ಆಗಲಿಲ್ಲ. ಆಗುವುದೂ ಇಲ್ಲ' ಎಂದು ವಿಧಾನ ಪರಿಷತ್ ಸದಸ್ಯ ಎನ್.ಎಸ್.ಬೋಸರಾಜು ಹೇಳಿದರು.



ಸುದ್ದಿಗೋಷ್ಠಿಯಲ್ಲಿ, ರಾಜ್ಯದಲ್ಲಿ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರು ಸೇರಿ 183 ಪ್ರತಿನಿಧಿಗಳಿದ್ದಾರೆ. ಎಲ್ಲರಿಗೂ ಸಚಿವ ಸ್ಥಾನ ದೊರೆಯದು. ಪಕ್ಷವು ತನ್ನದೇ ಮಾನದಂಡ ಇಟ್ಟುಕೊಂಡು ಸಚಿವ ಸ್ಥಾನದ ಹಂಚಿಕೆ ಮಾಡಲಿದೆ.

ನಾನು ಶಾಸಕ ಅಥವಾ ವಿಧಾನ ಪರಿಷತ್ ಸದಸ್ಯನೂ ಆಗಿರದ ಸಂದರ್ಭದಲ್ಲಿ ಪಕ್ಷ ನನ್ನನ್ನು ಸಚಿವನನ್ನಾಗಿ ಮಾಡಿತು. ಹಿರಿತನ, ಜಾತಿ ಕೋಟಾ ಹಾಗೂ ಅರ್ಹತೆ ಎಲ್ಲವನ್ನೂ ಒಂದೇ ದೃಷ್ಟಿಕೋನದಲ್ಲಿ ಪರಿಗಣಿಸಲಾಗದು ಎಂದು ಹೇಳಿದರು.

ಮೂರು ವರ್ಷಗಳ ಅವಧಿಯಲ್ಲಿ ಸಚಿವನಾಗಿ ಕಾರ್ಯನಿರ್ವಹಿಸಿದ ಬಗ್ಗೆ ನನಗೆ ತೃಪ್ತಿ ಇದೆ. ನನಗೆ ಮತ್ತೆ ಸಚಿವ ಸ್ಥಾನ ಬೇಕೆಂದು ಕೇಳುವುದಿಲ್ಲ. ಜಿಲ್ಲೆಯವರಿಗೆ ಸಚಿವ ಸ್ಥಾನ ಕೊಡಬೇಕೆಂದು ಒತ್ತಾಯಿಸುವುದೂ ಇಲ್ಲ. ಕಳೆದ ಬಾರಿಯೂ ಕೇಳಿರಲಿಲ್ಲ. ಪಕ್ಷದ ಹೈಕಮಾಂಡ್ ತೆಗೆದುಕೊಳ್ಳುವ ತೀರ್ಮಾನಕ್ಕೆ ಬದ್ಧನಾಗಿರುತ್ತೇನೆ' ಎಂದರು.

ಸಿದ್ಧರಾಮಯ್ಯ ಅವರು ಕರೆದಿದ್ದ ಉಪಾಹಾರದ ಕೂಟದಲ್ಲೂ ಉಳಿದಿರುವ ಎರಡು ವರ್ಷಗಳನ್ನು ಸಮರ್ಥವಾಗಿ ಪೂರ್ಣಗೊಳಿಸುವುದು ಹಾಗೂ ಮುಂದಿನ ಐದು ವರ್ಷ ಅಧಿಕಾರ ಚುಕ್ಕಾಣಿ ಹಿಡಿಯುವ ಕುರಿತು ಚರ್ಚಿಸಲಾಯಿತು. ಸಚಿವ ಸ್ಥಾನದ ಆಕಾಂಕ್ಷೆ ಇರುವುದು ಸಹಜ. ಅದಕ್ಕೆ ಬೇರೆ ಅರ್ಥ ಕಲ್ಪಿಸುವ ಅಗತ್ಯವಿಲ್ಲ' ಎಂದು ತಿಳಿಸಿದರು.

### 2023ರ ಅಧಿಕಾರ ಹಂಚಿಕೆ ಸೂತ್ರ ಯಥಾವತ್ ಜಾರಿಗೆ ಯಶವಂತರಾಯಗೌಡ ಆಗ್ರಹ



**ವಿಜಯಪುರ, ಜೂ.10:** ರಾಜ್ಯ ಕಾಂಗ್ರೆಸ್‌ನಲ್ಲಿ 2023ರಲ್ಲಿ ಸರ್ಕಾರ ರಚನೆ ವೇಳೆ ನಡೆದ ಅಧಿಕಾರ ಹಂಚಿಕೆ ಸೂತ್ರ ಸಂಪೂರ್ಣವಾಗಿ ಮತ್ತು ಯಥಾವತ್ತಾಗಿ ಜಾರಿಯಾಗ ಬೇಕು ಎಂದು ಇಂಡಿ ವಿಧಾನಸಭಾ ಕ್ಷೇತ್ರದ ಶಾಸಕ ಯಶವಂತರಾಯಗೌಡ ಪಾಟೀಲ ಆಗ್ರಹಿಸಿದರು. ಸಮಾನ ಅಧಿಕಾರ ಹಂಚಿಕೆ ಸೂತ್ರದಂತೆ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಿದ್ದಾರೆ. ಅವರ ಜೊತೆಯೇ ನಮಗೂ ಅಧಿಕಾರ ಹಂಚಿಕೆಯಾಗಬೇಕಿತ್ತು. ಮುಂದಿನ ಸಚಿವ ಸಂಪುಟ ವಿಸ್ತರಣೆ ಸಂದರ್ಭದಲ್ಲಿ ಕಾಂಗ್ರೆಸ್ ವರಿಷ್ಠರು ಕೊಟ್ಟ ಮಾತಿನಂತೆ ನಡೆದುಕೊಳ್ಳಬೇಕು'

'ರಾಜ್ಯದಲ್ಲಿ ಹೊಸ ನಾಯಕತ್ವ ಸೃಷ್ಟಿಸುತ್ತೀರಿ ಎಂದಾದ ಮೇಲೆ ಉತ್ತರ ಕರ್ನಾಟಕದಲ್ಲೂ ಹೊಸ ನಾಯಕತ್ವ ಸೃಷ್ಟಿಗೆ ಹೈಕಮಾಂಡ್ ಅವಕಾಶ ಕಲ್ಪಿಸಬೇಕು, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ನ್ಯಾಯ ಒದಗಿಸಿದ ಪ್ರಕಾರವೇ ನಮಗೂ ಸಚಿವ ಸ್ಥಾನ ನೀಡಿ ನ್ಯಾಯ ಒದಗಿಸಬೇಕು' ಎಂದು ಆಗ್ರಹಿಸಿದರು.

'ಸಿದ್ದರಾಮಯ್ಯ, ಡಿ.ಕೆ.ಶಿವ ಕುಮಾರ್, ರಣದೀಪ್ ಸುರ್ಜೇವಾಲಾ ಅವರು ಸರ್ಕಾರ ರಚನೆ ವೇಳೆ ವಿಜಯಪುರ ಜಿಲ್ಲೆಗೆ ಸಂಬಂಧಿಸಿದಂತೆ ಎಂ.ಬಿ.ಪಾಟೀಲ್, ಶಿವಾನಂದ ಪಾಟೀಲ್ ಮತ್ತು ನನ್ನ ನಡುವೆ ಸಚಿವ ಸ್ಥಾನವನ್ನು ಸಮಾನವಾಗಿ ಹಂಚಿಕೆ ಮಾಡುವುದಾಗಿ ಹೇಳಿದ್ದರು. ಅಂದು ನನಗೆ ಕೊಟ್ಟ ಮಾತಿನಂತೆ ಸಚಿವ ಸ್ಥಾನ ನೀಡುತ್ತಾರೆ ಎಂಬ ಆದಮ್ಯ ವಿಶ್ವಾಸದಲ್ಲಿ ಇದ್ದೇನೆ. ಅಂದು ನನಗೆ ಕೊಟ್ಟ ಮಾತನ್ನು ಉಳಿಸಿಕೊಂಡರೆ ರಾಜಕೀಯ ಪಕ್ಷಕ್ಕೆ ಬೆಲೆ ಇರುತ್ತದೆ ಎಂದರು.

### ಹಿಜಾಬ್ ನಿರ್ಬಂಧ ರದ್ದತಿ ಬೇಡಿಕೆ ಇತ್ಯರ್ಥ

# ಒಂಭತ್ತು ಬೇಡಿಕೆ ಈಡೇರಿಸಲು ಮುಸ್ಲಿಂ ಸಂಘಟನೆ ಒಕ್ಕೂಟ ಆಗ್ರಹ




**ಕಲಬುರಗಿ, ಜೂ. 10:** ಕಾಂಗ್ರೆಸ್ ಸರ್ಕಾರ ಚುನಾವಣಾ ಪೂರ್ವದಲ್ಲಿ ನೀಡಿದ್ದ ಭರವಸೆಗಳಲ್ಲಿ ಮುಸ್ಲಿಂ ಸಮುದಾಯದ ಹಿಜಾಬ್ ನಿಷೇಧ ರದ್ದತಿ ಒಂದೇ ಒಂದು ಬೇಡಿಕೆ ಈಡೇರಿಸಿದ್ದು, ಬಾಕಿ ಒಂಬತ್ತು ಬೇಡಿಕೆಗಳನ್ನು ತಕ್ಷಣ ಪೂರೈಸಬೇಕು ಎಂದು ಕರ್ನಾಟಕ ರಾಜ್ಯ ಮುಸ್ಲಿಂ ಸಂಘಟನೆಗಳ ಒಕ್ಕೂಟದ ಮುಖಂಡರು ಒತ್ತಾಯಿಸಿದರು.

ಮುಸ್ಲಿಂ ಮುಖಂಡರು, ಕಾಂಗ್ರೆಸ್ ಸರ್ಕಾರ ಹೇಳಿದ್ದೇನು? ಮಾಡಿದ್ದೇನು? ಮುಂದೇನು? ವರದಿ ಹಾಗೂ ಆಗ್ರಹಗಳ ಪರಿಚಯ ಶೀರ್ಷಿಕೆಯಡಿ ನಡೆದ ಕರ್ನಾಟಕ ಮುಸ್ಲಿಂ ಸಮಾವೇಶದಲ್ಲಿ ಒಕ್ಕೂಟದ ಮುಖಂಡರು ಸರ್ಕಾರದ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಮಾಜಿ ಡಿವೈಎಸ್ಪಿ ಸೊಹೈಲ್ ಅಹ್ಮದ್ ಮೈಸೂರು ಮಾತನಾಡಿ, ಸರ್ಕಾರ ಅಧಿಕಾರಕ್ಕೆ ಬಂದ ನಂತರ ಹಿಜಾಬ್ ನಿರ್ಬಂಧ ಮಾತ್ರ ಹಿಂಪಡೆದಿದೆ. ಆದರೆ ಮುಸ್ಲಿಂ ಮೀಸಲಾತಿ 4 ಪ್ರತಿಶತ ಮರುಜಾರಿ, ದ್ವೇಷ ಭಾಷಣಗಳಿಗೆ ಕಡಿವಾಣ, ಪ್ರತ್ಯೇಕ ಬಜೆಟ್ ಹಂಚಿಕೆ, ರಾಜಕೀಯ ಪ್ರಾತಿನಿಧ್ಯ, ವಕ್ಫ್ ವಿಷಯಗಳು, ಗೋಹತ್ಯೆ ನಿಷೇಧ ಕಾಯ್ದೆ ರದ್ದು, ಮತಾಂತರ ನಿರ್ಬಂಧ ಕಾಯ್ದೆ ರದ್ದು, ವಿದ್ಯಾರ್ಥಿ ವೇತನ ಸೇರಿದಂತೆ ಬಾಕಿ ಬೇಡಿಕೆಗಳು ಈಡೇರಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

50 ಲಕ್ಷಕ್ಕೂ ಅಧಿಕ ಮತ ನೀಡಿದ ಸಮುದಾಯಕ್ಕೆ ಕೇವಲ ಒಂದು ಸಚಿವ ಸ್ಥಾನ ನೀಡಿರುವುದು ಕಾಂಗ್ರೆಸ್‌ನ ಅಸಹಾಯಕತೆಗೆ ಸಾಕ್ಷಿ. 3 ವರ್ಷದಲ್ಲಿ 24 ಎಂಎಲ್ಸಿ ಸ್ಥಾನಗಳಲ್ಲಿ ಒಬ್ಬರೇ ಮುಸ್ಲಿಂರಿದ್ದಾರೆ. ಇದು ಸ್ವೀಕಾರಾರ್ಹವಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಒಕ್ಕೂಟದ ಅಧ್ಯಕ್ಷ ನಿವೃತ್ತ ತಹಸೀಲ್ದಾರ್ ನಿಸಾರ್ ಅಹ್ಮದ್ ವಝೀರ್ ಅವರು, 2028ರೊಳಗೆ ಬೇಡಿಕೆ ಈಡೇರದಿದ್ದರೆ ಮುಂದಿನ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ತಕ್ಕ ಪಾಠ ಕಲಿಸಲಾಗುವುದು. ಸಮುದಾಯದ ಹಕ್ಕುಗಳಿಗಾಗಿ ಮುಸ್ಲಿಮರ ಒಗ್ಗಟ್ಟಿನ ಹೋರಾಟ ಅನಿವಾರ್ಯವಾಗಿದೆ ಎಂದು ಹೇಳಿದರು.

ಸಾಮಾಜಿಕ ಹೋರಾಟಗಾರ ಹ್ಯಾರೀಸ್ ಸಿದ್ದಿಕಿ ಅವರು, ಮೀಸಲಾತಿ ರದ್ದತಿಯಿಂದ ಪ್ರತಿ ವರ್ಷ 1700 ಎಂಜಿನಿಯರಿಂಗ್ ವಿದ್ಯಾರ್ಥಿಗಳು ನಷ್ಟ ಅನುಭವಿಸುತ್ತಿದ್ದಾರೆ. ರಾಜ್ಯದಲ್ಲಿ 217 ದ್ವೇಷ ಭಾಷಣ ಪ್ರಕರಣಗಳು ದಾಖಲಾಗಿದ್ದರೂ ಕ್ರಮವಾಗಿಲ್ಲ ಎಂದು ಆರೋಪಿಸಿದರು.

ಸಿಖ್ ಸಮುದಾಯದ ಮುಖಂಡ ಗುರುಮಿತಸಿಂಗ್ ಸಹುಜಾ, ಹೋರಾಟಗಾರರಾದ ಇಬ್ರಾಹಿಂ ಪಟೇಲ್ ಯಾಳವಾರ್, ಸಂಘಟಕ ಅಫ್ಜಲ್ ಮಹೆಮೂದ್ ಸೇರಿದಂತೆ ಹಲವು ಮುಖಂಡರು ಭಾಗವಹಿಸಿ ಸಮುದಾಯದ ಒಗ್ಗಟ್ಟು ಮತ್ತು ಹಕ್ಕುಗಳ ಬಗ್ಗೆ ಮಾತನಾಡಿದರು.

# ಎಟಿಎಂ ದರೋಡೆಗೆ ವಿಫಲ ಯತ್ನ

**ಕೊಪ್ಪಳ, ಜೂ.10:** ನಗರದ ಹೊಸಪೇಟೆ ರಸ್ತೆಯಲ್ಲಿ ಬುಧವಾರ ಬೆಳಗಿನ ಜಾವ ಎಸ್‌ಬಿಐ ಎಟಿಎಂ ಕೇಂದ್ರದಲ್ಲಿ ದರೋಡೆಗೆ ವಿಫಲ ಯತ್ನ ನಡೆದಿದೆ. ದರೋಡೆಕೋರರ ತಂಡವೊಂದು ಇಂದು ಬೆಳಗಿನ ಜಾವ 3 ರಿಂದ 3.30ರ ಸುಮಾರಿನ ಮಧ್ಯೆ ದರೋಡೆಗೆ ಸಂಚು ರೂಪಿಸಿಕೊಂಡು ಭಾರತೀಯ ಸ್ಟೇಟ್ ಬ್ಯಾಂಕ್ ಎಟಿಎಂ ಕೇಂದ್ರದ ಬಳಿಬಂದು ಮೊದಲಿಗೆ ಎಟಿಎಂ ಕೇಂದ್ರದ ಒಳಗಿದ್ದ ಸಿಸಿ ಕ್ಯಾಮೆರಾಗಳಲ್ಲಿ ಯಾವುದೇ ದೃಶ್ಯಗಳು ಸೆರೆಯಾಗದಂತೆ ಕಪ್ಪು ಬಣ್ಣದ ಹೊಡೆದಿದ್ದಾರೆ.

ನಂತರ ಗ್ಯಾಸ್‌ಕಟರ್ ಸಹಾಯದಿಂದ ಎಟಿಎಂ ಯಂತ್ರದ ಕಬ್ಬಿಣದ ಬಾಗಿಲನ್ನು ಕತ್ತರಿಸಲು ಮುಂದಾಗುತ್ತಿದ್ದಂತೆ ಗ್ಯಾಸ್ ಕಟರ್‌ನ ಕಿಡಿ ಎಟಿಎಂ ಯಂತ್ರಕ್ಕೆ ತಾಗಿ ಏಕಾಏಕಿ ಬೆಂಕಿ ಹೊತ್ತಿಕೊಂಡಿದೆ.ಇದರಿಂದ ಗಾಬರಿಗೊಂಡ ದರೋಡೆಕೋರರು ದರೋಡೆಗೆ ವಿಫಲ ಯತ್ನ ನಡೆಸಿ ಸ್ಥಳದಿಂದ ಕಾಲ್ಕಿತ್ತಿದ್ದಾರೆ.ಎಟಿಎಂ ಕೇಂದ್ರದಿಂದ ದಟ್ಟವಾದ ಹೊಗೆ ಹಾಗೂ ಬೆಂಕಿ ಬರುತ್ತಿರುವುದನ್ನು ಗಮನಿಸಿದ ಎಟಿಎಂ ಕೇಂದ್ರದ ಕಟ್ಟಡ ಮಾಲೀಕರು ತಕ್ಷಣ ಅಗ್ನಿಶಾಮಕ ದಳಕ್ಕೆ ವಿಷಯ ತಿಳಿಸಿದ್ದಾರೆ.

ಸುದ್ದಿ ತಿಳಿದು ಅಗ್ನಿಶಾಮಕ ಸಿಬ್ಬಂದಿ ವಾಹನದೊಂದಿಗೆ ಕೆಲವೇ ನಿಮಿಷಗಳಲ್ಲಿ ಬಂದು ಬೆಂಕಿಯುನ್ನು ನಂದಿಸುವಲ್ಲಿ ಯಶಸ್ವಿಯಾಗಿದ್ದಾರೆ.

ಸ್ಥಳಕ್ಕೆ ಕೊಪ್ಪಳ ನಗರ ಠಾಣೆ ಪೊಲೀಸರು, ಬೆರಳಚ್ಚು ತಜ್ಞರ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದೆ. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ದರೋಡೆಕೋರರ ಪತ್ತೆಗೆ ಘಟನಾ ಸ್ಥಳದ ಸುತ್ತಮುತ್ತಲಿನ ರಸ್ತೆಗಳಲ್ಲಿರುವ ಸಿಸಿ ಕ್ಯಾಮೆರಾಗಳನ್ನು ಪರಿಶೀಲಿಸುತ್ತಿದ್ದಾರೆ.



### ಮಂಗಳೂರಿಗೆ ಸ್ಟಾರ್ ವಿಮಾನಸೇವೆ ವಿಸ್ತರಣೆಗೆ ಚರ್ಚೆ

# ಕಲಬುರಗಿ ಮೂಲಕ ಬೆಂಗಳೂರು ಮಂಗಳೂರು ವಿಮಾನಕ್ಕೆ ಬೇಡಿಕೆ

**ಕಲಬುರಗಿ, ಜೂ.10–** ಹಲವು ತಿಂಗಳುಗಳಿಂದ ತಗಿತಗೊಂಡಿದ್ದ ಕಲಬುರಗಿ – ಬೆಂಗಳೂರು ವಿಮಾನ ಸಂಚಾರ ಪುನರಾರಂಭಗೊಂಡಿರುವ ಹಿನ್ನಲೆ ಯಲ್ಲಿ ವಿಮಾನಸೇವೆಯನ್ನು ಮಂಗಳೂರುವರೆಗೆ ವಿಸ್ತರಣೆ ಮಾಡಬೇಕು ಎಂದು ಸ್ಟಾರ್ ವಿಮಾನ ಸಂಸ್ಥೆಯ ಮುಖ್ಯಸ್ಥರ ಜೊತೆ ಕಲಬುರಗಿ ಜಿಲ್ಲಾ ಹೋಟೆಲ್ ಅಸೋಸಿಯೇಷನ್ ಚರ್ಚೆ ನಡೆಸಿ ಒತ್ತಾಯ ಮಾಡಿದೆ.



ಕಲಬುರಗಿ ವಿಮಾನ ನಿಲ್ದಾಣದಲ್ಲಿ ಸ್ಟಾರ್ ಏರ್‌ಲೈನ್ಸ್ ಸಂಸ್ಥೆಯ ವಿಮಾನ ನಿಲ್ದಾಣಗಳ ನಿರ್ವಹಣಾ ಮುಖ್ಯಸ್ಥರಾದ ಸಿ.ಎ ಬೋಪಣ್ಣ ಹಾಗೂ ಮಾರುಕಟ್ಟೆ ವಿಭಾಗದ ಮೊಹಮ್ಮದ್ ಸೊಹೈಲ್ ಜೊತೆ ದಕ್ಷಿಣ ಕನ್ನಡ ಸಂಘದ ಮಾಜಿ ಅಧ್ಯಕ್ಷರಾದ ಡಾ. ಸದಾನಂದ ಪೆರ್ಲ ಕಲಬುರಗಿ ಜಿಲ್ಲಾ ಹೋಟೆಲ್ ಅಸೋಸಿಯೇಷನ್ ಅಧ್ಯಕ್ಷರಾದ ನರಸಿಂಹ ಮೆಂಡನ್ ಚರ್ಚೆ ನಡೆಸಿದರು. ಈಗಾಗಲೇ ಕಲಬುರಗಿಯಿಂದ ಐದಾರು ಬಸ್ಸುಗಳು ನಿತ್ಯ ಮಂಗಳೂರಿಗೆ ಪ್ರಯಾಣ ಮಾಡುತ್ತಿದ್ದು ಸುಮಾರು 16 ಗಂಟೆಗಳ ಪ್ರಯಾಣದ ಅವಧಿ ಹಿಡಿಯುತ್ತಿದೆ. ಕಲಬುರಗಿ ಭಾಗದಿಂದ ಕರಾವಳಿ ಹಾಗೂ ಕೇರಳ ಕಡೆಗೆ ಸಾಕಷ್ಟು ಸಂಖ್ಯೆಯ ಪ್ರಯಾಣಿಕರು ಸಂಚಾರ ಮಾಡುತ್ತಿರುವುದರಿಂದ ಕೂಡಲೇ ಮಂಗಳೂರಿಗೆ ವಿಮಾನ ಸಂಪರ್ಕ ಕಲ್ಪಿಸುವಂತೆ ಇರುವ ಸಾಧ್ಯತೆಗಳನ್ನು ತಿಳಿಸಲಾಯಿತು. ಕಲಬುರಗಿಯಿಂದ ಬೆಂಗಳೂರು ಮೂಲಕ ಒನ್ ಸ್ಟಾಪ್ ಮಂಗಳೂರಿಗೆ ವಿಮಾನ ಸಂಚಾರ ಆರಂಭಿಸಿದರೆ ಉತ್ತಮ ಸಂಪರ್ಕ ಸಾಧ್ಯವಾಗುತ್ತದೆ.

ಉತ್ತರ ಕರ್ನಾಟಕ ಹಾಗೂ ಮಹಾರಾಷ್ಟ್ರ ಆಂಧ್ರ ಗಡಿ ಪ್ರದೇಶಗಳ ಜಿಲ್ಲೆಗಳಿಂದ ಶಿಕ್ಷಣ ಹಾಗೂ ಪ್ರವಾಸೋದ್ಯಮದ ನೆಲೆಯಲ್ಲಿ ಸಾವಿರಾರು ಸಂಖ್ಯೆಯ ಜನರು ಕರಾವಳಿ ಭಾಗಕ್ಕೆ ತೆರಳುತ್ತಿದ್ದಾರೆ ಎಂದು ಡಾ.ಪೆರ್ಲ ಮನವರಿಕೆ ಮಾಡಿದರು. ಕರಾವಳಿ ಭಾಗದ ಸಾಕಷ್ಟು ಸಂಖ್ಯೆಯ ಉದ್ಯಮಿಗಳು ಉತ್ತರ ಕರ್ನಾಟಕದಲ್ಲಿ ನೆಲೆಸಿದ್ದು ಕರಾವಳಿಗೆ ಸಂಚಾರ ಮಾಡಲು ತೀವ್ರ ಸಂಕಷ್ಟ ಅನುಭವಿಸುತ್ತಿರುವುದರಿಂದ ಶೀಘ್ರದಲ್ಲೇ ವಿಮಾನಸೇವೆ ಆರಂಭ ಮಾಡಿದರೆ ಹೆಚ್ಚಿನ ಪ್ರಯೋಜನವಾಗಲಿದೆ ಎಂದು ನರಸಿಂಹ ಮೆಂಡನ್ ಹೇಳಿದರು. ಪೌರಾತ್ಯ ರಾಷ್ಟ್ರಗಳಲ್ಲಿ ಯುದ್ಧ ಭೀತಿಯಿಂದಾಗಿ ತೈಲಬೆಲೆ ಏರಿಕೆ ಗೊಂಡಿರುವುದರಿಂದ ಸದ್ಯದಲ್ಲೇ ಹೊಸ ಸ್ಥಳಗಳಿಗೆ ಸೇವೆ ಆರಂಭಗೊಳಿಸುವುದನ್ನು ಸದ್ಯ ಮುಂದೂಡಲಾಗಿದೆ. ಬಹುತೇಕ ಮುಂದಿನ ತಿಂಗಳಲ್ಲಿ ಮುಂಬೈ ಹಾಗೂ ನಂತರ ಇತರ ಕಡೆಗಳಿಗೆ ಸಂಚಾರ ಆರಂಭಿಸುವ ಬಗ್ಗೆ ಸಂಸ್ಥೆಯು ಚಿಂತನೆ ಮಾಡುತ್ತಿದ್ದು ಪ್ರಯಾಣಿಕರ ದಟ್ಟಣೆಯನ್ನು ಅನುಸರಿಸಿ ಹೊಸ ಮಾರ್ಗಗಳಲ್ಲಿ ಸಂಚಾರ ಆರಂಭಿಸಲಾಗುವುದು ಎಂದು ಸ್ಟಾರ್ ಏರ್‌ಲೈನ್ಸ್ ಸಂಸ್ಥೆಯ ವಿಮಾನ ನಿಲ್ದಾಣಗಳ ನಿರ್ವಹಣಾಧಿಕಾರಿ ಸಿ.ಎ ಬೋಪಣ್ಣ ಹೇಳಿದರು.

# ಪರಿಸರ ದಿನ–ವಿಶ್ವ ಆಹಾರ ಸುರಕ್ಷತಾ ದಿನಾಚರಣೆ: ಪರಿಸರ ಕುರಿತು ಜನರಲ್ಲಿ ಜಾಗೃತಿ ಅಗತ್ಯ– ನ್ಯಾ.ಪ್ರಭಾಕರರಾವ್

**ಕಲಬುರಗಿ, ಜೂ. 10:** ಕರ್ನಾಟಕ ಪೀಪಲ್ಸ್ ಎಜುಕೇಷನ್ ಸೊಸೈಟಿಯ ಅಧೀನದಲ್ಲಿರುವ ಸಿದ್ಧಾರ್ಥ ಕಾನೂನು ಮಹಾವಿದ್ಯಾಲಯದಲ್ಲಿ ಸಿದ್ಧಾರ್ಥ ಕಾನೂನು ನೆರವು ಕೇಂದ್ರ, ಎನ್‌ಎಸ್‌ಎಸ್ ಘಟಕ, ಐಕ್ಯೂಎಸಿ, ಪರಿಸರ ಕ್ಲಬ್, ಮಾನವ ಹಕ್ಕುಗಳ ಕ್ಲಬ್ ಹಾಗೂ ರೋಟರಿ ಕ್ಲಬ್ ಆಫ್ ಕಲಬುರಗಿ ಸಂಯುಕ್ತ ಆಶ್ರಯದಲ್ಲಿ ವಿಶ್ವ ಪರಿಸರ ದಿನ ಹಾಗೂ ವಿಶ್ವ ಆಹಾರ ಸುರಕ್ಷತಾ ದಿನ ಕಾರ್ಯಕ್ರಮವನ್ನು ಕೌಟುಂಬಿಕ ನ್ಯಾಯಾಲಯದ ಜಿಲ್ಲಾ ನ್ಯಾಯಾಧೀಶರಾದ ಶ್ರೀ ಪ್ರಭಾಕರ ರಾವ್ ಅವರು ಸಸಿ ನೆಡುವ ಮೂಲಕ ಉದ್ಘಾಟಿಸಿದರು.

ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಕರ್ತವ್ಯ ವಾಗಿದ್ದು, ಉತ್ತಮ ಪರಿಸರ ನಿರ್ಮಾಣದಿಂದ ಸಮಾಜದ ಅಭಿವೃದ್ಧಿ ಸಾಧ್ಯವಾಗುತ್ತದೆ. ಕುಟುಂಬದಲ್ಲಿ ಪರಸ್ಪರ ನಂಬಿಕೆ, ಗೌರವ ಮತ್ತು ಅರ್ಥೈಸಿಕೊಳ್ಳುವ ಮನೋಭಾವದ ವಾತಾವರಣ ಇದ್ದರೆ ಕುಟುಂಬಗಳು ಬಲಿಷ್ಠವಾಗುತ್ತವೆ. ಇದರಿಂದ ಕೌಟುಂಬಿಕ ಕಲಹಗಳು ಮತ್ತು ವಿಚ್ಛೇದನ ಪ್ರಕರಣಗಳು ಕಡಿಮೆಯಾಗುವುದ ರೊಂದಿಗೆ ಉತ್ತಮ ಸಮಾಜ ನಿರ್ಮಾಣಕ್ಕೆ ದಾರಿ ಮಾಡಿಕೊಡುತ್ತದೆ ಎಂದು ತಿಳಿಸಿದರು.




ಜೊತೆಗೆ ಪರಿಸರ ಸಂರಕ್ಷಣೆ, ಸ್ವಚ್ಛತೆ ಹಾಗೂ ಸುರಕ್ಷಿತ ಆಹಾರದ ಮಹತ್ವದ ಕುರಿತು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು.

ಪಾಲ್ಗೊಂಡ ಹೈಕೋರ್ಟ್ ವಕೀಲರು ಹಾಗೂ ರೋಟರಿ ಕ್ಲಬ್ ಆಫ್ ಗುಲ್ಬರ್ಗಾ ಅಧ್ಯಕ್ಷ ಉದಯ್ ಪಿ. ಹೊಂಗುಂಟಿಕರ್ ಮತ್ತು ರೋಟೇರಿಯನ್ ಪಿ.ಎಚ್.ಎಫ್. ಮಲ್ಲಣ್ಣ ಕನ್ನಿ ಅವರು ಪರಿಸರ ಸಂರಕ್ಷಣೆ, ಸಾಮಾಜಿಕ ಜವಾಬ್ದಾರಿ ಹಾಗೂ ರೋಟರಿ ಸಂಸ್ಥೆಯ ಸೇವಾ ಚಟುವಟಿಕೆಗಳ ಕುರಿತು ವಿವರಿಸಿದರು. ಕರ್ನಾಟಕ ಪೀಪಲ್ಸ್ ಎಜುಕೇಷನ್ ಸೊಸೈಟಿಯ ಆಡಳಿತಾಧಿಕಾರಿಗಳಾದ ಚಂದ್ರಶೇಖರ ಶೀಲವಂತ್ ಅವರು ಮಾತನಾಡಿ, ವಿಶ್ವ ಪರಿಸರ ದಿನ ಹಾಗೂ ವಿಶ್ವ ಆಹಾರ ಸುರಕ್ಷತಾ ದಿನದ ಮಹತ್ವವನ್ನು ವಿವರಿಸಿ, ಪರಿಸರ ಸಂರಕ್ಷಣೆ ಮತ್ತು ಸುರಕ್ಷಿತ ಆಹಾರದ ಕುರಿತು ಸಮಾಜದಲ್ಲಿ ಹೆಚ್ಚಿನ ಜಾಗೃತಿ ಮೂಡಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಸಿದ್ಧಾರ್ಥ ಕಾನೂನು ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಎಸ್. ಚಂದ್ರಶೇಖರ ಅವರು ಆರೋಗ್ಯಕರ ಜೀವನಕ್ಕಾಗಿ ಉತ್ತಮ ಪರಿಸರ, ಮಿತಾಹಾರ ಹಾಗೂ ಪೌಷ್ಟಿಕ ಆಹಾರ ಸೇವನೆ ಅತ್ಯಗತ್ಯ ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

# ಸಂಚಾರ ಇ–ಚಲನ್, ಸಾರಿಗೆ ಇಲಾಖೆ ಬಾಕಿ ದಂಡ ಪಾವತಿಗೆ ಶೇ.50 ರಿಯಾಯಿತಿ

**ಬಳ್ಳಾರಿ,ಜೂ.10.** ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ, ಮುಂಬರುವ ವಿಶೇಷ ಲೋಕ ಅದಾಲತ್ ಹಿನ್ನೆಲೆಯಲ್ಲಿ ಮೇ–2026 ಕ್ಕಿಂತ ಮೊದಲು ದಾಖಲಾಗಿರುವ ಸಂಚಾರ ನಿಯಮ ಉಲ್ಲಂಘನೆಯ ಇ–ಚಲನ್ ಹಾಗೂ ಸಾರಿಗೆ ಇಲಾಖೆಯಲ್ಲಿ 1991 ರಿಂದ 2022 ರ ಅವಧಿಯಲ್ಲಿ ಬಾಕಿ ಇರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇಕಡಾ 50 ರಷ್ಟು ವಿಶೇಷ ರಿಯಾಯಿತಿ ನೀಡಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಸಿದ್ದಲಿಂಗ ಪ್ರಭು ಅವರು ತಿಳಿಸಿದ್ದಾರೆ.

ಪೊಲೀಸ್ ಇಲಾಖೆ ಹಾಗೂ ಸಾರಿಗೆ ಇಲಾಖೆಯ ನಿಯಮಾವಳಿಗಳ ಪ್ರಕಾರ ದಾಖಲಾಗಿರುವ ಅರ್ಹ ಬಾಕಿ ಸಂಚಾರ ಇ–ಚಲನ್ ಮತ್ತು ಸಾರಿಗೆ ಇಲಾಖೆಯ ಪ್ರಕರಣಗಳಿಗೆ ಮಾತ್ರ ಈ ಶೇ.50 ರಿಯಾಯಿತಿ ಅನ್ವಯಿಸುತ್ತದೆ.



ಸಾರ್ವಜನಿಕರು ತಮ್ಮ ವಾಹನಗಳ ಬಾಕಿ ದಂಡವನ್ನು ಶೇ.50 ರಷ್ಟು ರಿಯಾಯಿತಿ ದರದಲ್ಲಿ ಕರ್ನಾಟಕ ಒನ್ ಕೇಂದ್ರಗಳು, ನಗರದ ಸಂಚಾರಿ ಪೊಲೀಸ್ ಠಾಣೆ, ಅಧಿಕೃತ ಆನ್‌ಲೈನ್ ಪೋರ್ಟಲ್‌ಗಳು (ಪರಿವಾಹನ ಪೋರ್ಟಲ್/ಕೆ.ಎಸ್.ಪಿ ಆಪ್), ಪ್ರಾದೇಶಿಕ ಸಾರಿಗೆ ಇಲಾಖೆ ಕಚೇರಿಯ ಮೂಲಕ ಪಾವತಿಸಬಹುದಾಗಿದೆ.

ನ್ಯಾಯಾಲಯಗಳಲ್ಲಿ ಮತ್ತು ಪೊಲೀಸ್ ಇಲಾಖೆಯಲ್ಲಿ ಬಾಕಿ ಉಳಿದಿರುವ ಲಕ್ಷಾಂತರ ಸಂಚಾರ ಪ್ರಕರಣಗಳನ್ನು ಸೌಹಾರ್ದಯುತವಾಗಿ ಹಾಗೂ ಶೀಘ್ರವಾಗಿ ಇತ್ಯರ್ಥಪಡಿಸಲು ಈ ಸುವರ್ಣಾವಕಾಶವನ್ನು ನೀಡಲಾಗಿದೆ.

ಸಾರ್ವಜನಿಕರು ಹಾಗೂ ವಾಹನ ಸವಾರರು ಯಾವುದೇ ಕಾನೂನು ಪ್ರಕ್ರಿಯೆಗಳ ಜಂಜಾಟವಿಲ್ಲದೆ, ಈ ರಿಯಾಯಿತಿಯ ಲಾಭವನ್ನು ಪಡೆದು ತಮ್ಮ ಬಾಕಿ ದಂಡವನ್ನು ಪಾವತಿಸಿ ಸಹಕರಿಸಬೇಕು ಎಂದು ಪ್ರಧಾನ ಜಿಲ್ಲಾ ನ್ಯಾಯಾಧೀಶರು ವಿನಂತಿಸಿದ್ದಾರೆ.

# ಮೋದಿಯಿಂದ ಅಭಿವೃದ್ಧಿಯ ಹೊಸಯುಗ ಆರಂಭ: ಭಗವಂತ ಖೂಬಾ

**ಬೀದರ್, ಜೂ.10–**ಸನ್ಮಾನ್ಯ ಶ್ರೀ ನರೇಂದ್ರ ಮೋದಿಜೀಯವರು, ನಿರಂತರವಾಗಿ 4399 ದಿನಗಳು ದೇಶದ ಪ್ರಧಾನಿಯಾಗಿ ಸೇವೆ ಸಲ್ಲಿಸುವ ಮೂಲಕ ಹೊಸ ದಾಖಲೆ ನಿರ್ಮಿಸಿದ್ದಾರೆ, 2014 ರಿಂದ ಇಂದಿನವರೆಗೆ ಭಾರತವು ಎಲ್ಲಾ ದಿಸೆಯಲ್ಲಿ ಅಭಿವೃದ್ಧಿಯಾಗಿದೆ, ಮೂಲಭೂತ ಸೌಕರ್ಯಗಳು, ದೇಶದ ಆಂತರಿಕ ಭದ್ರತೆ, ಆರ್ಥಿಕ ಸ್ಥಿತಿಗತಿ, ಜನರ ಜೀವನಮಟ್ಟ ಸುಧಾರಣೆ, ಬಡವರ, ರೈತರ, ದಲಿತರ, ಹೆಣ್ಣುಮಕ್ಕಳ ಜೀವನಕ್ಕೆ ಭದ್ರ ಅಡಿಪಾಯ ಮತ್ತು ಭ್ರಷ್ಟಚಾರರಹಿತ, ದಲ್ಲಾಳಿಗಳ ಮುಕ್ತ ಆಡಳಿತ ಮತ್ತು ವಿಶ್ವಮಟ್ಟದಲ್ಲಿ ತನ್ನದೆ ಆದ ಹೊಸ ಛಾಪು ಮೂಡಿಸಿ, ಭಾರತಕ್ಕೆ ಗೌರವತಂದಿರುವ ನರೇಂದ್ರ ಮೋದಿಜೀಯವರು ದೇಶದ ಅಭಿವೃದ್ಧಿಯ ಹೊಸ ಯುಗ ಆರಂಭಿಸಿದ್ದಾರೆ ಎಂದರೆ ಅತಿಶಯೋಕ್ತಿಯಾಗಲಾರದು ಎಂದು ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ಅಭಿಪ್ರಾಯಪಟ್ಟಿದ್ದಾರೆ.

1947ರಲ್ಲಿ ಸ್ವಾತಂತ್ರ್ಯ ಬಂದಾಗ ಅಂದಿನ ಪ್ರಧಾನಿ ನೇಹರು ಅವರು ಮೊದಲನೇ ಪ್ರಧಾನಿಯಾಗಿ ನೇರವಾಗಿ ಆಯ್ಕೆಯಾಗಿದ್ದರು, ನಂತರ 1952ರಲ್ಲಿ ಮೊದಲ ಬಾರಿಗೆ ಚುನಾವಣೆ ಎದುರಿಸಿದರು, ಅಂದು ದೇಶದಲ್ಲಿ ಇದ್ದದ್ದು ಕೇವಲ 50–55 ಪಕ್ಷಗಳು ಆದರೆ ಅಂದಿನ ಕಾಂಗ್ರೆಸ್ ಪಕ್ಷದ ಮುಂದೆ ಬೇರೆ ಎಲ್ಲಾ ಪಕ್ಷಗಳ ಅಸ್ತಿತ್ವ ಕೂಡ ನಗಣ್ಯವಾಗಿತ್ತು, ನಂತರವು ಈ ದೇಶದ ಅಧಿಕಾರ 50 ರಿಂದ 60 ವರ್ಷ ವಂಶಪಾರಂಪರ್ಯವಾಗಿತ್ತು, ಆದರೆ



ಒಬ್ಬ ಸಾಮಾನ್ಯ ಕುಟುಂಬದಿಂದ ಬಂದ ಮೋದಿಯವರು ಇಂತಹ ಡಿಜಿಟಲ್ ಯುಗದಲ್ಲಿ 2000ಕ್ಕೂ ಹೆಚ್ಚು ಪಕ್ಷಗಳು ಇರುವ ಅತಿದೊಡ್ಡ ಪ್ರಜಾಪ್ರಭುತ್ವದ ದೇಶದಲ್ಲಿ ನಿರಂತರವಾಗಿ 4399 ದಿವಸ ಪ್ರಧಾನಿಯಾಗಿರುವುದು ಐತಿಹಾಸಿಕ. ದೇಶಕ್ಕಾಗಿ ದಣಿವರಿಯದೆ ದುಡಿದು ದೇಶದ ಭೌಗೋಳಿಕ ಗಾತ್ರ, ಸಾಂಸ್ಕೃತಿಕ ವೈವಿಧ್ಯ, ಆರ್ಥಿಕತೆ ಮತ್ತು ನಾಗರಿಕ ವೈಚಾರಿಕತೆ ದೃಷ್ಟಿಯಿಂದಲೂ ಭಾರತವು ಇವರ ಆಡಳಿತವಾಧಿಯಲ್ಲಿ ಅಭಿವೃದ್ಧಿಗೊಂಡಿದೆ ಎಂದಿದ್ದಾರೆ.

ಜೊತೆಗೆ ನೆಹರು ಸಂಪುಟದಲ್ಲಿ ಅತಿಹೆಚ್ಚು ಮೇಲ್ಜಾತಿಯವರೇ ಇದ್ದಿದ್ದು ಇತಿಹಾಸ ಆದರೆ ಇಂದು ಮೋದಿ ಸಂಪುಟದಲ್ಲಿ 27 ಜನ ಓಬಿಸಿ, 10 ಜನ ಪರಿಶಿಷ್ಟ ಜಾತಿ, 5 ಜನ ಪರಿಶಿಷ್ಟ ಪಂಗಡಗಳ ಸದಸ್ಯರಿದ್ದಾರೆ ಜೊತೆಗೆ ಮಹಿಳೆಯರಿಗೂ ಆದ್ಯತೆ ನೀಡಿದ್ದಾರೆ. ಮೋದಿಯವರು ಎಲ್ಲರನ್ನು ಒಟ್ಟಿಗೆ ತೆಗೆದುಕೊಂಡು, ದೇಶದ ಅಭಿವೃದ್ಧಿಗೆ ಎಲ್ಲರ ಪಾಲು ಇರಲಿ ಎಂದು ಬಯಸುವ ನಾಯಕ ಎಂದು ಭಗವಂತ ಖೂಬಾ ಬಣ್ಣಿಸಿದ್ದಾರೆ.

ದೇಶದ ಜನರು ಕೂಡ ಮೋದಿಯವರನ್ನು ಒಬ್ಬ ಸಿದ್ದಿ ಪುರುಷನಂತೆ ಕಾಣುತ್ತಾರೆ, ಈ ಕಾರಣಕ್ಕಾಗಿಯೇ ಇಡಿ ವಿಶ್ವವೇ ತೊಂದರೆಯಲ್ಲಿದ್ದರು, ನಾವೇಲ್ಲಾ ಭಾರತಿಯರು ಸುರಕ್ಷಿತವಾಗಿದ್ದೇವೆ ಎಂದು ಜನರು ಮಾತಾಡುತ್ತಾರೆ ಎಂದು ತಿಳಿಸಿದ್ದಾರೆ.

ಮೋದಿ ಅವರ ಈ ಅಭಿವೃದ್ಧಿಯ ಹೊಸ ಯುಗದಲ್ಲಿ, ನನ್ನ ಅವಧಿಯ 10 ವರ್ಷಗಳಲ್ಲಿ ಬೀದರ ಲೋಕಸಭಾ ಕ್ಷೇತ್ರದ ಅಭಿವೃದ್ಧಿಯೂ ಅಷ್ಟೆ ವೇಗವಾಗಿ ಆಗಿರುವುದೇ ಪ್ರತ್ಯಕ್ಷ ಸಾಕ್ಷಿಯಾಗಿದೆ, ಬೀದರ ಎಂದರೆ ಅಯ್ಯೋ ಎಂದು ತಲೆ ಮೇಲೆ ಕೈಯಿಟ್ಟುಕೊಳ್ಳುತ್ತಿದ್ದ ಅಭಿವೃದ್ಧಿ ಹೊಂದಿದ ನಗರಗಳ ಜನರು, ಇಂದು ಬೀದರ ಜಿಲ್ಲೆಗೆ ಬರಲು ಖುಷಿ ಪಡುತ್ತಾರೆ. ಆ ರೀತಿ ಬೀದರ ಜಿಲ್ಲೆಯನ್ನು ಎಲ್ಲಾ ದಿಸೆಯಲ್ಲಿ ಅಭಿವೃದ್ಧಿಗೊಳಿಸಿದ್ದೇನೆ, ಇದಕ್ಕೆಲ್ಲ ಕಾರಣ ಮೋದಿ ಸಹಕಾರ ಹಾಗು ಮಾರ್ಗದರ್ಶನ ಎಂದಿದ್ದಾರೆ.

ದೇವರು ಮೋದಿ ಅವರಿಗೆ ಇನ್ನು ಹೆಚ್ಚಿನ ಆಯುರಾರೋಗ್ಯ ನೀಡಿ, ದೇಶಸೇವೆ ಮಾಡಲು ಶಕ್ತಿ ನೀಡಿ ಹರಸಲೆಂದು ಖೂಬಾ ತಿಳಿಸಿದ್ದಾರೆ.



ಇಂಧನ ಬೆಲೆ ಏರಿಕೆ ಖಂಡಿಸಿ ಕೋಲಾರದಲ್ಲಿ ಬುಧವಾರ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

## ಬಿದ್ರಿ ವೃತ್ತಕ್ಕೆ ಹೊಸ ಮೆರಗು ನೀಡಿದ ರೋಟರಿ ಸಿಲ್ವರ್ ಸ್ಟಾರ್

**ಬೀದರ್, ಜೂ. 10:** ಜಿಲ್ಲೆಯ ಹೆಮ್ಮೆಯ ಪ್ರತೀಕವಾಗಿರುವ ಬಿದ್ರಿ ಕಲೆಯ ಸ್ಮರಣಾರ್ಥ ನಗರದ ಹೈದ್ರಾಬಾದ್ ರಸ್ತೆಯಲ್ಲಿರುವ ಬಿದ್ರಿ ವೃತ್ತಕ್ಕೆ ರೋಟರಿ ಕ್ಲಬ್ ಆಫ್ ಬೀದರ್ ಸಿಲ್ವರ್ ಸ್ಟಾರ್ ವತಿಯಿಂದ ಹೊಸ ಮೆರುಗು ನೀಡಲಾಗಿದೆ. ರೋಟರಿ ಸಿಲ್ವರ್ ಕೈಗೊಂಡಿದ್ದ ಸೌಂದರ್ಯೀಕರಣ ಕಾಮಗಾರಿಯನ್ನು ರೋಟರಿ ಡಿಸ್ಟ್ರಿಕ್ಟ್ ಗವರ್ನರ್ ಎಂ.ಕೆ. ರವೀಂದ್ರ ಅವರು ಉದ್ಘಾಟಿಸಿ, ನಗರದ ಸೌಂದರ್ಯ ಹೆಚ್ಚಿಸುವ ಹಾಗೂ ಪ್ರವಾಸಿಗರನ್ನು ಆಕರ್ಷಿಸುವ ಉದ್ದೇಶದಿಂದ ಕೈಗೊಂಡಿರುವ ಈ ಕಾರ್ಯ ಶ್ಲಾಘನೀಯವಾಗಿದೆ ಎಂದು ಬಣ್ಣಿಸಿದರು.

## ಶಾಸಕ ಗಾಲಿ ಜನಾರ್ಧನ ರೆಡ್ಡಿ, ಶ್ರೀಮತಿ ಗಾಲಿ ಲಕ್ಷ್ಮಿ ಅರುಣ'ರಿಂದ "ನಾರಿ ಜೀವನ್ ಸೀಜನ್-3" ಉಚಿತ ತರಬೇತಿ ಶಿಬಿರಕ್ಕೆ ಚಾಲನೆ



ಬಳ್ಳಾರಿ ಜೂ 10. ಬಳ್ಳಾರಿ ನಗರದ ಹವಂಬಾವಿ ರಸ್ತೆಯಲ್ಲಿರುವ ಗ್ಲಾಸ್ ಹೌಸ್ ನಲ್ಲಿ ಜರುಗಿದ ವಿಶ್ವ ಭಾರತಿ ಕಲಾನಿಕೇತನ ಹಾಗೂ ಶಿಕ್ಷಣ ಸಂಸ್ಥೆಯ ವತಿಯಿಂದ "ನಾರಿ ಜೀವನ್" ಸೀಸನ್–3 ಉಚಿತ ತರಬೇತಿ ಶಿಬಿರಕ್ಕೆ ಗಾಲಿ ಜನಾರ್ಧನ ರೆಡ್ಡಿ ಹಾಗೂ ಶ್ರೀಮತಿ ಗಾಲಿ ಲಕ್ಷ್ಮಿ ಅರುಣ ಅವರು ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಹೆಮ್ಮೆಯ ಪ್ರಧಾನಮಂತ್ರಿ ನರೇಂದ್ರ ಮೋದಿ ಜೀ ಅವರ ನೇತೃತ್ವದ ಕೇಂದ್ರ ಸರ್ಕಾರದ 12 ವರ್ಷಗಳ ಯಶಸ್ವಿ ಆಡಳಿತ ಹಾಗೂ ಭಾರತದ ಪ್ರಜಾಪ್ರಭುತ್ವದ ಇತಿಹಾಸದಲ್ಲಿ ಜನರಿಂದ ಚುನಾಯಿತರಾಗಿ ಅತ್ಯಂತ ದೀರ್ಘಾವಧಿಗೆ ಪ್ರಧಾನಮಂತ್ರಿಯಾಗಿ ಹೊಸ ದಾಖಲೆ ನಿರ್ಮಿಸಿರುವ ನರೇಂದ್ರ ಮೋದಿ ಜೀ ಅವರಿಗೆ ಅಭಿನಂದನೆ ಸಲ್ಲಿಸಿದರು.

ಹಾಗೂ ಮುಂಜಾನೆ ಗ್ರಾಮ ದೇವತೆ ಶ್ರೀ ಕನಕ ದುರ್ಗಮ್ಮ ದೇವಸ್ಥಾನದಲ್ಲಿ ಮೋದಿಜಿಯವರ ಪ್ರತಿಯೊಂದು ಕಾರ್ಯವು ಯಶಸ್ವಿಯಾಗಲಿ ಅವರು ಉತ್ತಮ ಆರೋಗ್ಯದ ಆಯುಷ್ಯ ಹಾಗೂ ಇನ್ನಷ್ಟು ಶಕ್ತಿಯಿಂದ ದೇಶ ಸೇವೆಯನ್ನು ಮುಂದುವರಿಸಲಿ ಎಂದು ಶ್ರೀಮತಿ ಗಾಲಿ ಲಕ್ಷ್ಮಿ ಅರುಣ ಜನಾರ್ಧನ ರೆಡ್ಡಿಯವರು ಪೂಜೆ ಸಲ್ಲಿಸಿದರು.

ಮೋದಿಜಿಯವರ "ನಾರಿ ಶಕ್ತಿ ದೇಶದ ಶಕ್ತಿ" ಎಂಬ ಆಶಾಯದಂತೆ ಮಹಿಳಾ ಸಬಲೀಕರಣ ಮತ್ತು ಸ್ವಾವಲಂಬಿ ಸಮಾಜ ನಿರ್ಮಾಣದ ಉದ್ದೇಶದಿಂದ ಆಯೋಜಿಸಲಾದ ಈ ಶಿಬಿರದಲ್ಲಿ ಮಹಿಳೆಯರಿಗೆ ಸ್ವ–ಉದ್ಯೋಗ, ಕೌಶಲ್ಯಾಭಿವೃದ್ಧಿ ಹಾಗೂ ಆರ್ಥಿಕ ಸ್ವಾವಲಂಬನೆಗೆ ಅಗತ್ಯವಾದ ವಿವಿಧ ತರಬೇತಿಗಳನ್ನು ನೀಡಲಾಗುತ್ತದೆ.

"ನಾರಿ ಜೀವನ" ಕಾರ್ಯಕ್ರಮದ ಮೂಲಕ ಮಹಿಳೆಯರು ಆತ್ಮವಿಶ್ವಾಸದಿಂದ ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಪ್ರೇರಣೆ ಮತ್ತು ಮಾರ್ಗದರ್ಶನ ದೊರೆಯಲಿದ್ದು, ಮಹಿಳಾ ಸಬಲೀಕರಣದ ದಿಸೆಯಲ್ಲಿ ಇದು ಮಹತ್ವದ ಹೆಜ್ಜೆಯಾಗಿದೆ.

# ಕನೇರಿ ಸ್ವಾಮೀಜಿ ಬಸವಕಲ್ಯಾಣ ಪ್ರವೇಶಕ್ಕೆ, ತಡೆಯೊಡ್ಡಲು ಬಸವಪೀಠದ ಸ್ವಾಮಿಗಳ ನಿರ್ಧಾರ

**ಬೀದರ್, ಜೂ. 10:** ಕನೇರಿ ಮಠದ ಅದೃಶ್ಯ ಕಾಡಸಿದ್ಧೇಶ್ವರ ಸ್ವಾಮೀಜಿ ಅವರಿಗೆ ಜೂನ್ 28ರಂದು ಬಸವಕಲ್ಯಾಣದಲ್ಲಿ ನಡೆಯಲಿರುವ ಹಿಂದೂ ಶರಣರ ಸಮಾವೇಶದಲ್ಲಿ ಭಗವಹಿಸದಂತೆ ಪ್ರವೇಶಕ್ಕೆ ತಡೆಯೊಡ್ಡಲು ಜಿಲ್ಲೆಯ ಮಠಾಧೀಶರು, ಬಸವ ಪರ ಸಂಘಟನೆಗಳ ಪ್ರಮುಖರು ಹಾಗೂ ಬಸವಾನುಯಾಯಿಗಳು ನಿರ್ಧರಿಸಿದರು.



ಭಾಲ್ಕಿ ಹಿರೇಮಠ ಸಂಸ್ಥಾನದ ಡಾ.ಬಸವಲಿಂಗ ಪಟ್ಟದ್ದೇವರ ಅಧ್ಯಕ್ಷತೆಯಲ್ಲಿ ಗಾಂಧಿ ಗಂಜ್ ಬಸವೇಶ್ವರ ದೇವಸ್ಥಾನದಲ್ಲಿ ಜಾಗತಿಕ ಲಿಂಗಾಯತ ಮಹಾಸಬಾ ವತಿಯಿಂದ ನಡೆದ ಸಭೆಯಲ್ಲಿ ಈ ಕುರಿತು ಒಕ್ಕೊರಲ ತೀರ್ಮಾನ ಕೈಗೊಂಡರು.

ಕನೇರಿ ಸ್ವಾಮೀಜಿ ಬಸವ ಭಕ್ತರನ್ನು ಬಸವ ಹೆಸರಿನ ತಾಲಿಬಾನಿಗಳೆಂದು ಅವಮಾನಿಸಿದ್ದಾರೆ. ಬಸವ ತತ್ವ ಪ್ರಚಾರ ಮಾಡುತ್ತಿರುವ ಮಠಾಧೀಶರನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ. ಬಸವ ತತ್ವವನ್ನು ಮನಬಂದಂತೆ ಹೇಳುತ್ತಾ ಜನರ ದಾರಿತಪ್ಪಿಸುತ್ತಿದ್ದಾರೆ. ಕಾರಣ, ಅವರಿಗೆ ಬಸವಾದಿ ಶರಣರ ಪುಣ್ಯ ಭೂಮಿ ಬಸವಕಲ್ಯಾಣ ಸ್ಪರ್ಶಿಸಲು ಬಿಡುವುದಿಲ್ಲ ಎಂದು ಘೋಷಿಸಿದರು.

ಕನೇರಿ ಸ್ವಾಮೀಜಿ ಬಸವಕಲ್ಯಾಣ ಪ್ರವೇಶ ವಿರೋಧಿಸಿ ಬೀದರ್ ಸೇರಿದಂತೆ ರಾಜ್ಯದಾದ್ಯಂತ ತೀವ್ರ ಹೋರಾಟ ನಡೆಸಲಾಗುವುದು. ರಾಜ್ಯ ಸರ್ಕಾರ ಕೂಡಲೇ ಎಚ್ಚೆತ್ತುಕೊಂಡು ಸ್ವಾಮೀಜಿ ಬಸವಕಲ್ಯಾಣ ಪ್ರವೇಶಕ್ಕೆ ನಿರ್ಬಂಧ ಹೇರಬೇಕು ಎಂದು ಒತ್ತಾಯಿಸಿದರು.

ಕನೇರಿ ಸ್ವಾಮೀಜಿ ವಿನಾಕಾರಣ ಬಸವ ತತ್ವ ವಿರೋಧಿ ಹೇಳಿಕೆಗಳನ್ನು ಕೊಡುತ್ತಿದ್ದಾರೆ. ಸುಪ್ರೀಂಕೋರ್ಟ್ ನೀನೊಬ್ಬ ಒಳ್ಳೆಯ ಪ್ರಜೆಯಲ್ಲ ಎಂದು ಛೀಮಾರಿ ಹಾಕಿದರೂ, ಹಳೆಯ ಚಾಳಿ ಬಿಟ್ಟಿಲ್ಲ. ಹೀಗಾಗಿ ಬಸವಾನುಯಾಯಿಗಳು ಅವರ ವಿರುದ್ಧ ಒಗ್ಗಟ್ಟಿನಿಂದ ಉಗ್ರ ಹೋರಾಟ ನಡೆಸುವುದು ಅನಿವಾರ್ಯವಾಗಿದೆ ಎಂದು ಹೇಳಿದರು.

ಸಾನ್ನಿಧ್ಯ ವಹಿಸಿದ್ದ ಕರ್ನಾಟಕ ಲಿಂಗಾಯತ ಮಠಾಧಿಪತಿಗಳ ಒಕ್ಕೂಟದ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು ಮಾತನಾಡಿ, ಕನೇರಿ ಸ್ವಾಮೀಜಿ ಸುಳ್ಳಿನ ಸರದಾರರು. ಅವರ ಬಸವ ತತ್ವ ವಿರೋಧಿ ನಡೆಯನ್ನು ಖಂಡಿಸಲಾಗುತ್ತದೆ ಎಂದು ಹೇಳಿದರು.

ಕಾಡಸಿದ್ಧೇಶ್ವರ ಮಠ ಶರಣ ಪರಂಪರೆಯ ಮಠವಾಗಿದೆ. ಮಠದಲ್ಲಿ ಭಾರತದ ಎಲ್ಲ ದಿವ್ಯ ಪುರುಷರ ಮೂರ್ತಿಗಳು ಇವೆ. ಬಸವಾದಿ ಶರಣರ ಮೂರ್ತಿಗಳೇಕಿಲ್ಲ ಎಂದು ಪ್ರಶ್ನಿಸಿದರು.

ಕನೇರಿ ಸ್ವಾಮೀಜಿ ಅವರ ವಿರುದ್ಧ ಲಿಂಗಾಯತರು, ಬಸವ ಪರ ಸಂಘಟನೆಗಳೆಲ್ಲ ಒಂದಾಗಿ ಹೋರಾಟ ಮಾಡುವ ಸಂದರ್ಭ ಬಂದಿದೆ ಎಂದು ತಿಳಿಸಿದರು.

ಬಸವ ಸೇವಾ ಪ್ರತಿಷ್ಠಾನದ ಗಂಗಾಂಬಿಕಾ ಅಕ್ಕ ಮಾತನಾಡಿ, ಪುರೋಹಿತ ಶಾಹಿಗಳಿಂದ ನಡೆಯುತ್ತಿರುವ ಅನ್ಯಾಯ ಬಸವಕಲ್ಯಾಣದ ಪವಿತ್ರ ನೆಲದಲ್ಲಿ ಘಟಿಸಲು ಅವಕಾಶ ಕೊಡುವುದಿಲ್ಲ. ಬಸವ ತತ್ವ ಪ್ರಸಾರದ ಹೆಚ್ಚುವಿಕೆ ಜಾತಿವಾದಿಗಳ ನಿದ್ದೆಗೆಡಿಸಿದೆ. ಅದರ ಪರಿಣಾಮವೇ ಕನೇರಿ ಸ್ವಾಮೀಜಿ ಅರಚಾಟ ಎಂದರು.

## ಎಪಿಎಂಸಿಯಲ್ಲಿ ಮತ್ತೊಂದು ಗೋಲ್‌ಮಾಲ್ ಆರೋಪ ಕೋಟಿ ಕೋಟಿ ಲೂಟಿ? ಸರ್ಕಾರದ ಆಸ್ತಿಗೆ ಅಗ್ಗದ ಬೆಲೆ, ಸರ್ಕಾರಕ್ಕೆ ಬಡತನ!!

**ಬಳ್ಳಾರಿ, ಜೂ 10:** ಬಳ್ಳಾರಿ ಕೃಷಿ ಉತ್ಪನ್ನ ಮಾರುಕಟ್ಟೆ (ಎಪಿಎಂಸಿ) ಯಲ್ಲಿ ಸರ್ಕಾರದ ಆಸ್ತಿಯನ್ನು ಲೀಸ್–ಕಮ್–ಸೇಲ್ ಹೆಸರಿನಲ್ಲಿ ಕಡಿಮೆ ಬೆಲೆಗೆ ಹರಾಜು ಮಾಡಿ ಕೋಟ್ಯಂತರ ರೂಪಾಯಿ ಮೌಲ್ಯದ ಗೋಲ್‌ಮಾಲ್ ನಡೆದಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿವೆ.

ಕೃಷಿ ವಹಿವಾಟುಗಳಿಗೆ ಅನುಕೂಲವಾಗಬೇಕಿದ್ದ ಅಮೂಲ್ಯ ಆಸ್ತಿಗಳು ರಾಜಕೀಯ ನಾಯಕರು, ಅವರ ಆಪ್ತರು ಹಾಗೂ ಕೆಲವು ಅಧಿಕಾರಿಗಳ ಸಹಕಾರದಿಂದ ಅಲ್ಪ ಬೆಲೆಗೆ ಖಾಸಗಿ ವ್ಯಕ್ತಿಗಳ ಪಾಲಾಗುತ್ತಿವೆ ಎಂದು ಸಾರ್ವಜನಿಕ ವಲಯದಲ್ಲಿ ಚರ್ಚೆಯಾಗುತ್ತಿದೆ.

ಆಸ್ತಿಯನ್ನು ಉಳಿಸಿ ಸರ್ಕಾರಕ್ಕೆ ಹೆಚ್ಚಿನ ಆದಾಯ ತಂದುಕೊಡಬೇಕಾದ ಜವಾಬ್ದಾರಿ ಹೊಂದಿರುವ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳೇ ನಿಯಮಗಳನ್ನು ದುರುಪಯೋಗಪಡಿಸಿಕೊಂಡು ಆಸ್ತಿ ಹಸ್ತಾಂತರಕ್ಕೆ ಮುಂದಾಗಿದ್ದಾರೆ ಎಂಬ ಅನುಮಾನ ವ್ಯಕ್ತವಾಗಿದೆ. ಸರ್ಕಾರ ನಿಗದಿಪಡಿಸಿರುವ ದರಕ್ಕಿಂತ ಸ್ವಲ್ಪ ಹೆಚ್ಚು ಮೊತ್ತಕ್ಕೆ ಹರಾಜು ನಡೆಸಿ, ವಾಸ್ತವ ಮಾರುಕಟ್ಟೆ ಮೌಲ್ಯಕ್ಕಿಂತ ಬಹಳ ಕಡಿಮೆ ಬೆಲೆಗೆ ಆಸ್ತಿ ನೀಡುವ ಮೂಲಕ ಕೋಟ್ಯಾಂತರ ರೂಪಾಯಿ ನಷ್ಟ ಉಂಟುಮಾಡಲಾಗಿದೆ ಎಂಬ ಆರೋಪವೂ ಇದೆ. ಈ ಕುರಿತು ಪ್ರತಿಕ್ರಿಯೆ ನೀಡಿರುವ ಎಪಿಎಂಸಿ ಕಾರ್ಯದರ್ಶಿ ಜಯಕುಮಾರ್, "ಎಲ್ಲಾ ಪ್ರಕ್ರಿಯೆಗಳು ಸರ್ಕಾರದ ನಿಯಮಾನುಸಾರವೇ ನಡೆದಿವೆ. ಅಧ್ಯಕ್ಷರ ನಿರ್ದೇಶನದಂತೆ ಕ್ರಮ ಕೈಗೊಳ್ಳಲಾಗಿದೆ. ಈ ಬಗ್ಗೆ ಅವರನ್ನೇ ಸಂಪರ್ಕಿಸಿ. ನಾನು ಇನ್ನೊಂದು ತಿಂಗಳಲ್ಲಿ ನಿವೃತ್ತಿಯಾಗಲಿದ್ದೇನೆ," ಎಂದು ತಿಳಿಸಿದ್ದಾರೆ.



**15 ಸಾವಿರ ಚದರ ಅಡಿ ಆಸ್ತಿ ಕೇವಲ 1.81 ಕೋಟಿ** ಆರೋಪಗಳ ಪ್ರಕಾರ, ಬೆಂಗಳೂರು ಮುಖ್ಯರಸ್ತೆಗೆ ಹೊಂದಿಕೊಂಡಿರುವ ಸುಮಾರು 15,000 ಚದರ ಅಡಿ ವಿಸ್ತೀರ್ಣದ ವಾಣಿಜ್ಯ ಮೌಲ್ಯದ ಜಾಗವನ್ನು ಕೇವಲ 1,81,50,000 ಕ್ಕೆ ಹರಾಜು ಮಾಡಲಾಗಿದೆ. ಸರ್ಕಾರ ನಿಗದಿಪಡಿಸಿದ್ದ ಮೂಲ ದರ ಪ್ರತಿ ಚದರ ಅಡಿಗೆ 800 ಇದ್ದರೆ, ಹರಾಜಿನಲ್ಲಿ ಅಂತಿಮವಾಗಿ 1,210 ದರ ನಿಗದಿಯಾಗಿದೆ. ಇದರಿಂದ ಸರ್ಕಾರಕ್ಕೆ ಸುಮಾರು 61.50 ಲಕ್ಷ ಹೆಚ್ಚುವರಿ ಆದಾಯ ಬಂದಿದೆ ಎಂದು ಅಧಿಕಾರಿಗಳು ಹೇಳುತ್ತಿದ್ದರೂ, ನೈಜ ಮಾರುಕಟ್ಟೆ ಮೌಲ್ಯವನ್ನು ಹೋಲಿಸಿದರೆ ಕೋಟ್ಯಂತರ ರೂಪಾಯಿ ನಷ್ಟವಾಗಿದೆ ಎಂದು ಆರೋಪಿಸಲಾಗಿದೆ. ಬಳ್ಳಾರಿಯ ಸಾಮಾನ್ಯ ಪ್ರದೇಶಗಳಲ್ಲಿಯೇ ಪ್ರತಿ ಚದರ ಅಡಿ 2,500 ರಿಂದ 3,500ರವರೆಗೆ ಬೆಲೆ ಇದೆ. ವಾಣಿಜ್ಯ ಪ್ರದೇಶಗಳಲ್ಲಿ ಇದು ?5,000 ರಿಂದ 10,000ಕ್ಕೂ ಅಧಿಕವಾಗಿದೆ. ಈ ಲೆಕ್ಕಾಚಾರದ ಪ್ರಕಾರ, ಹರಾಜಾಗಿರುವ ಆಸ್ತಿಯ ನೈಜ ಮೌಲ್ಯ ಸುಮಾರು 8 ರಿಂದ 10 ಕೋಟಿವರೆಗೆ ಇರಬಹುದೆಂದು ಸ್ಥಳೀಯರು ಅಂದಾಜಿಸುತ್ತಿದ್ದಾರೆ.

**ಲೀಸ್–ಕಮ್–ಸೇಲ್ ಪ್ರಕ್ರಿಯೆ ಮೇಲೂ ಅನುಮಾನ** ಈ ಆಸ್ತಿ ಈ ಹಿಂದೆ ಪೆಟ್ರೋಲ್ ಬಂಕ್‌ಗಾಗಿ ಬಳಸಲಾಗುತ್ತಿದ್ದು, ಹಲವು ವರ್ಷಗಳ ಕಾಲ ನ್ಯಾಯಾಲಯದಲ್ಲಿ ವ್ಯಾಜ್ಯದಲ್ಲಿತ್ತು. ನಂತರ ಪ್ರಕರಣ ಎಪಿಎಂಸಿ ಪರವಾಗಿ ತೀರ್ಮಾನಗೊಂಡಿದ್ದು, ಆಸ್ತಿ ಮಾರುಕಟ್ಟೆ ಸಮಿತಿಯ ವಶಕ್ಕೆ ಬಂದಿದೆ. ಕೃಷಿ ವಹಿವಾಟುಗಳಿಗೆ ಪೂರಕವಾಗಿ ಈ ಜಾಗವನ್ನು ಅಭಿವೃದ್ಧಿ ಪಡಿಸುವ ಬದಲು ಹರಾಜು ಪ್ರಕ್ರಿಯೆಗೆ ಮುಂದಾಗಿರುವುದು ಪ್ರಶ್ನೆಗಳನ್ನು ಹುಟ್ಟುಹಾಕಿದೆ.

## ಸಂಡೂರು: ಮತಗಟ್ಟೆ ಅಧಿಕಾರಿಗಳ ತರಬೇತಿ ಕೇಂದ್ರಕ್ಕೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಭೇಟಿ, ಅಧಿಕಾರಿಗಳಿಗೆ ಮಾರ್ಗದರ್ಶನ



**ಬಳ್ಳಾರಿ,ಜೂ.10.** ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಹಿನ್ನೆಲೆಯಲ್ಲಿ ಸಂಡೂರು ವಿಧಾನಸಭಾ ಕ್ಷೇತ್ರದ ಮತಗಟ್ಟೆ ಅಧಿಕಾರಿಗಳು ಮತ್ತು ಮತಗಟ್ಟೆ ಮೇಲ್ವಿಚಾರಕರಿಗೆ ಮಂಗಳವಾರ ಹಮ್ಮಿಕೊಂಡಿದ್ದ ವಿಶೇಷ ತರಬೇತಿ ಕಾರ್ಯಾಗಾರಕ್ಕೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಯೂ ಆದ ನಾಗೇಂದ್ರ ಪ್ರಸಾದ್.ಕೆ ಅವರು ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಿದರು.

ಸಂಡೂರು ಪಟ್ಟಣದ ಕುಮಾರಸ್ವಾಮಿ ಮಾದರಿ ಹಿರಿಯ ಪ್ರಾಥಮಿಕ ಶಾಲೆಯ ತರಬೇತಿ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಾಗಾರದಲ್ಲಿ ಪಾಲ್ಗೊಂಡ ಜಿಲ್ಲಾಧಿಕಾರಿಯವರು, ಎಸ್‌ಐಆರ್ ಪ್ರಕ್ರಿಯೆಯನ್ನು ಅತ್ಯಂತ ಜವಾಬ್ದಾರಿಯಿಂದ ನಿಭಾಯಿಸುವ ಕುರಿತು ಅಧಿಕಾರಿಗಳಿಗೆ ಅಗತ್ಯ ಮಾಹಿತಿ ಮತ್ತು ಮಹತ್ವದ ನಿರ್ದೇಶನಗಳನ್ನು ನೀಡಿದರು.

ಎಸ್‌ಐಆರ್ ಪ್ರಕ್ರಿಯೆಯ ಕರ್ತವ್ಯದಲ್ಲಿ ಯಾವುದೇ ರೀತಿಯ ಲೋಪದೋಷಗಳಿಗೆ ಆಸ್ಪದ ನೀಡಬಾರದು. ಪ್ರತಿಯೊಬ್ಬ ಮತಗಟ್ಟೆ ಅಧಿಕಾರಿಯೂ ನಿಯಮಾವಳಿ ಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಮತ್ತು ಎದುರಾಗಬಹುದಾದ ಸವಾಲುಗಳನ್ನು ಹೇಗೆ ನಿಭಾಯಿಸಬೇಕು ಎಂಬುದರ ಕುರಿತು ಸ್ಪಷ್ಟ ಜ್ಞಾನ ಹೊಂದಿರಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾಧಿಕಾರಿಗಳೇ ಖುದ್ದಾಗಿ ಸ್ಥಳಕ್ಕೆ ಆಗಮಿಸಿ, ತರಬೇತಿಯ ಗುಣಮಟ್ಟವನ್ನು ಪರಿಶೀಲಿಸಿದ್ದಲ್ಲದೆ, ಅಧಿಕಾರಿಗಳ ಅನುಮಾನಗಳಿಗೆ ಸೂಕ್ತ ಸಲಹೆ ಹಾಗೂ ಸೂಚನೆಗಳನ್ನು ನೀಡುವ ಮೂಲಕ ಅವರಲ್ಲಿ ಆತ್ಮವಿಶ್ವಾಸ ತುಂಬಿದರು.

## ಇಡೀ ದೇಶವೇ ಆರ್‌ಎಸ್‌ಎಸ್ ಮೆಚ್ಚಿದೆ, ಕೇವಲ ಪ್ರಚಾರಕ್ಕಾಗಿ ಪ್ರಿಯಾಂಕ್ ಖರ್ಗೆ ಟೀಕೆ: ಸಂಸದ ಯದುವೀರ ಒಡೆಯರ್

**ಮೈಸೂರು, ಜೂ.10:** ದೇಶದ ಸಂಸ್ಕೃತಿ ರಕ್ಷಿಸುವ ಕೆಲಸವನ್ನು ಆರ್‌ಎಸ್‌ಎಸ್ ಮಾಡುತ್ತಿದೆ. ಇದನ್ನು ದೇಶದ ಜನರೇ ಮೆಚ್ಚಿಕೊಂಡಿದ್ದಾರೆ. ಈ ಬಗ್ಗೆ ಸಚಿವ ಪ್ರಿಯಾಂಕ್ ಖರ್ಗೆ ಕೇವಲ ಪ್ರಚಾರಕ್ಕಾಗಿ ಮಾತನಾಡುತ್ತಿದ್ದಾರೆ" ಎಂದು ಬಿಜೆಪಿ ಸಂಸದ ಯದುವೀರ್ ಒಡೆಯರ್ ಹೇಳಿದರು.



ನಗರದ ಬಿಜೆಪಿ ಕಚೇರಿಯಲ್ಲಿ ಬುಧವಾರ ಮಾತನಾಡಿದ ಅವರು, ನರೇಂದ್ರ ಮೋದಿಯವರು ಪ್ರಧಾನಿಯಾಗಿ 12 ವರ್ಷ ಸುದೀರ್ಘ ಸೇವೆ ಮಾಡಿದ್ದಾರೆ. ಈಗಲೂ ದೇಶದ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ವಿಕಸಿತ ಭಾರತ ನಿರ್ಮಾಣ ಮಾಡಲು ಮೋದಿ ಅಡಿಗಲ್ಲು ಹಾಕಿದರು. ಮೋದಿ ಪ್ರಧಾನಿಯಾಗುವ ಮೊದಲು ದೇಶದ ಆರ್ಥಿಕ ಪರಿಸ್ಥಿತಿ ಸರಿ ಇರಲಿಲ್ಲ. ಇದೀಗ ಆರ್ಥಿಕತೆಯಲ್ಲಿ ದೇಶ ಮುಂದಿದೆ. ವಿದೇಶಿ ಕಂಪನಿಗಳು ಭಾರತಕ್ಕೆ ಬರುತ್ತಿವೆ ಎಂದರು.

25 ಕೋಟಿ ಜನರು ಬಡತನ ರೇಖೆಯಿಂದ ಹೊರಬಂದಿದ್ದಾರೆ. ದೇಶಾದ್ಯಂತ ಬಡವರ ಸಂಖ್ಯೆ ಶೇ.29 ದಿಂದ ಶೇ.11ಕ್ಕೆ ಇಳಿಕೆಯಾಗಿದೆ. ಇದು ಮೋದಿ ಸರ್ಕಾರದ ಸಾಧನೆ. ಕಿಸಾನ್ ಸಮ್ಮಾನ್ ಯೋಜನೆಯ ಮೂಲಕ ಪ್ರತಿ ರೈತರ ಖಾತೆಗೆ ನೇರವಾಗಿ 6 ಸಾವಿರ ರೂ ಹಣ ಹೋಗುತ್ತಿದೆ. 4.5 ಲಕ್ಷ ಕೋಟಿ ಇದಕ್ಕೆ ವಿನಿಯೋಗ ಆಗುತ್ತಿದೆ. ಮಹಿಳೆಯರ ಸ್ವ ಸಹಾಯ ಗುಂಪುಗಳಿಗೆ ಸಾಲ ಸೌಲಭ್ಯ ನೀಡಲಾಗಿದೆ. ಯುವಕರಿಗೆ ಸ್ಕಿಲ್ ತರಬೇತಿ ಕೊಡಲಾಗುತ್ತಿದೆ. ದೇಶೀಯ ಗುಣಮಟ್ಟದ ಉತ್ಪನ್ನಗಳಿಗೆ ವಿದೇಶಗಳಿಂದ ಬೇಡಿಕೆ ಹೆಚ್ಚಿದೆ. ವಿಶ್ವಮಟ್ಟದಲ್ಲಿ ಭಾರತಕ್ಕೆ ದೊಡ್ಡ ಮಟ್ಟದ ಗೌರವ ಸಿಗುತ್ತಿದೆ. ಇದೆಲ್ಲವೂ ಕೂಡ ನರೇಂದ್ರ ಮೋದಿ ಸರ್ಕಾರದ ಸಾಧನೆಗಳು ಎಂದು ಹೇಳಿದರು.

ಅಯೋಧ್ಯೆಯಲ್ಲಿ ರಾಮ ಮಂದಿರ ನಿರ್ಮಾಣ ಮಾಡುವ ಮೂಲಕ ದೇಶದ ಜನರ ಕನಸನ್ನು ಮೋದಿ ನನಸು ಮಾಡಿದರು. ಈ ಮೂಲಕ 500 ವರ್ಷಗಳ ವಿವಾದವನ್ನು ಬಗೆಹರಿಸಿದರು.

ಯೋಗವನ್ನು ವಿಶ್ವಕ್ಕೆ ಪರಿಚಯಿಸುವ ನಿಟ್ಟಿನಲ್ಲಿ ಕೆಲಸ ಮಾಡಿದರು. ಡಿಜಿಟಲ್ ಇಂಡಿಯಾ, ಕ್ಯಾಶ್‌ಲೆಸ್ ಡಿಜಿಟಲ್ ವ್ಯವಸ್ಥೆ ಜಾರಿ ಮಾಡಿದರು. ಇದೆಲ್ಲವೂ ಮೋದಿ ಸರ್ಕಾರದ ಕೊಡುಗೆಯಾಗಿದೆ ಎಂದು ವಿವರಿಸಿದರು.

ದೇಶದಿಂದ ನಕ್ಸಲಿಸಂ ಕಿತ್ತು ಹಾಕಲಾಗಿದೆ. 370ನೇ ವಿಧಿಯನ್ನು ರದ್ದುಗೊಳಿಸುವ ಮೂಲಕ ಜಮ್ಮು–ಕಾಶ್ಮೀರದ ಸಮಸ್ಯೆಯನ್ನು ಬಗೆಹರಿಸಲಾಗಿದೆ. ದೇಶದಲ್ಲಿ ಇದೀಗ ಜನಗಣತಿ, ಜಾತಿಗಣತಿ ಆಗುತ್ತಿದೆ. ಅದಕ್ಕಾಗಿ ನಾವು ನರೇಂದ್ರ ಮೋದಿ ಅವರಿಗೆ ಧನ್ಯವಾದ ಸಲ್ಲಿಸುತ್ತೇವೆ. ಮೋದಿ ಅವರ ಆಶಯದಂತೆ ನಾವೂ ಕೂಡ ಕೆಲಸ ಮಾಡುತ್ತೇವೆ" ಎಂದು ತಿಳಿಸಿದರು.

ಈ ಹಿಂದೆ ಸಿಎಂ ಆಗಿದ್ದ ಸಿದ್ದರಾಮಯ್ಯನವರು ಬರೀ ಕೇಂದ್ರದ ಮೇಲೆ ಗೂಬೆ ಕೂರಿಸುವ ಕೆಲಸ ಮಾಡಿದರು. ನೂತನ ಸಿಎಂ ಡಿ.ಕೆ. ಶಿವಕುಮಾರ್ ಆದರೂ ಸಕಾರಾತ್ಮಕವಾಗಿ ಸ್ಪಂದಿಸಲಿ. ಸಿದ್ದರಾಮಯ್ಯನವರು ಜಿಎಸ್‌ಟಿ ಮಂಡಳಿಯ ಸಭೆಯಲ್ಲಿ ಭಾಗಿಯಾಗಲಿಲ್ಲ.

ಕಾವೇರಿ ಜಲ ವಿವಾದದ ವಿಚಾರದಲ್ಲೂ ಚಕಾರ ಎತ್ತಲಿಲ್ಲ. ಮೇಕೆದಾಟು ಯೋಜನೆ ವಿಚಾರದಲ್ಲಿ ತಮಿಳುನಾಡು ಸಿಎಂ ವಿಜಯ್ ಪ್ರಧಾನಿ ಮೋದಿಯವರನ್ನು ಭೇಟಿ ಮಾಡಿ ಮಾತುಕತೆ ನಡೆಸಿದ್ದಾರೆ. ಕಾವೇರಿ ನದಿ ನೀರಿನ ಹಂಚಿಕೆ ವಿಚಾರದಲ್ಲಿ ಮಳೆ ಪ್ರಮಾಣಕ್ಕೆ ತಕ್ಕಂತೆ ತಮಿಳುನಾಡಿಗೆ ನೀರು ಹರಿಸುವಂತಾಗಬೇಕು ಎಂದರು.

## ಟಿಟಿಡಿ ಅನ್ನಪ್ರಸಾದ ಟ್ರಸ್ಟಿಗೆ 10 ಲಕ್ಷ ರೂ. ದೇಣಿಗೆ ನೀಡಿದ ಮನ್ನೆಮ್ ವೆಂಕಟ ಶ್ರೀಕಾಂತ್



**ತಿರುಮಲ ಜೂನ್ 10**. ಹೈದರಾಬಾದ್‌ನ ಮನ್ನೆಮ್ ವೆಂಕಟ ಶ್ರೀಕಾಂತ್ ಎಂಬ ಭಕ್ತರು ಬುಧವಾರ ಟಿಟಿಡಿ ಶ್ರೀ ವೆಂಕಟೇಶ್ವರ ಅನ್ನ ಪ್ರಸಾದ ಟ್ರಸ್ಟ್‌ಗೆ 10 ಲಕ್ಷ ರೂ. ದೇಣಿಗೆ ನೀಡಿದ್ದಾರೆ.

ಈ ದೇಣಿಗೆ ಡಿಡಿಯನ್ನು ಟಿಟಿಡಿ ಅಧ್ಯಕ್ಷ ಬಿ.ಆರ್. ನಾಯ್ಡು ಅವರಿಗೆ ಹಸ್ತಾಂತರಿಸಲಾಯಿತು.

## ತಿರುಮಲ ದರ್ಶನದ ವಿವರ

ತಿರುಪತಿ, ಜೂ.10: 09–06–2026 ರಂದು 83,812 ಭಕ್ತರು ತಿರುಮಲ ತಿರುಪತಿ ವೆಂಕಟೇಶ್ವರನ ದರ್ಶನ ಪಡೆದಿದ್ದಾರೆ.



4.31 ಕೋಟಿ ರೂ ಕಾಣಿಕೆಗಳು ಹುಂಡಿಯಲ್ಲಿ ಲಭ್ಯವಾಗಿದೆ.

4.02 ಲಕ್ಷ ಲಡ್ಡುಗಳ ಮಾರಾಟವಾಗಿದೆ.

2.70 ಲಕ್ಷ ಜನ ಅನ್ನಪ್ರಸಾದವನ್ನು ವಿನಿಯೋಗಿಸಿದ್ದಾರೆ.

3,732 ಜನ ವೈದ್ಯಕೀಯ ಚಿಕಿತ್ಸೆಯನ್ನು ಪಡೆದಿದ್ದಾರೆ. ವೇಟಿಂಗ್ ಕಂಪಾರ್ಟ್‌ಮೆಂಟ್‌ಗಳು ಶಿಲಾ ತೋರಣಂ ಔಟ್ ಸೈಡ್ ಲೈನ್ ವರಗೆ ಇದೆ.

ಅಂದಾಜು ಸರ್ವದರ್ಶನಂ (ಎಸ್‌ಎಸ್‌ಡಿ ಟೋಕನ್‌ಗಳಿಲ್ಲದೆ) 15–18 ಗಂಟೆಗಳ ಸಮಯ ಆಗುತ್ತದೆ.

## ಟಿಎಂಸಿ ಸಂಸದರ ಬೆಂಬಲದ ನಂತರ ಬಿಜೆಪಿಗೆ ಮತ್ತಷ್ಟು ಬಲ

# ಮುಂದಿನ ಬಾರಿಯೂ ಗಂಗಾವತಿಯಿಂದಲೇ ಸ್ಪರ್ಧೆ: ಶಾಸಕ ಜನಾರ್ದನ ರೆಡ್ಡಿ

**ಬಳ್ಳಾರಿ, ಜೂ.10:** ಶಾಸಕ ಜನಾರ್ದನ ರೆಡ್ಡಿ ಅವರು ಬಳ್ಳಾರಿಯಲ್ಲಿಂದು ಸುದ್ದಿಗೋಷ್ಠಿ ನಡೆಸಿ ರಾಜ್ಯ ರಾಜಕೀಯ ಹಾಗೂ ಮುಂದಿನ ಚುನಾವಣಾ ಸ್ಪರ್ಧೆಯ ಕುರಿತು ಹಲವು ಪ್ರಮುಖ ವಿಷಯಗಳನ್ನು ಹಂಚಿಕೊಂಡಿದ್ದಾರೆ.

ದೇಶದಲ್ಲಿ ಕ್ಷೇತ್ರ ಮರುವಿಂಗಡಣೆ (ಡಿಲಿಮಿಟೇಷನ್) ಪ್ರಕ್ರಿಯೆ ನಡೆಯುವ ಸಾಧ್ಯತೆ ಇದ್ದು, ಟಿಎಂಸಿ ಸಂಸದರ ಬೆಂಬಲದ ಬಳಿಕ ಬಿಜೆಪಿಗೆ ಮತ್ತಷ್ಟು ಬಲ ಬಂದಿದೆ. ಇಂಡಿಯಾ ಒಕ್ಕೂಟದಿಂದ ಹೊರಬಂದು ಇನ್ನೂ ಹಲವರು ಬಿಜೆಪಿಗೆ ಬೆಂಬಲ ನೀಡಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. "ನಾನು ಮುಂದಿನ ಬಾರಿಯೂ ಗಂಗಾವತಿ ಕ್ಷೇತ್ರದಿಂದಲೇ ಸ್ಪರ್ಧೆ ಮಾಡುತ್ತೇನೆ, ಗಂಗಾವತಿ ಬಿಡುವ ಪ್ರಶ್ನೆಯೇ ಇಲ್ಲ. ಆದರೆ ನಾನು ಎಲ್ಲಿ ಸ್ಪರ್ಧಿಸಬೇಕು ಎಂಬುದನ್ನು ಅಂತಿಮವಾಗಿ ಪಕ್ಷವೇ ತೀರ್ಮಾನ ಮಾಡುತ್ತದೆ" ಎಂದರು.

ಕ್ಷೇತ್ರ ಮರುವಿಂಗಡಣೆ ಹಾಗೂ ಮಹಿಳಾ ಮೀಸಲಾತಿ ಜಾರಿಯಾಗುವುದನ್ನು ನೋಡಿಕೊಂಡು ಬಳ್ಳಾರಿ ನಗರ ಕ್ಷೇತ್ರದಿಂದ ನನ್ನ ಪತ್ನಿ ಅರುಣಾ ಲಕ್ಷ್ಮಿ ಸ್ಪರ್ಧಿಸುವ ಬಗ್ಗೆ ನಿರ್ಧಾರ ಮಾಡಲಾಗುತ್ತದೆ. ನಮ್ಮ ಕುಟುಂಬದಲ್ಲಿ ಯಾವುದೇ ಭಿನ್ನಾಭಿಪ್ರಾಯವಿಲ್ಲ. ಲಕ್ಷ್ಮಿ ಅರುಣಾ ಮತ್ತು ನನ್ನ ಸಹೋದರ ಸೋಮಶೇಖರ್ ರೆಡ್ಡಿ ಇಬ್ಬರೂ ಒಟ್ಟಾಗಿ ಕೆಲಸ ಮಾಡಲಿದ್ದಾರೆ" ಎಂದು ಗೊಂದಲಗಳಿಗೆ ತೆರೆ ಎಳೆದರು.

ಕಾಂಗ್ರೆಸ್ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದ ರೆಡ್ಡಿ, "ರಾಹುಲ್ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿ ದೇಶದ ಮಕ್ಕಳಿಗೆ ಕೇವಲ ಚಾಕೊಲೇಟ್ ಕೊಡಲು ಮಾತ್ರ ಲಾಯಕ್ಕು. ಆದರೆ ನರೇಂದ್ರ ಮೋದಿ ಅವರು ಜಗತ್ತೇ ಮೆಚ್ಚಿದ ನಾಯಕ. ಕೆಲ ಜೋಕರ್‌ಗಳ ಮಾತಿಗೆ ನಾನು ತಲೆಕೆಡಿಸಿಕೊಳ್ಳುವುದಿಲ್ಲ" ಎಂದರು.

ಇನ್ನು ದೇಶದಲ್ಲಿ ಬೆಲೆ ಏರಿಕೆಗೆ ಜಾಗತಿಕ ಯುದ್ಧಗಳೇ ಕಾರಣ, ಬೇರೆ ದೇಶಗಳಿಗೆ ಹೋಲಿಸಿದರೆ ಭಾರತದಲ್ಲಿ ಬೆಲೆ ಏರಿಕೆ ನಿಯಂತ್ರಣದಲ್ಲಿದೆ ಎಂದು ಸಮರ್ಥಿಸಿಕೊಂಡರು.

ಅಕ್ರಮ ಗಣಿಗಾರಿಕೆ ಪ್ರಕರಣಗಳ ಕುರಿತು ಮಾತನಾಡಿದ ಅವರು, "ನನ್ನ ಮೇಲಿದ್ದ ಬಹುತೇಕ ಪ್ರಕರಣಗಳಲ್ಲಿ ನಾನು ಖುಲಾಸೆಯಾಗಿದ್ದೇನೆ (ದೋಷಮುಕ್ತ). ಇನ್ನು ಕೇವಲ ಒಂದೆರಡು ಕೇಸ್ ಮಾತ್ರ ಬಾಕಿ ಇವೆ" ಎಂದರು.ನನ್ನ ಕಲ್ಯಾಣ ರಾಜ್ಯ ಪ್ರಗತಿ ಪಕ್ಷ



ಈಗಾಗಲೇ ಬಿಜೆಪಿಯಲ್ಲಿ ವಿಲೀನವಾಗಿದೆ. ಹೀಗಾಗಿ ಮುಂಬರುವ ವಿಧಾನ ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಗೇ ಮತ ಹಾಕುವುದಾಗಿ ಸ್ಪಷ್ಟಪಡಿಸಿದರು. ಇದೇ ವೇಳೆ, ಡಿಕೆ ಶಿವಕುಮಾರ್ ಅವರು ಒಳ್ಳೆಯ ಆಡಳಿತ ನೀಡಲಿ ಎಂದು ಹಾರೈಸಿದ ರೆಡ್ಡಿ, ಆದರೆ ಸರ್ಕಾರದಲ್ಲಿರುವ ಗೊಂದಲಗಳನ್ನು ಅವರು ಹೇಗೆ ನಿವಾರಿಸುತ್ತಾರೆ ಎಂಬುದನ್ನು ಕಾದು ನೋಡಬೇಕಿದೆ ಎಂದರು.


ಹೃತ್ಪೂರ್ವಕ ಅಭಿನಂದನೆಗಳು
ಮುಖ್ಯಮಂತ್ರಿ ಆದ ಬಳಿಕ
ಪ್ರಪ್ರಥಮ ಬಾರಿಗೆ ರಾಷ್ಟ್ರ ರಾಜಧಾನಿ
ನವದೆಹಲಿಗೆ ಆಗಮಿಸಿರುವ
ಶ್ರೀ ಡಿ.ಕೆ.ಶಿವಕುಮಾರ್
ಅವರಿಗೆ...
ಹಾರ್ದಿಕ ಸುಸ್ವಾಗತ
ಶುಭಕೋರುವವರು
ಕೆ.ಎಚ್.ಪಾಟೀಲ್
ಅಧ್ಯಕ್ಷರು, ಕರ್ನಾಟಕ ಯುವ
ಕಾಂಗ್ರೆಸ್, ಗದಗ ಜಿಲ್ಲೆ